

|| ಜೈ ಭೀಮ್ ||

ಅರುಣ್ ಕುಮಾರ್ .ಕೆ ಅವರ ಸಾರಥ್ಯದಲ್ಲಿ

# ವಾಯ್ಸ್ ಆಫ್ ಅರುಣ್

ಕನ್ನಡ ದಿನಪತ್ರಿಕೆ

ಇದು ಭ್ರಷ್ಟರ ವಿರುದ್ಧ

|| ನಮೋ ಬುದ್ಧಾಯ ||



VOICE OF ARUN KANNADA DAILY

PRGI : KARKAN/2022/82620

| ಸಂಪುಟ : 1 | ಶನಿವಾರ, ಮಾರ್ಚ್ 7, 2026 | ಪುಟ : 4 | ಬೆಲೆ 1.00 | ಸಂಚಿಕೆ : 179 |
|---|---|---|---|---|
| Volume : 1 | Saturday, March 7, 2026 | Pages : 4 | Rs. 1.00 | Issue : 179 |


# ಮೈಸೂರಿನಲ್ಲಿ ಏರೋಸ್ಪೇಸ್, ಕಲಬುರಗಿಯಲ್ಲಿ ಸಿಲ್ಕ್ ಪಾರ್ಕ್: 2026ರ ಬಜೆಟ್‌ನಲ್ಲಿ ಘೋಷಣೆಯಾದ ಹೊಸ ಯೋಜನೆಗಳಿವು!

ಬೆಂಗಳೂರು: ಸಿಎಂ ಸಿದ್ದರಾಮಯ್ಯ ಇಂದು 2026–27ನೇ ಸಾಲಿನ ಬಜೆಟ್ ಮಂಡಿಸಿದ್ದು, ಇದು ಸಿದ್ದರಾಮಯ್ಯ ಮಂಡಿಸಿದ 17ನೇ ದಾಖಲೆಯ ಬಜೆಟ್ ಆಗಿದೆ. ಈ ಬಜೆಟ್ ಬಾರಿ ಬಜೆಟ್‌ನಲ್ಲಿ ರಾಜ್ಯಕ್ಕೆ ಹಲವು ಹೊಸ ಯೋಜನೆಗಳನ್ನು ಘೋಷಿಸಿದ್ದು ಅದರ ಮಾಹಿತಿ ಇಂತಿದೆ.

**ಮುಖ್ಯಮಂತ್ರಿ ಕೃಷಿ ವಿಸ್ತಾರ:** ಉತ್ಪಾದನೋತ್ತರ ಕೃಷಿ ಚಟುವಟಿಕೆಗಳಾದ ಸಂಸ್ಕರಣೆ, ಮೌಲ್ಯವರ್ಧನೆ, ಮೌಲ್ಯ ಸರಪಳಿ ಅಭಿವೃದ್ಧಿ, ಕೃಷಿ ತ್ಯಾಜ್ಯಗಳ ಮರುಬಳಕೆ ಹಾಗೂ ಮಾರುಕಟ್ಟೆ ಸಂಪರ್ಕಗಳನ್ನು ಸಮಗ್ರವಾಗಿ ಬಲಪಡಿಸುವ ಮೂಲಕ ಗ್ರಾಮೀಣ ರೈತರಿಗೆ ಸ್ಥಿರ ಮತ್ತು ಹೆಚ್ಚುವರಿ ಆದಾಯದ ಮೂಲಗಳನ್ನು ಸೃಜಿಸುವ ಉದ್ದೇಶದಿಂದ ಮುಖ್ಯ ಮಂತ್ರಿ ಕೃಷಿ ವಿಸ್ತಾರ ಯೋಜನೆ ಯನ್ನು ಮುಂದಿನ ಮೂರು ವರ್ಷಗಳಲ್ಲಿ 100 ಕೋಟಿ ರೂ ವೆಚ್ಚದಲ್ಲಿ ಅನುಷ್ಠಾನಗೊಳಿಸ ಲಾಗುವುದು.

**ಮಿಲೆಟ್ ಹಬ್:** ಸಿರಿಧಾನ್ಯ ಮತ್ತು ಸಾವಯವ ಉತ್ಪನ್ನಗಳಿಗೆ ಉತ್ತೇಜಿಸಲು 'ಮಿಲೆಟ್ ಹಬ್' ಅನ್ನು ಸ್ಥಾಪನೆ ಮಾಡಲಾಗುವುದು. ಇದರ ಮೂಲಕ ತಾಂತ್ರಿಕ ಸಹಾಯ ಸಂಸ್ಕರಣಾ ಸೌಲಭ್ಯ, ಗುಣಮಟ್ಟ ಪ್ರಮಾಣೀಕರಣ ಮತ್ತು ಮಾರುಕಟ್ಟೆ ಸಂಪರ್ಕಗಳನ್ನು ಒಂದೇ ಸೂರಿನಡಿ ಕಲ್ಪಿಸಲಾಗುವುದು.

**ವಸುಧಾಮೃತ:** ಮಣ್ಣಿನ ಸಾವಯವ ಇಂಗಾಲ ಹಾಗೂ ಅದರ ಭೌತಿಕ, ರಾಸಾಯನಿಕ ಮತ್ತು ಜೈವಿಕ ಗುಣಮಟ್ಟವನ್ನು ಹೆಚ್ಚಿಸುವ ಮೂಲಕ ಪರಿಸರ ಸ್ನೇಹಿ ಮತ್ತು ಸುಸ್ಥಿರ ಕೃಷಿ ಪದ್ಧತಿಗಳನ್ನು ಉತ್ತೇಜಿಸಲು ವಸುಧಾಮೃತ ಕಾರ್ಯಕ್ರಮವನ್ನು ಮುಂದಿನ ಮೂರು ವರ್ಷಗಳಲ್ಲಿ ಜಾರಿಗೊಳಿಸಲಾಗುವುದು.

**ರೈತ ಮಾಲ್:** ರೈತರಿಗೆ ಉತ್ತಮ ಗುಣಮಟ್ಟದ ಕೃಷಿ ಪರಿಕರಗಳನ್ನು ಕೈಗೆಟುಕುವ ದರದಲ್ಲಿ ಲಭ್ಯವಾಗಿಸುವುದರ ಉದ್ದೇಶದಿಂದ ಬಿತ್ತನೆ ಬೀಜಗಳು, ಕೀಟನಾಶಕಗಳು, ರಸಗೊಬ್ಬರಗಳು ಹಾಗೂ ಕೃಷಿ ಯಂತ್ರೋಪಕರಣಗಳು ಒಂದೇ ಸೂರಿನಡಿ ದೊರಕಿಸಲು ಪ್ರಾಯೋಗಿಕವಾಗಿ ಕೋಲಾರ ಜಿಲ್ಲೆಯ ಪ್ರತಿಯೊಂದು ತಾಲ್ಲೂಕಿನಲ್ಲಿ ಎಂಎಸ್‌ಐಎಲ್ ವತಿಯಿಂದ 'ರೈತ ಮಾಲ್'ಗಳನ್ನು ಸ್ಥಾಪಿಸಲಾಗುವುದು

**ಪಾಂಡವಪುರ ಸಾವಯವ ತಾಲ್ಲೂಕು:** ಮಂಡ್ಯ ಜಿಲ್ಲೆಯ ಪಾಂಡವಪುರ ತಾಲ್ಲೂಕನ್ನು ಸಂಪೂರ್ಣ ಸಾವಯವ ತಾಲೂಕನ್ನಾಗಿ ಪರಿವರ್ತಿಸಲು ಅಧಿಕೃತ ಸಾವಯವ ಪ್ರಮಾಣೀಕರಣ ವ್ಯವಸ್ಥೆಯನ್ನು ಜಾರಿಗೆ ತರಲಾಗುವುದು

**ಸಿಲ್ಕ್ ಪಾರ್ಕ್:** ರಾಮನಗರ, ಶಿಡ್ಲಘಟ್ಟ, ಹಾವೇರಿ, ತಾಂಡವಪುರ (ಮೈಸೂರು) ಹಾಗೂ ಕಲಬುರಗಿಯಲ್ಲಿ ಸಿಲ್ಕ್ ಪಾರ್ಕ್‌ಗಳ ಸ್ಥಾಪನೆ.

**ವರ್ಷಕ್ಕೊಂದು ಕರು:** ಜಾನುವಾರುಗಳ ಸಂತಾನೋತ್ಪತ್ತಿ ಸಮಸ್ಯೆಗಳನ್ನು ನಿವಾರಿಸಲು ವರ್ಷ ಕ್ಕೊಂದು ಕರು ಎಂಬ ಘೋಷವಾಕ್ಯದೊಂದಿಗೆ ರಾಜ್ಯದ 1,000 ಗ್ರಾಮ ಪಂಚಾಯಿತಿಗಳಲ್ಲಿ ಫಲಧಾರೆ ಶಿಬಿರಗಳನ್ನು ಐದು ಕೋಟಿ ರೂ. ವೆಚ್ಚದಲ್ಲಿ ಏರ್ಪಡಿಸಲಾಗುವುದು. ಮೈಸೂರಿನಲ್ಲಿ ಬೋಯರ್ ಮೇಕೆ ತಳಿ ಸಂವರ್ಧನಾ ಕೇಂದ್ರವನ್ನು ಸ್ಥಾಪಿಸಲಾಗುವುದು.

**ಶ್ವಾನ ನಿಯಂತ್ರಣ ತರಬೇತಿ ಕೇಂದ್ರ:** ಬೆಂಗಳೂರು ಹಾಗೂ ಬೀದರ್ ನಲ್ಲಿ ಶ್ವಾನ ಸಂತಾನ ನಿಯಂತ್ರಣ ತರಬೇತಿ ಕೇಂದ್ರವನ್ನು ಸ್ಥಾಪಿಸಲಾಗುವುದು

**ಅಕ್ಕಪಡೆ ಯೋಜನೆ:** ಮಹಿಳೆಯರು ಹಾಗೂ ಮಕ್ಕಳಿಗೆ ಸಂಕಷ್ಟದ ಸಂದರ್ಭದಲ್ಲಿ ತಕ್ಷಣದ ರಕ್ಷಣೆ ನೀಡುವ ಉದ್ದೇಶದಿಂದ ಅಕ್ಕಪಡೆ ಯೋಜನೆಯನ್ನು ಗೃಹ ಇಲಾಖೆಯ ಸಹಯೋಗದೊಂದಿಗೆ ಎಲ್ಲಾ ಜಿಲ್ಲೆಗಳಲ್ಲಿ ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗಿ

**ಬೌದ್ಧ ಅಭಿವೃದ್ಧಿ ನಿಗಮ:** ಸಮಾಜ ಕಲ್ಯಾಣ ಇಲಾಖೆಯಡಿ ಬೌದ್ಧ ಅಭಿವೃದ್ಧಿ ನಿಗಮವನ್ನು ಸ್ಥಾಪಿಸಲಾಗುವುದು. ಹಾಗೇ ಬೌದ್ಧ ಧಮ್ಮಚಾರಿಗಳಿಗೆ ಮಾಸಿಕ 6,000 ಗೌರವಧನ ನೀಡಲಾಗುವುದು.

**ಕರ್ನಾಟಕ ಆದಿವಾಸಿ ಅಭಿವೃದ್ಧಿ ನಿಗಮ:** ಅರಣ್ಯ ಮತ್ತು ಅರಣ್ಯದಂಚಿನಲ್ಲಿ ವಾಸಿಸುತ್ತಿರುವ ಇರುಳ, ಸೋಲಿಗ, ಜೇನುಕುರುಬ, ಕಾಡುಕುರುಬ, ಕುಡಿಯ, ಸಿದ್ದಿ ಮತ್ತು ಇತರೆ ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ ಪರಿಶಿಷ್ಟ ಪಂಗಡದ ಪಿವಿಟಿಜಿಗಳಿಗೆ ಕರ್ನಾಟಕ ಆದಿವಾಸಿ ಅಭಿವೃದ್ಧಿ ನಿಗಮವನ್ನು ಸ್ಥಾಪಿಸಲಾಗುವುದು.

**ಕಾಯಕ ಭಾಗ್ಯ:** ವಿವಿಧ ವರ್ಗಗಳ ಅಸಂಘಟಿತ ಕಾರ್ಮಿಕರಿಗೆ ಕೌಶಲ್ಯಾಧಾರಿತ ಉದ್ಯೋಗ ದೊರಕಿಸಿಕೊಡುವ ಉದ್ದೇಶದಿಂದ ಆನ್‌ಲೈನ್ ಉದ್ಯೋಗ ವಿನಿಮಯ ಕೇಂದ್ರವನ್ನು ಸ್ಥಾಪಿಸುವ ಕಾಯಕ ಭಾಗ್ಯ ಎಂಬ ಯೋಜನೆಯನ್ನು ಐದು ಕೋಟಿ ರೂ. ವೆಚ್ಚದಲ್ಲಿ ಜಾರಿಗೆ ತರಲಾಗುವುದು.

**ಕೆ ಕ್ವೆಸ್ಟ್:** ರಾಜ್ಯದಲ್ಲಿರುವ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳು, ಕೆಜಿಟಿಟಿಐಗಳು, ಕೆಎಸ್‌ಡಿಎ ಮತ್ತು ಜೆಟಿಎಸ್‌ಗಳ ಮೂಲಭೂತ ಸೌಕರ್ಯ ಮತ್ತು ತರಬೇತಿ ಗುಣಮಟ್ಟವನ್ನು ಹೆಚ್ಚಿಸಲು ADB ಸಹಭಾಗಿತ್ವದಲ್ಲಿ ಒಟ್ಟು 1,386 ಕೋಟಿ ರೂ.ಗಳ ಐದು ವರ್ಷಗಳ ಅವಧಿಯ "K-QUEST"ಯೋಜನೆಯನ್ನು ಜಾರಿಗೊಳಿಸಲಾಗುವುದು.

**ಜನರ ಯೋಜನೆ:** ಗ್ರಾಮ ಮಟ್ಟದಿಂದ ಯೋಜನೆಗಳನ್ನು ಸಿದ್ಧಪಡಿಸಲು 26 ಜಿಲ್ಲೆಗಳಲ್ಲಿ ಜಿಲ್ಲಾ ಯೋಜನಾ ಸಮಿತಿಗಳನ್ನು ರಚಿಸಿದ್ದು, ಜನರ ಯೋಜನೆಯನ್ನು ರೂಪಿಸಲಾಗುವುದು.

**ಮಿಯಾವಾಕಿ ಪಾರ್ಕ್:** ನಗರ ಪ್ರದೇಶಗಳ ಆಯ್ದ ಜಾಗಗಳಲ್ಲಿ ಸ್ಥಳೀಯ ಸಸ್ಯಗಳನ್ನು ದಟ್ಟವಾಗಿ ನೆಟ್ಟು ನೈಸರ್ಗಿಕ ಹಸಿರು ಪ್ರದೇಶಗಳನ್ನಾಗಿಸಲು 100 'ಮಿಯಾವಾಕಿ ಪಾರ್ಕ್ ಗಳನ್ನು ನಿರ್ಮಿಸಲಾಗುವುದು.

**ಮುಖ್ಯಮಂತ್ರಿ ಸೌರ ಕೃಷಿ ಯೋಜನೆ:** ಪ್ರಸಕ್ತ ಸಾಲಿನಲ್ಲಿ ರಾಜ್ಯ ಸರ್ಕಾರವು ಮುಖ್ಯಮಂತ್ರಿ ಸೌರ ಕೃಷಿ ಯೋಜನೆ ಎಂಬ ಹೊಸ ಯೋಜನ 'ಯನ್ನು KUSUM-C ಮಾದರಿಯಲ್ಲಿ ಜಾರಿಗೆ ತರಲಿದೆ. ಈ ಯೋಜನೆಯಡಿ ಕೆಪಿಟಿಸಿಎಲ್ ಉಪ ಕೇಂದ್ರಗಳಲ್ಲಿ Ren ewable Energy Service Company (RESCO) ಮಾದರಿಯಲ್ಲಿ ಅಂದಾಜು 10,500 ಕೋಟಿ ರೂ. ವೆಚ್ಚದಲ್ಲಿ 3,000 ಮೆಗಾವ್ಯಾಟ್ ಕ್ಷಮತೆಯ ಸೌರ ವಿದ್ಯುತ್ ಸ್ಥಾವರಗಳನ್ನು ಪ್ರಾರಂಭಿಸಲಾ ಗುವುದು.

**ಲಾಜಿಸ್ಟಿಕ್ಸ್ ನೀತಿ:** ಬಂದರುಗಳು ಮತ್ತು ಸರಕು ಸಾಗಾಣಿಕೆ ವಲಯದ ಅಭಿವೃದ್ಧಿಗಾಗಿ ಸಮಗ್ರ ಮಲ್ಟಿಮೋಡಲ್ ಲಾಜಿಸ್ಟಿಕ್ಸ್ ನೀತಿ ಅನ್ನು ರೂಪಿಸಲಾಗುವುದು. ಪಂಜರ ಮೀನು ಸಾಕಾಣಿಕೆ, ನವೀಕರಿ ಸಬಹುದಾದ ಇಂಧನ ಉತ್ಪಾದನೆಗೆ ಸಂಬಂಧಿತ ಅವಕಾಶಗಳನ್ನು ಸದುಪಯೋಗಪಡಿಸಿಕೊಳ್ಳಲು 'ಕರ್ನಾಟಕ ರಾಜ್ಯ ಆಫ್ ಶೋರ್ ಸಂಪನ್ಮೂಲ ಅಭಿವೃದ್ಧಿ ಮತ್ತು ಬಳಕೆ ನೀತಿ ಅನ್ನು ರೂಪಿಸಲಾಗುವುದು.

**ಏರೋಸ್ಪೇಸ್ ಪಾರ್ಕ್:** ಕೆಐಎಡಿಬಿ ಏರೋಸ್ಪೇಸ್ ಪಾರ್ಕ್‌ನಲ್ಲಿ ಏರೋಸ್ಪೇಸ್ ಕಾಮನ್ ಫೆಸಿಲಿಟಿ ಸೆಂಟರ್ ಅನ್ನು 30 ಕೋಟಿ ರೂ.ಗಳ ವೆಚ್ಚದಲ್ಲಿ ಸ್ಥಾಪಿಸಲಾಗುವುದು. ಮೈಸೂರಿನಲ್ಲಿ ಏರೋಸ್ಪೇಸ್ ಕೈಗಾರಿಕೆ ಗಳನ್ನು ಉತ್ತೇಜಿಸಲು ಮೈಸೂರು ವಿಮಾನ ನಿಲ್ದಾಣದ ಹತ್ತಿರದಲ್ಲಿ ಏರೋಸ್ಪೇಸ್ ಪಾರ್ಕ್ ಅನ್ನು ಕೆಐಎಡಿಪಿ ವತಿಯಿಂದ ಅಭಿವೃದ್ಧಿಪಡಿಸ ಲಾಗುವುದು

**ವಿಜ್ಞಾನ ನಗರ:** ಬೆಂಗಳೂರಿನ ಆದಿನಾರಾಯಣ ಹೊಸಹಳ್ಳಿಯಲ್ಲಿ ಅತ್ಯಾಧುನಿಕ ಸೌಲಭ್ಯವುಳ್ಳ ವಿಜ್ಞಾನ ನಗರ ವನ್ನು233 ಕೋಟಿ ರೂ. ವೆಚ್ಚದಲ್ಲಿ ಸ್ಥಾಪಿಸಲು ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ ಕೇಂದ್ರ ಸರ್ಕಾರಕ್ಕೆ ಸಲ್ಲಿಸಿದ್ದು, ಇದಕ್ಕೆ ಅನುಮೋದನೆ ದೊರೆತ ನಂತರ ವಾಸ್ತುವಿನ್ಯಾಸ ತಯಾರಿಸಲು ಕ್ರಮಕೈಗೊಳ್ಳಲಾಗುವುದು.

ಮೈಸೂರಿನಲ್ಲಿ ಉದ್ಯಮಿಗಳಿಗೆ ಇನ್ಕ್ಯುಬೇಸನ್ ಸೌಲಭ್ಯಗಳನ್ನು ಒದಗಿಸಲು ಕಿಯೋನಿಕ್ಸ್ ಸಂಸ್ಥೆಯ ಮೂಲಕ ಪ್ಲಗ್ ಅಂಡ್ ಪ್ಲೇ ಸೌಲಭ್ಯದ ಲೀಪ್ ಲ್ಯಾಬ್ಸ್ ಸ್ಥಾಪನೆ. ಮೈಸೂರಿನಲ್ಲಿ ಷ್ನೈಡರ್ ಎಲೆಕ್ಟ್ರಿಕ್ ಯೂತ್ ಇಂಪ್ಯಾಕ್ಟ್ ಕೇಂದ್ರ ಸ್ಥಾಪನೆ

**ಕಯಾಕಿಂಗ್ ಕೇಂದ್ರ:** ಬೆಂಗಳೂರಿನ ಹೆಸರಘಟ್ಟ ಕೆರೆಯಲ್ಲಿ ಪಿಪಿಪಿ ಮಾದರಿಯಲ್ಲಿ ಕಯಾಕಿಂಗ್, ಕ್ಯಾನೋಯಿಂಗ್ ಶ್ರೇಷ್ಠತಾ ಕೇಂದ್ರ ಸ್ಥಾಪನೆ ಮಾಡಲಾಗುವುದು.

**ಮಹಾತ್ಮಾ ಗಾಂಧಿ ಜನ ಶಿಕ್ಷಣ ಕೇಂದ್ರ :** ರಾಷ್ಟ್ರಪಿತ ಮಹಾತ್ಮಾ ಗಾಂಧೀಜಿಯವರ ವಿಚಾರಧಾರೆಗಳನ್ನು ಯುವಜನರಿಗೆ ತಿಳಿಸಲು ಮತ್ತು ಜಿಲ್ಲಾ ಗಾಂಧಿ ಭವನಗಳನ್ನು ಪುನಃಶ್ಚೇತನಗೊಳಿಸಲು 'ಮಹಾತ್ಮಾ ಗಾಂಧಿ ಜನ ಶಿಕ್ಷಣ ಕೇಂದ್ರ ಯೋಜನೆಯನ್ನು ರೂಪಿಸಿ ಜಾರಿಗೊಳಿಸಲಾಗುವುದು.

# ಅಯೋಧ್ಯೆಯಲ್ಲಿ 35 ಕೋಟಿ ರೂ. ಗೆ 2.67 ಎಕರೆ ಜಮೀನು ಖರೀದಿಸಿದ ಬಿಗ್ ಬಿ!



ಅಯೋಧ್ಯೆ: ಭಾರತೀಯ ಚಿತ್ರರಂಗದ ದಂತಕಥೆ, ಬಿಗ್ ಬಿ ಅಮಿತಾಬ್ ಬಚ್ಚನ್ ಉತ್ತರ ಪ್ರದೇಶದ ಅಯೋಧ್ಯೆಯಲ್ಲಿ ಭೂಮಿ ಖರೀದಿಸಿದ್ದಾರೆ.

ಹೌದು. ರಿಯಲ್ ಎಸ್ಟೇಟ್ ಸಂಸ್ಥೆ ಹೌಸ್ ಆಫ್ ಅಭಿನಂದನ್ ಲೋಧಾ (HoABL)ದಿಂದ 35 ಕೋಟಿ ರೂ.ಗೆ 2.67 ಎಕರೆ ಭೂಮಿಯನ್ನು ಖರೀದಿಸಿದ್ದಾರೆ. ಎಬಿ ಕಾರ್ಪ್ ಲಿಮಿಟೆಡ್‌ನ ವ್ಯವಸ್ಥಾಪಕ ನಿರ್ದೇಶಕ ರಾಜೇಶ್ ಯಾದವ್ ಅವರ ನೇತೃತ್ವದಲ್ಲಿ ಶುಕ್ರವಾರ ವ್ಯವಹಾರ ನಡೆದಿದೆ ಎಂದು HoABL ಹೇಳಿಕೆಯಲ್ಲಿ ತಿಳಿಸಿದೆ.

HoABLನ 75–ಎಕರೆ ಲಕ್ಸುರಿ ಭೂ ಅಭಿವೃದ್ಧಿ ಪ್ರದೇಶವಾದ 'ದಿ ಸರಯು' ಬಳಿ ಈ ಜಮೀನು ಇದೆ.

ಈ ಹಿಂದೆ ಜನವರಿ 2024ರಲ್ಲಿ ಬಚ್ಚನ್ ಅವರು HoABL ಪ್ರಾಜೆಕ್ಟ್ ನ 'ದಿ ಸರಯು' ನಲ್ಲಿ ಭೂಮಿಯನ್ನು ಖರೀದಿಸಿದ್ದರು. ಈಗ HoABL ಮೂಲಕ ಮತ್ತೆ ಎರಡು ಎಕರೆ ಜಮೀನು ಖರೀಸಿದ್ದಾರೆ. ಇದು ಅಯೋಧ್ಯೆ ಯಲ್ಲಿ ಬಚ್ಚನ್ ಅವರ ಮೂರನೇ ಹಾಗೂ ಒಟ್ಟಾರೇ ನಾಲ್ಕನೇ ಹೂಡಿಕೆಯಾಗಿದೆ.

ಅಮಿತ್ ಬಚ್ಚನ್ ಅವರು, 10,000 ಚದರ ಅಡಿ ಪ್ಲಾಟ್ ಸ್ವಾಧೀನದ ಮೂಲಕ HoABL ನ 'ಸೋಲ್ ಡಿ ಅಲಿಬಾಗ್' ಯೋಜನೆಯ ಲ್ಲಿಯೂ ಹೂಡಿಕೆ ಮಾಡಿದ್ದರು. ಪೀಳಿಗೆಯ ಆಸ್ತಿಯಾಗಿ ಬಚ್ಚನ್ ಹೂಡಿಕೆ ಮಾಡಿದ್ದು, ಈ ಭೂಮಿಗೆ ಮುಂಬರುವ ವರ್ಷಗಳಲ್ಲಿ ಉತ್ತಮ ಬೆಲೆ ಬರಲಿದೆ. ಅಯೋಧ್ಯೆ ಮೇಲೆ ತಲೆ ತಲೆಮಾರುಗಳಿಂದ ನಂಬಿಕೆ ಇರುವುದಾಗಿ HoABLನ ಅಧ್ಯಕ್ಷ ಅಭಿನಂದನ್ ಲೋಧಾ ತಿಳಿಸಿದ್ದಾರೆ.

# ಮದ್ಯ ಪ್ರಿಯರಿಗೆ ಸುಂಕದ ಶಾಕ್:

## ಮದ್ಯದಲ್ಲಿರುವ ಆಲ್ಕೋಹಾಲ್ ಅಂಶ ಆಧರಿಸಿ ತೆರಿಗೆ, 45000 ಕೋಟಿ ಸಂಗ್ರಹದ ಗುರಿ!

ಬೆಂಗಳೂರು: ಸಿಎಂ ಸಿದ್ದರಾಮಯ್ಯ ದಾಖಲೆಯ 17ನೇ ಬಾರಿಗೆ ಬಜೆಟ್ ಮಂಡಿಸುತ್ತಿದ್ದು ಮದ್ಯ ಪ್ರಿಯರಿಗೆ ಸುಂಕದ ಶಾಕ್ ನೀಡಿದ್ದಾರೆ. ಮದ್ಯದ ಮೇಲೆ ವಿಧಿಸುವ ತೆರಿಗೆಯ ಸ್ವರೂಪವನ್ನು ಬದಲಾಯಿಸುವ ಮೂಲಕ ರಾಜ್ಯದ ರಾಜಸ್ವ ಸಂಗ್ರಹವನ್ನು ಗಣನೀಯವಾಗಿ ಏರಿಕೆ ಮಾಡಲು ನಿರ್ಧರಿಸಿದ್ದಾರೆ. ಮದ್ಯದಲ್ಲಿರುವ ಆಲ್ಕೋಹಾಲ್ ಅಂಶ ಆಧರಿಸಿ ತೆರಿಗೆ ವಿಧಿಸಲಾಗುವುದು. ಎಕ್ಸ್–ಫ್ಯಾಕ್ಟರಿ ದರಪಟ್ಟಿಯ ಆಧಾರದ ಮೇಲೆ ಮದ್ಯದ ಬೆಲೆಯನ್ನು ಒಂದೇ ಬಾರಿಗೆ ಏರಿಸುವ ಬದಲು ಹಂತ ಹಂತವಾಗಿ ಹೆಚ್ಚಿಸಲು ಸರ್ಕಾರ ನಿರ್ಧರಿಸಿದೆ. 2026–27ರ ವೇಳೆಗೆ 45,000 ಕೋಟಿ ರೂ. ರಾಜಸ್ವ ಸಂಗ್ರಹಿಸುವ ಗುರಿ ಹೊಂದಲಾಗಿದೆ.

ಮದ್ಯಪಾನದ ದುಷ್ಪರಿಣಾಮಗಳು ಸಮಾಜದ ಮೇಲೆ ಉಂಟುಮಾಡುವ ಹಾನಿಯನ್ನು ಗಮನದಲ್ಲಿಟ್ಟುಕೊಂಡು ಜಾಗತಿಕ ಮಟ್ಟದಲ್ಲಿ ಮದ್ಯದ ಅಂಶಗಳನ್ನು (Alcohol-in-Beverage - AIB) ಆಧರಿಸಿದ ತೆರಿಗೆ ಪದ್ಧತಿಯು gold standard ಆಗಿದೆ. ಏಪ್ರಿಲ್ 2026ರಿಂದ ಪಾನೀಯಗಳಲ್ಲಿ ಇರುವ ಮದ್ಯದ ಅಂಶವನ್ನು ಆಧಾರವಾಗಿಟ್ಟುಕೊಂಡು ಅಬಕಾರಿ ಸುಂಕ ವ್ಯವಸ್ಥೆಯನ್ನು ಜಾರಿಗೆ ತರಲು ತೀರ್ಮಾನಿಸಲಾಗಿದೆ. ಅಬಕಾರಿ ಸುಂಕ ಏಕರೂಪವಾಗಿರಲಿದೆ. ಮುಂದಿನ ಮೂರರಿಂದ ನಾಲ್ಕು ವರ್ಷಗಳಲ್ಲಿ, ಎಲ್ಲಾ ಪಾನೀಯಗಳ ಮೇಲೆ ಏಕರೂಪವಾಗಿ ಅನ್ವಯಿಸುವಂತೆ ಪ್ರತಿ ಲೀಟರ್‌ನಲ್ಲಿ ಮದ್ಯದ ಅಂಶವನ್ನು ಆಧರಿಸಿ ಅಬಕಾರಿ ಸುಂಕ ವಿಧಿಸುವ ಪ್ರಕ್ರಿಯೆಗೆ ಹಂತ ಹಂತವಾಗಿ ಪರಿವರ್ತನೆಗೊಳ್ಳಲಿದೆ ಎಂದು ಬಜೆಟ್‌ನಲ್ಲಿ ಘೋಷಿಸಲಾಗಿದೆ.

ಮಾರುಕಟ್ಟೆ ಪರಿಗಣನೆ ಆಧಾರದ ಮೇಲೆ ಮದ್ಯ ಉತ್ಪನ್ನಗಳನ್ನು ಸ್ಲ್ಯಾಬ್‌ಗಳಲ್ಲಿ ಇರಿಸುವ



ಅಧಿಕಾರವನ್ನು ಸಂಪೂರ್ಣವಾಗಿ ಉತ್ಪಾದಕರಿಗೆ ನೀಡಲಾಗುವುದು. ಮದ್ಯ ದರ ನಿಗದಿ ಸ್ಲ್ಯಾಬ್‌ಗಳನ್ನು ತರ್ಕಬದ್ಧಗೊಳಿಸುವ ಸಲುವಾಗಿ ಪ್ರಸ್ತುತ ಇರುವ 16 ಸ್ಲ್ಯಾಬ್‌ಗಳನ್ನು 8 ಫ್ಲ್ಯಾಬ್‌ಗಳಿಗೆ ಇಳಿಸಲು ತೀರ್ಮಾನಿಸಲಾಗಿದೆ. 2025–26ನೇ ಸಾಲಿನಲ್ಲಿ ಫೆಬ್ರವರಿ ತಿಂಗಳ ಅಂತ್ಯದವರೆಗೆ ಮದ್ಯದಿಂದ ಒಟ್ಟು 36,492 ಕೋಟಿ ರೂಪಾಯಿ ಸಂಗ್ರಹಿಸಿದೆ. ಕಳೆದ ಸಾಲಿಗೆ ಹೋಲಿಸಿದರೆ ಶೇ.12.7 ರಷ್ಟು ಬೆಳವಣಿಗೆಯಾಗಿದೆ. 2026–27 ಸಾಲಿಗೆ 45,000 ಕೋಟಿ ರೂ. ಸಂಗ್ರಹದ ಗುರಿ ಇಡಲಾಗಿದೆ.

ತೆರಿಗೆ ಸೋರಿಕೆಯನ್ನು ತಡೆಯಲು ತಂತ್ರಜ್ಞಾನ ಆಧಾರಿತ ಬ್ಲಾಕ್‌ಚೈನ್ ಡಿಜಿಟಲ್ ಟ್ರ್ಯಾಕಿಂಗ್ ವ್ಯವಸ್ಥೆಗಳನ್ನು ಜಾರಿಗೆ ತರಲಾಗುತ್ತದೆ. ಮದ್ಯ ರವಾನೆಗೆ ಬೆಂಗಾವಲು ವ್ಯವಸ್ಥೆಯ ಬದಲಿಗೆ ಜಿಯೋ–ಫೆನ್ಸ್ ಇ–ಲಾಕ್ ವ್ಯವಸ್ಥೆಯನ್ನು ಅಳವಡಿಸಲಾಗುತ್ತದೆ. ಈ ಕ್ರಮಗಳು ಮೇಲ್ವಿಚಾರಣೆಗೆ ಅವಕಾಶ ಕಲ್ಪಿಸುವ ಮೂಲಕ ಪಾರದರ್ಶಕತೆಯನ್ನು ಹೆಚ್ಚಿಸಲಿದೆ.

# ಕನ್ನಡಿಗರಿಗೆ ಖಾಲಿ ಚೊಂಬು ಕೊಟ್ಟ ಕಾಂಗ್ರೆಸ್ ಸರ್ಕಾರ: ಬಜೆಟ್ ವಿರುದ್ಧ ಬಿಜೆಪಿ ಪ್ರತಿಭಟನೆ




ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶುಕ್ರವಾರ 2026–27ನೇ ಸಾಲಿನ ಬಜೆಟ್ ಮಂಡಿಸಿದ್ದು, ಕಾಂಗ್ರೆಸ್ ಸರ್ಕಾರ ರಾಜ್ಯದ ಜನತೆಗೆ ಖಾಲಿ ಚೊಂಬು ಕೊಟ್ಟಿದೆ ಎಂದು ಪ್ರತಿಪಕ್ಷ ಬಿಜೆಪಿ ಕಿಡಿ ಕಾರಿದೆ. ಸಿಎಂ ಸಿದ್ದರಾಮಯ್ಯ ಅವರು ಇಂದು ವಿಧಾನಸಭೆಯಲ್ಲಿ ದಾಖಲೆಯ 17ನೇ ಬಾರಿ ಬಜೆಟ್ ಮಂಡಿಸಿದರು. ಆದರೆ ಪ್ರತಿಪಕ್ಷ ಬಿಜೆಪಿ ಈ ಬಜೆಟ್ ವಿರೋಧಿಸಿ, ಕೈಯಲ್ಲಿ ಖಾಲಿ ಚೊಂಬು ಹಿಡಿದು ಪ್ರತಿಭಟನೆ ನಡೆಸಿದೆ.

ರಾಜ್ಯದ ಜನತೆಗೆ ಖಾಲಿ ಚೊಂಬು ಕೊಟ್ಟ ಕಾಂಗ್ರೆಸ್ ಸರ್ಕಾರಕ್ಕೆ ಎಂದು ಪ್ರತಿಪಕ್ಷ ನಾಯಕ ಆರ್ ಅಶೋಕ್, ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಸೇರಿದಂತೆ ಹಲವು ಬಿಜೆಪಿ ನಾಯಕರು ರಾಜ್ಯ ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿದರು. ರಾಜ್ಯದ ಜನತೆಯನ್ನು ಸಾಲದ ಸುಳಿಯಲ್ಲಿ ಸಿಲುಕಿಸುವಂತಹ ಬಜೆಟ್ ಮಂಡಿಸಿದ ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರದ ವಿರುದ್ಧ ಇಂದು ವಿಜಯೇಂ ಮತ್ತು ಆರ್ ಅಶೋಕ್ ನೇತೃತ್ವದಲ್ಲಿ ಬಿಜೆಪಿ ಶಾಸಕರು ವಿಧಾನಸೌಧದ ಮುಂಭಾಗದಲ್ಲಿ ಖಾಲಿ ಚೊಂಬು ಪ್ರದರ್ಶಿಸುವ ಮೂಲಕ ಪ್ರತಿಭಟನೆ ನಡೆಸಿದರು.

ಈ ವೇಳೆ ಸುದ್ದಿಗಾರರನ್ನುದ್ದೇಶಿಸಿ ಮಾತನಾಡಿದ ಆರ್ ಅಶೋಕ್, ರಾಜ್ಯದ ಕಾಂಗ್ರೆಸ್ ಸರ್ಕಾರ ಸಾಲ ಪಡೆದ ಹಣದಲ್ಲಿ ಐಷಾರಾಮಿ ಜೀವನ ನಡೆಸುತ್ತಿದೆ. ಸಾಲ ಮಾಡಿ ತುಪ್ಪ ತಿನ್ನುತ್ತಿದೆ. ಈ ಬಜೆಟ್ ನೀರಸವಾಗಿದೆ. ಇದರಲ್ಲಿ ಯಾವುದೇ ಹೊಸ ಯೋಜನೆಗಳಿಲ್ಲ. ಹೊಸ ಯೋಜನೆ ಎಂದರೆ ಹೆಚ್ಚು ಹೆಚ್ಚು ಸಾಲ ಪಡೆಯುವುದು ಮಾತ್ರ" ಎಂದು ಟೀಕಿಸಿದರು. ಕಳೆದ ಮೂರು ವರ್ಷಗಳಲ್ಲಿ, ರಾಜ್ಯ ಸರ್ಕಾರವು 4.39 ಲಕ್ಷ ಕೋಟಿ ರೂ. ಸಾಲ ಮಾಡಿದೆ ಎಂದು ಅಶೋಕ್ ಆರೋಪಿಸಿದರು.

ಮುಂದೆ ಅಧಿರಾಕ್ಕೆ ಬರುವ ಸರ್ಕಾರಗಳು ಬಡ್ಡಿಯನ್ನು ಪಾವತಿಸುವ ಸ್ಥಿತಿಯಲ್ಲಿರುವುದಿಲ್ಲ, ಅಸಲು ಮೊತ್ತವನ್ನು ಬಿಟ್ಟು, ಹಣಕಾಸಿನ ಕೊರತೆಯು 97,000 ಕೋಟಿ ರೂ.ಗಳನ್ನು ತಲುಪಿದೆ ಎಂದು ಬಿಜೆಪಿ ನಾಯಕ ಹೇಳಿದರು. ಈ ಸಂದರ್ಭದಲ್ಲಿ ಪ್ರತಿಪಕ್ಷ ಉಪನಾಯಕರಾದ ಶ್ರೀ ಅರವಿಂದ್ ಬೆಲ್ಲದ್, ವಿಧಾನ ಪರಿಷತ್ ಮುಖ್ಯ ಸಚೇತಕರಾದ ಎನ್. ರವಿಕುಮಾರ್, ಶಾಸಕರು ಮತ್ತು ಪ್ರಮುಖರು ಉಪಸ್ಥಿತರಿದ್ದರು.

# ಹಾರ್ಮುಜ್ ಜಲಸಂಧಿ ಬಂದ್: ತೈಲ, ಎಲ್ ಜಿಪಿ ಪೂರೈಕೆ ಬಗ್ಗೆ ಕೇಂದ್ರ ಸರ್ಕಾರದಿಂದ ಬಿಗ್ ಅಪ್ಡೇಟ್

ನವದೆಹಲಿ: ಹಾರ್ಮುಜ್ ಜಲಸಂಧಿಯ ಮೂಲಕ ಉಂಟಾಗುವ ಅಡೆತಡೆಗಳ ಬಗ್ಗೆ ಕಳವಳಗಳಿದ್ದರೂ, ಕಚ್ಚಾ ತೈಲ, ಪೆಟ್ರೋಲಿಯಂ ಉತ್ಪನ್ನಗಳು ಮತ್ತು ಎಲ್‌ಪಿಜಿ ಸರಬರಾಜಿನ ವಿಷಯದಲ್ಲಿ ಭಾರತವು "ತುಂಬಾ ಆರಾಮದಾಯಕ ಸ್ಥಾನದಲ್ಲಿದೆ" ಎಂದು ಸರ್ಕಾರಿ ಮೂಲಗಳು ಶುಕ್ರವಾರ ತಿಳಿಸಿವೆ. ಮೂಲಗಳ ಪ್ರಕಾರ, ದೇಶ



ಪ್ರಸ್ತುತ ಹಾರ್ಮುಜ್ ಜಲಸಂಧಿಯ ಮೂಲಕ ಪರಿಣಾಮ ಬೀರಬಹುದಾದ ಪ್ರಮಾಣಕ್ಕಿಂತ ವೈವಿಧ್ಯಮಯ ಮೂಲಗಳಿಂದ ಹೆಚ್ಚಿನ ಇಂಧನ ಪೂರೈಕೆಗೆ ಪ್ರವೇಶವನ್ನು ಹೊಂದಿದೆ.

ಭಾರತದ ಅಸ್ತಿತ್ವದಲ್ಲಿರುವ ಕಚ್ಚಾ ತೈಲ ಮತ್ತು ಪೆಟ್ರೋಲಿಯಂ ಉತ್ಪನ್ನಗಳ ದಾಸ್ತಾನು ದೇಶೀಯ ಬೇಡಿಕೆಯನ್ನು ಪೂರೈಸಲು ಸಾಕಾಗುತ್ತದೆ. ಸರ್ಕಾರ ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದೆ ಮತ್ತು ಹಾರ್ಮುಜ್ ಜಲಸಂಧಿಗೆ ಸಂಬಂಧಿಸಿದ ಯಾವುದೇ ಸಂಭಾವ್ಯ ಪೂರೈಕೆ ನಿರ್ಬಂಧಗಳನ್ನು ಸರಿದೂಗಿಸಲು ಪರ್ಯಾಯ ಭೌಗೋಳಿಕ ಪ್ರದೇಶಗಳಿಂದ ಸರಬರಾಜುಗಳನ್ನು ಹೆಚ್ಚಿಸಲು ಯೋಜಿಸಿದೆ ಎಂದು ಮೂಲಗಳು ತಿಳಿಸಿವೆ.

ಕಳೆದ ಕೆಲವು ವರ್ಷಗಳಿಂದ ಭಾರತ ತನ್ನ ಕಚ್ಚಾ ತೈಲ ಆಮದು ಬುಟ್ಟಿಯನ್ನು ಗಮನಾರ್ಹವಾಗಿ ವೈವಿಧ್ಯಗೊಳಿಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. 2022 ರಿಂದ, ಭಾರತ ರಷ್ಯಾದಿಂದ ಕಚ್ಚಾ ತೈಲವನ್ನು ಆಮದು ಮಾಡಿಕೊಳ್ಳುತ್ತಿದೆ. 2022 ರಲ್ಲಿ ಭಾರತದ ಒಟ್ಟು ಕಚ್ಚಾ ತೈಲ ಆಮದುಗಳಲ್ಲಿ ರಷ್ಯಾ ಕೇವಲ 0.2 ಪ್ರತಿಶತದಷ್ಟಿದ್ದರೂ, ಮುಂದಿನ ವರ್ಷಗಳಲ್ಲಿ ಈ ಪಾಲು ಗಣನೀಯವಾಗಿ ಏರಿಕೆಯಾಗಿತ್ತು. "ಫೆಬ್ರವರಿಯಲ್ಲಿ, ಭಾರತವು ತನ್ನ ಒಟ್ಟು ಕಚ್ಚಾ ತೈಲ ಆಮದಿನ ಸುಮಾರು 20 ಪ್ರತಿಶತವನ್ನು ರಷ್ಯಾದಿಂದ ಆಮದು ಮಾಡಿಕೊಂಡಿತು, ಇದು ದಿನಕ್ಕೆ ಸುಮಾರು 1.04 ಮಿಲಿಯನ್ ಬ್ಯಾರೆಲ್‌ಗಳಷ್ಟಿತ್ತು" ಎಂದು ಸರ್ಕಾರಿ ಮೂಲಗಳು ತಿಳಿಸಿವೆ.

# ರಾಜ್ಯದಲ್ಲಿ 12 ಹೊಸ ಪೊಲೀಸ್ ಠಾಣೆಗಳ ಸ್ಥಾಪನೆ



ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶುಕ್ರವಾರ ದಾಖಲೆಯ 17ನೇ ಬಜೆಟ್ ಅನ್ನು ಮಂಡಿಸಿದ್ದು, ಪೊಲೀಸ್ ಇಲಾಖೆ ಸೇರಿದಂತೆ ಹಲವು ಇಲಾಖೆಗಳಿಗೆ ಭರಪೂರ ಅನುದಾನ ನೀಡಿದ್ದಾರೆ. ಇಂದು ವಿಧಾನಸಭೆಯಲ್ಲಿ 2026–27ನೇ ಸಾಲಿನ ಬಜೆಟ್ ಮಂಡಿಸಿದ ಸಿಎಂ, ಹೆಚ್ಚುತ್ತಿರುವ ಜನಸಂಖ್ಯೆ ಮತ್ತು ಕೈಗಾರಿಕಾ ಬೆಳವಣಿಗೆಯನ್ನು ಗಮನದಲ್ಲಿಟ್ಟುಕೊಂಡು, ನಾಗರಿಕರ ಸುರಕ್ಷತೆಗಾಗಿ ರಾಜ್ಯದಲ್ಲಿ 12 ಹೊಸ ಪೊಲೀಸ್ ಠಾಣೆಗಳನ್ನು ಸ್ಥಾಪಿಸುವುದಾಗಿ ಘೋಷಿಸಿದ್ದಾರೆ. ಇದರಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಸಂಚಾರಿ ಪೊಲೀಸ್ ಠಾಣೆಗಳು ಸೇರಿವೆ.

ಹೊಸ ಠಾಣೆಗಳಿಗೆ ಸುಸಜ್ಜಿತ ಕಟ್ಟಡ ಮತ್ತು ಆಧುನಿಕ ಉಪಕರಣಗಳನ್ನು ಒದಗಿಸಲು ಸಿಎಂ ಸಿದ್ದರಾಮಯ್ಯ ಅವರು ಬಜೆಟ್ ನಲ್ಲಿ ಅನುದಾನ ಮೀಸಲಿಟ್ಟಿದ್ದು, ಹೊಸ ಠಾಣೆಗಳ ಕಾರ್ಯಾಚರಣೆಗಾಗಿ ಅಗತ್ಯವಿರುವ ಪೊಲೀಸ್ ಸಿಬ್ಬಂದಿಗಳ ನೇಮಕಾತಿ ಪ್ರಕ್ರಿಯೆಗೂ ಚಾಲನೆ ನೀಡಲಾಗುವುದು ಎಂದು ಹೇಳಿದ್ದಾರೆ. ದೊಡ್ಡಬಳ್ಳಾಪುರ, ಹಿರಿಯೂರು ಮತ್ತು ಗುಂಡ್ಲುಪೇಟೆಯಂತಹ ಬೆಳೆಯುತ್ತಿರುವ ನಗರಗಳಲ್ಲಿ ಸಂಚಾರ ದಟ್ಟಣೆ ನಿಯಂತ್ರಿಸಲು ಸಂಚಾರಿ ಠಾಣೆಗಳಿಗೆ ಒತ್ತು ನೀಡಲಾಗಿದೆ.

ದಕ್ಷಿಣ ಕನ್ನಡ ಜಿಲ್ಲೆಯ ಮಾಣಿ ಪೊಲೀಸ್ ಠಾಣೆ, ಸಜಿಪನಡು ಪೊಲೀಸ್ ಠಾಣೆ, ಬೆಳಗಾವಿ ಜಿಲ್ಲೆಯ ಯರಗಟ್ಟಿ ಪೊಲೀಸ್ ಠಾಣೆ, ಯಾದಗಿರಿ ಜಿಲ್ಲೆಯ ಕಕ್ಕೇರಾ ಪೊಲೀಸ್ ಠಾಣೆ, ದಾವಣಗೆರೆ ಜಿಲ್ಲೆಯ ಆನಗೋಡು ಪೊಲೀಸ್ ಠಾಣೆ, ಹಾವೇರಿ ಜಿಲ್ಲೆಯ ತಿಳುವಳ್ಳಿ ಪೊಲೀಸ್ ಠಾಣೆ, ಮೈಸೂರು ಜಿಲ್ಲೆಯ ಉದಯಗಿರಿ ದಕ್ಷಿಣ ಪೊಲೀಸ್ ಠಾಣೆ, ವಿಜಯಪುರ ಜಿಲ್ಲೆಯ ಮುದ್ದೇಬಿಹಾಳ ಗ್ರಾಮಾಂತರ ಠಾಣೆ, ಕೋಲಾರ ಜಿಲ್ಲೆಯ ನರಸಾಪುರ ಕೈಗಾರಿಕಾ ವಲಯದಲ್ಲಿ ಪೊಲೀಸ್ ಠಾಣೆ ಆರಂಭಿಸಲಾಗುತ್ತಿದೆ.

ಇನ್ನು ಇದರ ಜತೆಗೆ ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ವಿವಿಧ ಶ್ರೇಣಿಯ ಒಟ್ಟು 8,000 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಈ ವರ್ಷ ಭರ್ತಿ ಮಾಡಲಾಗುವುದು. ನೇಮಕಾತಿ ಪ್ರಕ್ರಿಯೆಯನ್ನು ವ್ಯವಸ್ಥಿತವಾಗಿ ಮತ್ತು ಪಾರದರ್ಶಕವಾಗಿ ನಡೆಸಲು 'ಖಾಯಂ ಪೊಲೀಸ್ ಮತ್ತು ಪೊಲೀಸ್ ಪೂರಕ ಸೇವೆಗಳ ನೇಮಕಾತಿ ಮಂಡಳಿ'ಯನ್ನು ಸ್ಥಾಪಿಸಲಾಗುವುದು ಎಂದು ಸಿಎಂ ಹೇಳಿದ್ದಾರೆ.

# 1,846 ಕಿ.ಮೀ ಉದ್ದದ ಹೆದ್ದಾರಿ ಅಭಿವೃದ್ಧಿಗೆ ರಾಜ್ಯ ಸರ್ಕಾರ ಮುಂದು!

ಬೆಂಗಳೂರು: ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆಯ (SHDP)2ನೇ ಹಂತದಡಿ 2026–27ರ ಅವಧಿಯಲ್ಲಿ 1,846 ಕಿಮೀ ಉದ್ದದ ರಸ್ತೆಗಳನ್ನು 5,000 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿಪಡಿಸಲು ರಾಜ್ಯ ಸರ್ಕಾರ ಯೋಜಿಸಿದೆ. ರಾಜ್ಯ ಬಜೆಟ್‌ನಲ್ಲಿ ರಸ್ತೆ ಮತ್ತು ಮೂಲಸೌಕರ್ಯ ಅಭಿವೃದ್ಧಿ ಕಾರ್ಯಕ್ರಮದ ಭಾಗವಾಗಿ ಇದನ್ನು ಘೋಷಿಸಲಾಗಿದೆ. ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆಯ ಹಂತ–5, ಹಂತ–1ರ ಅಡಿಯಲ್ಲಿ 4,000 ಕೋಟಿ ರೂ. ವೆಚ್ಚದಲ್ಲಿ 1,512 ಕಿಮೀ ರಸ್ತೆಗಳ ಕಾಮಗಾರಿಗಳು ಈಗಾಗಲೇ ಅನುಷ್ಠಾನ ಹಂತದಲ್ಲಿವೆ. 2026–27ರಲ್ಲಿ ರಾಜ್ಯ ಬಜೆಟ್ ಪ್ರಸ್ತಾವನೆಗಳ ಪ್ರಕಾರ 5,000 ಕೋಟಿ ರೂ. ವೆಚ್ಚದಲ್ಲಿ 2ನೇ ಹಂತದಲ್ಲಿ ಹೆಚ್ಚುವರಿ 1,846 ಕಿ.ಮೀ ರಸ್ತೆಗಳನ್ನು ಅಭಿವೃದ್ಧಿಪಡಿಸಲಾಗುತ್ತಿದೆ.

ಇದಲ್ಲದೆ, ಲೋಕೋಪಯೋಗಿ ಇಲಾಖೆ (ಪಿಡಬ್ಲ್ಯುಡಿ) 2026–27ರ ಅವಧಿಯಲ್ಲಿ 5,776 ಕೋಟಿ ಅಂದಾಜು ಮೊತ್ತದ ವಿವಿಧ ಯೋಜನೆಗಳಡಿ 2,200 ಕಿಮೀ ರಾಜ್ಯ ಹೆದ್ದಾರಿಗಳು ಮತ್ತು 3,500 ಕಿಮೀ ಪ್ರಮುಖ ಜಿಲ್ಲಾ ರಸ್ತೆಗಳ ಅಭಿವೃದ್ಧಿಯನ್ನು ಕೈಗೊಳ್ಳಲಿದೆ.

ಏಷ್ಯನ್ ಡೆವಲಪ್‌ಮೆಂಟ್ ಬ್ಯಾಂಕ್ (ADB) ನೆರವಿನ ಕರ್ನಾಟಕ ರಾಜ್ಯ ಹೆದ್ದಾರಿ ಸುಧಾರಣಾ ಯೋಜನೆ–IV (KSHIP-IV) ಗಾಗಿ ಸರ್ಕಾರ ಸಿದ್ಧತೆ ಪ್ರಾರಂಭಿಸುತ್ತಿದ್ದೆ. 5,736 ಕೋಟಿ ರೂ. ಯೋಜನಾ ವೆಚ್ಚದಲ್ಲಿ ರಾಜ್ಯದಾದ್ಯಂತ ಸುಮಾರು 875 ಕಿ.ಮೀ ಉದ್ದದ ರಸ್ತೆ ಕಾಮಗಾರಿಗಳ ವಿಸ್ತೃತ ಯೋಜನಾ ವರದಿ ಸಿದ್ಧಪಡಿಸಿ, ಅನುಮೋದನೆ ಪಡೆದು ಟೆಂಡರ್ ಆಹ್ವಾನಿಸಲಾಗುತ್ತಿದೆ. ಇನ್ನೂ ಸೇತುವೆ ನಿರ್ಮಾಣ ವಿಚಾರಕ್ಕೆ ಬಂದರೆ, 2025–26ರಲ್ಲಿ 2,000 ಕೋಟಿ ರೂ. ವೆಚ್ಚದಲ್ಲಿ 216 ಸೇತುವೆಗಳನ್ನು ಈಗಾಗಲೇ ನಿರ್ಮಾಣ ಮಾಡಲಾಗಿದೆ. 288 ಸೇತುವೆಗಳ ದುರಸ್ತಿ ಮತ್ತು 386 ಕಾಲು ಸೇತುವೆಗಳ ನಿರ್ಮಾಣಕ್ಕೆ ಈಗಾಗಲೇ ಮಂಜೂರಾತಿ ನೀಡಲಾಗಿದೆ. ಇದಾದ ನಂತರ ಮುಂದಿನ ಎರಡು ವರ್ಷಗಳಲ್ಲಿ 2,000 ಕೋಟಿ ರೂ. ವೆಚ್ಚದಲ್ಲಿ ಹೆಚ್ಚುವರಿ ಸೇತುವೆಗಳನ್ನು ನಿರ್ಮಿಸಲು ಸರ್ಕಾರ ಯೋಜಿಸಿದೆ. ದೂರದ ಪ್ರದೇಶಗಳಲ್ಲಿ ಸುರಕ್ಷತೆಯನ್ನು ಸುಧಾರಿಸಲು



ನಿವಾಸಿಗಳು ಮತ್ತು ಶಾಲಾ ವಿದ್ಯಾರ್ಥಿಗಳಿಗೆ ಸುರಕ್ಷಿತ ಸಂಚಾರವನ್ನು ಖಾತ್ರಿಪಡಿಸುವ ಉದ್ದೇಶದಿಂದ ಮಲೆನಾಡು ಮತ್ತು ಕರಾವಳಿ ಪ್ರದೇಶದ ಸಂಪರ್ಕವಿಲ್ಲದ ವಾಸಸ್ಥಳಗಳಲ್ಲಿ 300 ಕಾಲು ಸೇತುವೆಗಳನ್ನು ನಿರ್ಮಿಸಲಾಗುವುದು ಎಂದು ಬಜೆಟ್ ನಲ್ಲಿ ಹೇಳಲಾಗಿದೆ.

# ಅಲ್ಪಸಂಖ್ಯಾತ ಓಲೈಕೆ ಸರ್ಕಾರ, ಬ್ರಾಹ್ಮಣ ಸಮುದಾಯವನ್ನು ಕಡೆಗಣಿಸಿದೆ: ಬಿಜೆಪಿ ಯುವ ಮುಖಂಡ ಸತೀಶ್ ಉರಾಳ್

ಸರ್ವರಿಗೂ ಸಮಪಾಲು, ಸರ್ವರಿಗೂ ಸಮಬಾಳು ಸಿದ್ಧಾಂತದಂತೆ ನಡೆಯುವ ಕಾಂಗ್ರೆಸ್ ಸರ್ಕಾರ ಎಂದು ಹೇಳುವ ಮುಖ್ಯಮಂತ್ರಿಗಳು ಬ್ರಾಹ್ಮಣ ಅಭಿವೃದ್ಧಿ ನಿಗಮ ಒಂದು ರೂಪಾಯಿ ಅನುದಾನ ಕೊಡದೇ ತಾರತಮ್ಯ ಮೆರೆದಿದ್ದಾರೆ. ಹಿಂದಿನ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿರವರು ಬ್ರಾಹ್ಮಣ ಅಭಿವೃದ್ಧಿ ನಿಗಮ ಮಾಡುತ್ತೇನೆ ಎಂದು ಭರವಸೆ ನೀಡಿ ನಿಗಮ ಸ್ಥಾಪನೆ ಮಾಡಿದರು.

ಅದರೆ ಈ ನಿಗಮ ಅಧ್ಯಕ್ಷರು, ಅಧಿಕಾರಿ, ಸಿಬ್ಬಂದಿಗಳಿಗೆ ಸಂಬಳ ಪಾವತಿ ಮಾಡಲು ಮಾತ್ರ ಬಜೆಟ್‌ನಲ್ಲಿ ಘೋಷಣೆ ಮಾಡಿದ್ದಾರೆ. ಸ್ವಸಹಾಯ ಯೋಜನೆ ಅಡಿ ಕಳೆದ ಬಾರಿ 1,300 ಜನರು ಅಪ್ಲಿಕೇಶನ್ ಹಾಕಿದ್ದಾರೆ ಆದರೆ ಕಳೆದ ಬಾರಿ ಸರ್ಕಾರ ಕೇವಲ 300 ಜನರಿಗೆ ಸಾಲ ಮಂಜೂರು ಮಾಡಿದೆ.

ಅಲ್ಪಸಂಖ್ಯಾತರ ಓಲೈಕೆಯ ಸರ್ಕಾರ ವಾಗಿದೆ. ಬ್ರಾಹ್ಮಣ ಸಮುದಾಯವನ್ನು ಮರೆತಿದೆ.

ರಾಜ್ಯದಲ್ಲಿ 35ರಿಂದ 40ಲಕ್ಷ ಜನಸಂಖ್ಯೆ ಇರುವ ಬ್ರಾಹ್ಮಣ ಸಮುದಾಯದಲ್ಲಿ ಆರ್ಥಿಕವಾಗಿ ಬಡವರು ಹೆಚ್ಚಿನ ಸಂಖ್ಯೆಯಲ್ಲಿ ಇದ್ದಾರೆ. ವಿದ್ಯಾರ್ಥಿಗಳ ಉನ್ನತ ವ್ಯಾಸಂಗಕ್ಕಾಗಿ ಧನ ಸಹಾಯ ಮತ್ತು ಲ್ಯಾಪ್ ಟಾಪ್ ವಿತರಣೆ ಸ್ವಾವಲಂಬಿ ಜೀವನಕ್ಕೆ ಸಾಲ ಸೌಲಭ್ಯಗಳು ಎಲ್ಲ ಯೋಜನೆಗಳಿಗೆ ಹಣ ನೀಡದೆ ಅನ್ಯಾಯ ಮಾಡಿದ್ದಾರೆ ಬಿಜೆಪಿ ಯುವ ಮುಖಂಡ ಸತೀಶ್ ಉರಾಳ್ ರವರು ಖಂಡನೆ ವ್ಯಕ್ತಪಡಿಸಿದರು.



# ಮಾಜಿ ದೇವದಾಸಿಯರಿಗೆ ಪ್ರೋತ್ಸಾಹ ಧನ ಹೆಚ್ಚಳ

ಬೆಂಗಳೂರು: ಸಿಎಂ ಸಿದ್ದರಾಮಯ್ಯ ಅವರು ಇಂದು ತಮ್ಮ ದಾಖಲೆಯ 17ನೇ ಬಜೆಟ್ ಮಂಡನೆ ಮಾಡಿದ್ದಾರೆ. ಈ ಬಾರಿಯ ಬಜೆಟ್‌ನಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಅನೇಕ ಯೋಜನೆಗಳನ್ನು ಸಿದ್ದರಾಮಯ್ಯ ಘೋಷಿಸಿದ್ದಾರೆ. ರಾಜ್ಯದಲ್ಲಿ




ಕಾರ್ಯನಿರ್ವಹಿಸುತ್ತಿರುವ 1,39,844 ಅಂಗನವಾಡಿ ಕಾರ್ಯಕರ್ತೆಯರು / ಸಹಾಯಕಿಯರಿಗೆ ಹೆಚ್ಚುವರಿ ಒಂದು ಜೊತೆ ಸಮವಸ್ತ್ರ ವಿತರಣೆ. ಮಾಜಿ ದೇವದಾಸಿಯರು, ಲಿಂಗತ್ವ ಅಲ್ಪಸಂಖ್ಯಾತರು, ಚೇತನ ಹಾಗೂ ಧನಶ್ರೀ ಯೋಜನೆಯ ಫಲಾನುಭವಿಗಳಿಗೆ ಆದಾಯೋತ್ಪನ್ನ ಚಟುವಟಿಕೆಗಳಿಗಾಗಿ ನೀಡಲಾಗುವ ಪ್ರೋತ್ಸಾಹಧನ ರೂ.45,000ಕ್ಕೆ ಹೆಚ್ಚಳ. ಮಾದಕ ವ್ಯಸನಕ್ಕೆ ಒಳಗಾದ 18 ವರ್ಷದೊಳಗಿನ ಮಕ್ಕಳಿಗಾಗಿ ಪ್ರಾಯೋಗಿಕವಾಗಿ ಬೆಂಗಳೂರಿನ ನಿಮ್ಹಾನ್ಸ್ ಹಾಗೂ ಧಾರವಾಡದ ಡಿಮ್ಹಾನ್ಸ್ ಸಂಸ್ಥೆಗಳ ಸಹಯೋಗದಲ್ಲಿ 'ಮಾದಕ ವ್ಯಸನಿಗಳ ಪುನರ್ವಸತಿ ಕೇಂದ್ರಗಳ ಆರಂಭ.

200 ಕೋಟಿ ರೂ. ವೆಚ್ಚದಲ್ಲಿ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಲಭ್ಯವಿರುವ 1,668 ನಿವೇಶನಗಳಲ್ಲಿ ನೂತನ ಅಂಗನವಾಡಿ ಕಟ್ಟಡಗಳ ನಿರ್ಮಾಣ. ಮಾಜಿ ದೇವದಾಸಿಯರ ಹಾಗೂ ಲಿಂಗತ್ವ ಅಲ್ಪಸಂಖ್ಯಾತರ ಸ್ಥಿತಿಗತಿ ಅರಿಯಲು, ಪುನರ್ವಸತಿ ಕಲ್ಪಿಸಲು ಮತ್ತು ಸರ್ಕಾರದ ಸೌಲಭ್ಯಗಳನ್ನು ಒದಗಿಸುವ ಹಿನ್ನೆಲೆಯಲ್ಲಿ ಅವರ ನಿಖರ ಮಾಹಿತಿ ಸಂಗ್ರಹಿಸುವುದಕ್ಕಾಗಿ ಸಮೀಕ್ಷೆಯನ್ನು ಕೈಗೊಳ್ಳಲಾಗಿದೆ. ಮಾಜಿ ದೇವದಾಸಿಯರ ಮಕ್ಕಳಿಗೆ ಉನ್ನತ ಶಿಕ್ಷಣದ ಅವಕಾಶಗಳನ್ನು ವಿಸ್ತರಿಸುವುದರ ಜೊತೆಗೆ ಹೆಣ್ಣುಮಕ್ಕಳಿಗೆ ಸ್ವಯಂ ಉದ್ಯೋಗ ಹಾಗೂ ವೈಯಕ್ತಿಕ ಆದಾಯೋತ್ಪನ್ನ ಚಟುವಟಿಕೆಗಳನ್ನು ಕೈಗೊಳ್ಳಲು ಅಗತ್ಯ ಆರ್ಥಿಕ ಸಹಾಯ ನೀಡುವ ಕಾರ್ಯಕ್ರಮವನ್ನು ರೂಪಿಸಿ ಜಾರಿಗೆ ತರಲು ಐದು ಕೋಟಿ ರೂ.ಗಳನ್ನು ಮೀಸಲಿಡಲಾ ಗುವುದು.

ಮಾದಕ ವ್ಯಸನಕ್ಕೆ ಒಳಗಾದ 18 ವರ್ಷದೊಳಗಿನ ಮಕ್ಕಳಿಗಾಗಿ ಪ್ರಾಯೋಗಿಕವಾಗಿ ಬೆಂಗಳೂರಿನ ನಿಮ್ಹಾನ್ಸ್ ಹಾಗೂ ಧಾರವಾಡದ ಡಿಮ್ಹಾನ್ಸ್ ಸಂಸ್ಥೆಗಳ ಸಹಯೋಗದೊಂದಿಗೆ ಮಾದಕ ವ್ಯಸನಿಗಳ ಪುನರ್ವಸತಿ ಕೇಂದ್ರಗಳನ್ನು ಪ್ರಾರಂಭಿ ಸಲಾಗುವುದು. ಅಂಗನವಾಡಿ ಕೇಂದ್ರಗಳ ಸಮಗ್ರ ಸುಧಾರಣೆಗೆ ಉನ್ನತ ಮಟ್ಟದ ಸಮಿತಿಯನ್ನು ರಚಿಸಲಾಗುವುದು. ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಪ್ರಾಥಮಿಕ ಬಾಲ್ಯ ಆರೈಕೆ ಮತ್ತು ಶಿಕ್ಷಣವನ್ನು (ECCE) ಬಲಪಡಿಸಲು ಈ ಭಾಗದ ಜಿಲ್ಲೆಗಳಲ್ಲಿ ಲಭ್ಯವಿರುವ 1,668 ನಿವೇಶನಗಳಲ್ಲಿ ಅಂಗನವಾಡಿ ಕಟ್ಟಡಗಳ ನಿರ್ಮಾಣವನ್ನು 200 ಕೋಟಿ ರೂ.ಗಳ ವೆಚ್ಚದಲ್ಲಿ ಏಐಐಆಃ ಅನುದಾನದಿಂದ ಕೈಗೊಳ್ಳಲಾಗುವುದು.

2026–27ನೇ ಸಾಲಿನಲ್ಲಿ ಜಿಲ್ಲಾ ಮಟ್ಟದಲ್ಲಿ ಹೆಚ್ಚುವರಿಯಾಗಿ 20 ಹೊಸ ಶಿಶುಪಾಲನಾ ಕೇಂದ್ರಗಳನ್ನು ಸ್ಥಾಪಿಸುವ ಉದ್ದೇಶದಿಂದ ಒಂದು ಕೋಟಿ ರೂ. ಅನುದಾನ ಒದಗಿಸ ಲಾಗುವುದು. ನಮ್ಮ ಸರ್ಕಾರದ ಹಿಂದಿನ ಅವಧಿಯಲ್ಲಿ ಗರ್ಭಿಣಿ ಮತ್ತು ಬಾಣಂತಿಯರಿಗೆ ಅಂಗನವಾಡಿ ಕೇಂದ್ರಗಳಲ್ಲಿ ಮಧ್ಯಾಹ್ನದ ಬಿಸಿಯೂಟ ನೀಡುವ ಮಾತೃ ಪೂರ್ಣ ಯೋಜನೆಯನ್ನು ಜಾರಿ ಗೊಳಿಸಲಾಗಿತ್ತು.

ಈ ಯೋಜನೆಯು ಅವರಲ್ಲಿ ರಕ್ತಹೀನತೆ ಮತ್ತು ಅಪೌಷ್ಟಿಕತೆ ತಡೆಗಟ್ಟಲು ಸಹಕಾರಿಯಾಗಿತ್ತು. ತದನಂತರದಲ್ಲಿ, ಮಧ್ಯಾಹ್ನದ ಬಿಸಿಯೂಟದ ಬದಲಾಗಿ ಮನೆಗೆ ಪಡಿತರ ತೆಗೆದುಕೊಂಡು ಹೋಗುವುದಕ್ಕೆ ಒತ್ತು ನೀಡಲಾಗಿ, ಯೋಜನೆಯ ಮೂಲ ಉದ್ದೇಶ ಹಳಿತಪ್ಪಿದಂತಾಗಿರುತ್ತದೆ. ಇದನ್ನು ಮನಗಂಡು ಎಲ್ಲ ಫಲಾನುಭವಿಗಳಿಗೂ ಹಿಂದಿನಂತೆ ಅಂಗನವಾಡಿ ಕೇಂದ್ರಗಳಲ್ಲಿಯೇ ಪ್ರತಿದಿನ ಮಧ್ಯಾಹ್ನದ ಬಿಸಿಯೂಟ ನೀಡುವ ಯೋಜನೆಯನ್ನು ಮರುಸ್ಥಾಪಿಸಲಾಗುವುದು. ಗೃಹಲಕ್ಷ್ಮಿ ಯೋಜನೆಯಡಿ ಇಲ್ಲಿಯವರೆಗೂ ಎಲ್ಲಾ ಅರ್ಹ ಫಲಾನುಭವಿಗಳಿಗೆ ಒಟ್ಟು 62,345 ಕೋಟಿ ರೂ.ಗಳ ವೆಚ್ಚ ಭರಿಸಲಾಗಿದೆ. ಈ ಯೋಜನೆಯಡಿ 1.24 ಕೋಟಿ ಫಲಾನುಭವಿಗಳಿಗೆ ಯಶಸ್ವಿಯಾಗಿ ಧನಸಹಾಯ ಪಾವತಿಸಲಾಗುತ್ತಿದೆ. ಪ್ರಸಕ್ತ ವರ್ಷದಲ್ಲಿ ಈ ಯೋಜನೆಯಡಿ 28,608 ಕೋಟಿ ರೂ.ಗಳನ್ನು ಮೀಸಲಿರಿಸಿದೆ. ಮಹಿಳೆಯರು ಹಾಗೂ ಮಕ್ಕಳಿಗೆ ಸಂಕಷ್ಟದ ಸಂದರ್ಭದಲ್ಲಿ ತಕ್ಷಣದ ರಕ್ಷಣೆ ನೀಡುವ ಉದ್ದೇಶದಿಂದ ಅಕ್ಕಪಡೆ ಯೋಜನೆಯನ್ನು ಗೃಹ ಇಲಾಖೆಯ ಅ ಎಲ್ಲಾ ಜಿಲ್ಲೆಗಳಲ್ಲಿ ಯಶಸ್ವಿಯಾಗಿ ಅನುಷ್ಠಾನಗೊಳಿಸ 'ಲಾಗಿದೆ.

# ತ್ವಚೆ & ಕೂದಲಿನ ಸೌಂದರ್ಯಕ್ಕಾಗಿ ಹರಳೆಣ್ಣೆ ಅತ್ಯುತ್ತಮ: ಈ ಎಣ್ಣೆಯನ್ನು ಬಳಕೆ ಮಾಡುವುದು ಹೇಗೆ ಗೊತ್ತೇ

ಹುಡುಗಿಯರು ತಮ್ಮ ಸೌಂದರ್ಯವನ್ನು ದ್ವಿಗುಣಗೊಳಿಸಲು ಮಾರುಕಟ್ಟೆಯಲ್ಲಿ ಲಭ್ಯವಿರುವ ಹಲವು ಪ್ರಕಾರದ ಸೌಂದರ್ಯ ಉತ್ಪನ್ನಗಳನ್ನು ಬಳಕೆ ಮಾಡುತ್ತಾರೆ. ಮನೆಯಲ್ಲಿ ಲಭ್ಯವಿರುವ ಕ್ಯಾಸ್ಟರ್ ಆಯಿಲ್ ಸೌಂದರ್ಯ ಆರೈಕೆಯಲ್ಲಿ ತುಂಬಾ ಸಹಾಯ ಮಾಡುತ್ತದೆ ಎಂದು ತಜ್ಞರು ಹೇಳುತ್ತಾರೆ.

ಹರಳೆಣ್ಣೆ (ಕ್ಯಾಸ್ಟರ್ ಆಯಿಲ್) ರಿಸಿನಸ್ ಕಮ್ಯುನಿಸ್ ಬೀಜಗಳಿಂದ ತೆಗೆಯಲಾದ ಸಸ್ಯಜನ್ಯ ಎಣ್ಣೆ. ಇದನ್ನು ಚರ್ಮ, ಕೂದಲು ಹಾಗೂ ಆರೋಗ್ಯಕ್ಕೆ ಅದ್ಭುತವಾದ ನೈಸರ್ಗಿಕ ಔಷಧಿಯಾಗಿದೆ. ದಟ್ಟವಾದ ಕೂದಲು, ತ್ವಚೆಯ ತೇವಾಂಶ ಕಾಪಾಡಲು, ಮಲಬದ್ಧತೆ ನಿವಾರಿಸಲು ಹಾಗೂ ಕೀಲು ನೋವಿಗೆ ಹರಳೆಣ್ಣೆ ಅತ್ಯುತ್ತಮವಾಗಿದೆ. ಕೋಲ್ಡ್ ಪ್ರೆಸ್ಡ್ ಹರಳೆಣ್ಣೆ ಎಣ್ಣೆ ಬಳಸುವುದು ಉತ್ತಮ. ಈ ಹರಳೆಣ್ಣೆಯನ್ನು ಬಳಸುವುದು ಹೇಗೆ ಎಂಬುದನ್ನು ತಿಳಿದುಕೊಳ್ಳೋಣ.

**ನೈಸರ್ಗಿಕ ಲಿಪ್ ಬಾಮ್:** ಬೆಳಿಗ್ಗೆ ಎದ್ದ ನಂತರ ಮತ್ತು ರಾತ್ರಿ ಮಲಗುವ ಮೊದಲು ನಿಮ್ಮ ತುಟಿಗಳಿಗೆ ಒಂದು ಹನಿ ಕ್ಯಾಸ್ಟರ್ ಆಯಿಲ್ ಹಚ್ಚುವುದರಿಂದ ಕೆಲವೇ ದಿನಗಳಲ್ಲಿ ನಿಮ್ಮ ತುಟಿಗಳು ಸುಂದರವಾಗುತ್ತವೆ. ಕ್ಯಾಸ್ಟರ್ ಆಯಿಲ್ ನೈಸರ್ಗಿಕ ಲಿಪ್ ಬಾಮ್ ಆಗಿ ಕಾರ್ಯನಿರ್ವಹಿಸುತ್ತದೆ ಎಂದು ತಜ್ಞರು ಹೇಳುತ್ತಾರೆ.

**ಉಗುರುಗಳು ಮುರಿಯುವುದಿಲ್ಲ:** ಕೆಲವರ ಉಗುರುಗಳು ಸ್ವಲ್ಪ ಬೆಳೆದ ತಕ್ಷಣ ಮುರಿಯುತ್ತವೆ. ಈ ಸಮಸ್ಯೆ ಇರುವವರು ಮಲಗುವ ಮುನ್ನ ಪ್ರತಿದಿನ ಹತ್ತು ನಿಮಿಷಗಳ ಕಾಲ ಕ್ಯಾಸ್ಟರ್ ಆಯಿಲ್‌ನಿಂದ ಉಗುರುಗಳನ್ನು ಮಸಾಜ್ ಮಾಡಬೇಕು. ಕೆಲವು ದಿನಗಳವರೆಗೆ ಇದನ್ನು ಮಾಡುವುದರಿಂದ ಉಗುರುಗಳು ಬಲಗೊಳ್ಳುತ್ತವೆ. ಇವು ಮುರಿಯುವುದನ್ನು ತಡೆಯಬಹುದು.

ಇದಲ್ಲದೇ, ಪ್ರತಿದಿನ ಕ್ಯಾಸ್ಟರ್ ಆಯಿಲ್ ಹಚ್ಚುವುದರಿಂದ ಒರಟಾದ ಚರ್ಮವೂ ಮೃದುವಾಗುತ್ತದೆ.

**ಚರ್ಮ ತಾಜಾ ಆಗಿರುತ್ತದೆ:** ಕ್ಯಾಸ್ಟರ್ ಆಯಿಲ್ ಹಚ್ಚುವುದರಿಂದ ಚರ್ಮಕ್ಕೆ ಸಾಕಷ್ಟು ತೇವಾಂಶ ದೊರೆಯುತ್ತದೆ. ಇದರ ಪರಿಣಾಮವಾಗಿ ಚರ್ಮವು ತಾಜಾವಾಗಿ ಕಾಣುತ್ತದೆ. ಕ್ಯಾಸ್ಟರ್ ಆಯಿಲ್ ಚರ್ಮವು ಸುಕ್ಕುಗಟ್ಟುವುದನ್ನು ತಡೆಯುವ ಅನೇಕ ಗುಣಗಳನ್ನು ಹೊಂದಿದೆ. ಇದರಲ್ಲಿನ ರಿಸಿನೋಲಿಕ್ ಆಮ್ಲ ಚರ್ಮವನ್ನು ಮೃದುಗೊಳಿಸುತ್ತದೆ, ಮಾಯಿಶ್ಚರೈಸ್ ಮಾಡುತ್ತದೆ, ಚರ್ಮದ ಸೋಂಕುಗಳನ್ನು



ಕಡಿಮೆ ಮಾಡುತ್ತದೆ. ಅದಕ್ಕಾಗಿಯೇ ತಜ್ಞರು ಇದನ್ನು 'ವಯಸ್ಸಾಗುವುದನ್ನು ತಡೆಯುವ' ಚಿಕಿತ್ಸೆಗಳಲ್ಲಿ ಬಳಸಲಾಗುತ್ತದೆ ಎಂದು ಆರೋಗ್ಯ ತಜ್ಞರು ಹೇಳುತ್ತಾರೆ.

**ದಪ್ಪ ಹುಬ್ಬುಗಳಿಗೆ ಒಳ್ಳೆಯದು:** ಕೆಲವು ಹುಡುಗಿಯರು ತುಂಬಾ ತೆಳುವಾದ ಹುಬ್ಬುಗಳು, ರೆಪ್ಪೆಗೂದಲುಗಳನ್ನು ಹೊಂದಿರುತ್ತಾರೆ. ಪ್ರತಿದಿನ ರಾತ್ರಿ ಮಲಗುವ ಮುನ್ನ ಕ್ಯಾಸ್ಟರ್ ಆಯಿಲ್ ಹಚ್ಚುವುದರಿಂದ ಉತ್ತಮ ಫಲಿತಾಂಶ ಸಿಗುತ್ತದೆ. ಕ್ಯಾಸ್ಟರ್ ಆಯಿಲ್ ಸೌಂದರ್ಯವನ್ನು ದ್ವಿಗುಣಗೊಳಿಸಿದರೂ, ಅದನ್ನು ಮಿತವಾಗಿ ಬಳಸುವುದು ಹಾಗೂ ಅದನ್ನು ಬಳಸುವ ಮೊದಲು ಪ್ಯಾಚ್ ಪರೀಕ್ಷೆ ಮಾಡುವುದು ಅತ್ಯಗತ್ಯವಾಗಿದೆ ಗರ್ಭಿಣಿಯರು ಮತ್ತು ಹಾಲುಣಿಸುವ ತಾಯಂದಿರು ಇದರಿಂದ ದೂರವಿರುವುದು ಉತ್ತಮ ಎಂದು ತಜ್ಞರು ತಿಳಿಸುತ್ತಾರೆ.

**ಮತ್ತಷ್ಟು ಪ್ರಯೋಜನಗಳು:**

**ಕೂದಲಿನ ಆರೈಕೆ:** ವಾರಕ್ಕೆರಡು ಬಾರಿ ತಲೆಗೆ ಹರಳೆಣ್ಣೆ ಹಚ್ಚುವುದರಿಂದ ಕೂದಲು ದಪ್ಪ, ಮೃದು ಹಾಗೂ ಹೊಳೆಯುತ್ತವೆ ಹಾಗೂ ಉತ್ತಮವಾಗಿ ಬೆಳೆಯುತ್ತದೆ. ಜೊತೆಗೆ ಕೂದಲು ಉದುರುವ ಸಮಸ್ಯೆಯು ಕಡಿಮೆಯಾಗುತ್ತದೆ.

**ಮಲಬದ್ಧತೆ ನಿವಾರಣೆ:** ಮಲಬದ್ಧತೆ ಸಮಸ್ಯೆಗೆ 10ಟಟನಷ್ಟು ಹರಳೆಣ್ಣೆಯನ್ನು ನಿಯಮಿತವಾಗಿ ಬಳಸುವುದರಿಂದ ಹೊಟ್ಟೆಯ ಸಮಸ್ಯೆಗಳು ದೂರವಾಗುತ್ತವೆ.

**ದೇಹದ ತಂಪಾಗುವಿಕೆ:** ಬೇಸಿಗೆಯಲ್ಲಿ ತಲೆಗೆ ಹರಳೆಣ್ಣೆ ಹಚ್ಚಿಕೊಂಡು ಸ್ನಾನ ಮಾಡುವುದರಿಂದ ದೇಹದ ಉಷ್ಣಾಂಶ ಕಡಿಮೆಯಾಗುತ್ತದೆ.

**ಹರಳೆಣ್ಣೆ ಹೇಗೆ ಬಳಕೆ ಮಾಡಬೇಕು?:**

**ಕೂದಲಿಗೆ:** ಹರಳೆಣ್ಣೆ ದಪ್ಪಗಿರುವ ಕಾರಣದಿಂದ ತೆಂಗಿನ ಎಣ್ಣೆ ಇಲ್ಲವೇ ಬಾದಾಮಿ ಎಣ್ಣೆಯೊಂದಿಗೆ ಬೆರೆಸಿ ಸ್ವಲ್ಪ ಬಿಸಿ ಮಾಡಿ ನೆತ್ತಿಗೆ ಮಸಾಜ್ ಮಾಡಿಕೊಳ್ಳಿ.

**ಮುಖ/ತ್ವಚೆಗೆ:** ರಾತ್ರಿ ಮಲಗುವ ಮುನ್ನ ಮುಖಕ್ಕೆ ಹಚ್ಚಿ ಹಾಗೂ ಮರುದಿನ ಬೆಳಗ್ಗೆ ತೊಳೆಯಬಹುದು.

**ಸೇವನೆ:** ಮಲಬದ್ಧತೆಗೆ ಹರಳೆಣ್ಣೆಯನ್ನು ಬಳಸುವ ಮುನ್ನ ವೈದ್ಯರ ಸಲಹೆ ಪಡೆಯುವುದು ಉತ್ತಮವಾಗಿದೆ.

ಹರಳೆಣ್ಣೆಯನ್ನು ನೇರವಾಗಿ ಬಳಸುವ ಮುನ್ನ 'ಸ್ಕಿನ್ ಟೆಸ್ಟ್' (ಅಲರ್ಜಿ ಇದೆಯೇ ಎಂದು ಪರೀಕ್ಷಿಸುವುದು) ಮಾಡಬೇಕಾಗುತ್ತದೆ.

# UPSC ಪರೀಕ್ಷೆ ಫಲಿತಾಂಶ ಪ್ರಕಟ:

## ಅನುಜ್ ಅಗ್ನಿಹೋತ್ರಿ ದೇಶಕ್ಕೇ ನಂ.1: ಕರ್ನಾಟಕಕ್ಕೆ ಕಿರಣ್ ಕಮಾಟೆ ಫಸ್ಟ್

ನವದೆಹಲಿ: ಕೇಂದ್ರ ಲೋಕಸೇವಾ ಸೇವಾ ಆಯೋಗದ (ಯುಪಿಎಸ್‌ಸಿ) 2025ನೇ ಸಾಲಿನ ಪರೀಕ್ಷಾ ಫಲಿತಾಂಶ ಇಂದು ಪ್ರಕಟವಾಗಿದ್ದು, ಕರ್ನಾಟಕದ ಕಿರಣ್ ಕಮಾಟೆ ಅವರು ರಾಜ್ಯಕ್ಕೆ ಮೊದಲ ಮತ್ತು ದೇಶಕ್ಕೆ 53ನೇ ರ್‍ಯಾಂಕ್ ಪಡೆದಿದ್ದಾರೆ. ರಾಜ್ಯದ 20 ಮಂದಿ ಯುಪಿಎಸ್‌ಸಿ ಪರೀಕ್ಷೆಯಲ್ಲಿ ಅರ್ಹತೆ ಪಡೆದಿದ್ದಾರೆ ಎಂದು ತಿಳಿದು ಬಂದಿದೆ. ಒಟ್ಟು 958 ಅಭ್ಯರ್ಥಿಗಳು ಕಠಿಣ ಪರೀಕ್ಷೆಯಲ್ಲಿ ಉತ್ತೀರ್ಣರಾಗಿದ್ದಾರೆ. ಅವರನ್ನು ವಿವಿಧ ಕೇಂದ್ರ ನಾಗರಿಕ ಸೇವೆಗಳಿಗೆ (IAS, IFS, IPS,) ನೇಮಕ ಮಾಡಲಾಗಿದೆ ಎಂದು ಆಯೋಗ ತಿಳಿಸಿದೆ.

**ಅನುಜ್ ಅಗ್ನಿಹೋತ್ರಿ ದೇಶಕ್ಕೇ ನಂ.1:** ಆಲ್ ಇಂಡಿಯಾ ರ್‍ಯಾಂಕಿಂಗ್ ನಲ್ಲಿ ರಾಜಸ್ಥಾನದ ಅನುಜ್ ಅಗ್ನಿಹೋತ್ರಿ ಅವರು ದೇಶಕ್ಕೇ ನಂ.1 ಸ್ಥಾನ ಪಡೆದಿದ್ದಾರೆ. ಎಂ.ರಾಜೇಶ್ವರಿ ಸುವೆ ಮತ್ತು ಆಕಾಶ್ ಧುಲ್ ಕ್ರಮವಾಗಿ ಎರಡು ಮತ್ತು ಮೂರನೇ ಶ್ರೇಯಾಂಕ ಪಡೆದಿದ್ದಾರೆ. ಇನ್ನೂ, 348 ಅಭ್ಯರ್ಥಿಗಳನ್ನು ತಾತ್ಕಾಲಿಕ ಪಟ್ಟಿಯಲ್ಲಿ ಇರಿಸಲಾಗಿದೆ. 1,087 ಹುದ್ದೆಗಳನ್ನು ಭರ್ತಿ ಮಾಡಲು ಕೇಂದ್ರ ಸರ್ಕಾರ ಸೂಚಿಸಿತ್ತು. ಅಭ್ಯರ್ಥಿಗಳು ತಮ್ಮ ಪರೀಕ್ಷೆಗಳು, ನೇಮಕಾತಿಗಳಿಗೆ ಸಂಬಂಧಿಸಿದ ಯಾವುದೇ ಮಾಹಿತಿ, ಸ್ಪಷ್ಟೀಕರಣ ಬೇಕಾದಲ್ಲಿ ಬೆಳಗ್ಗೆ 10 ರಿಂದ ಸಂಜೆ 5 ರವರೆಗೆ ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ 23385271/23381125/23098543 ಸಂಪರ್ಕಿಸಬಹುದು ಎಂದು ಆಯೋಗ ತಿಳಿಸಿದೆ.

**15 ದಿನದ ಬಳಿಕ ಅಂಕ ಪ್ರಕಟ:** ಇಂದು ಅಭ್ಯರ್ಥಿಗಳ ಫಲಿತಾಂಶವನ್ನು ಪ್ರಕಟಿಸಲಾಗಿದೆ. ಇದಾದ 15 ದಿನಗಳಲ್ಲಿ ಅವರು ಪಡೆದ ಅಂಕಗಳನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು ಎಂದು ಯುಪಿಎಸ್‌ಸಿ ತಿಳಿಸಿದೆ. ಭಾರತೀಯ ಆಡಳಿತ ಸೇವೆ (IAS), ಭಾರತೀಯ ವಿದೇಶಾಂಗ ಸೇವೆ (IFS) ಮತ್ತು ಭಾರತೀಯ ಪೊಲೀಸ್ ಸೇವೆ (IPS) ಸೇರಿದಂತೆ ಇತರ ಅಧಿಕಾರಿಗಳನ್ನು ಆಯ್ಕೆ ಮಾಡಲು ಯುಪಿಎಸ್‌ಸಿ ವಾರ್ಷಿಕವಾಗಿ




ನಾಗರಿಕ ಸೇವಾ ಪರೀಕ್ಷೆಯನ್ನು ಪ್ರಾಥಮಿಕ, ಮುಖ್ಯ ಮತ್ತು ಸಂದರ್ಶನ ಎಂಬ ಮೂರು ಹಂತಗಳಲ್ಲಿ ನಡೆಸುತ್ತದೆ.

**UPSC 2025 ಪರೀಕ್ಷೆಯನ್ನು ಯಾವಾಗ ನಡೆಸಲಾಯಿತು**

ಲಿಖಿತ ಮುಖ್ಯ ಪರೀಕ್ಷೆ: ಆಗಸ್ಟ್ 2025
ಸಂದರ್ಶನ: ಫೆಬ್ರವರಿ 2026
ಅಂತಿಮ ಫಲಿತಾಂಶ: ಮಾರ್ಚ್ 6, 2026

ಈ ಎಲ್ಲಾ ಹಂತಗಳ ನಂತರ, ಅಂತಿಮ ಮೆರಿಟ್ ಪಟ್ಟಿಯನ್ನು ಬಿಡುಗಡೆ ಮಾಡಲಾಗಿದೆ.

ಮಾರ್ಕೆಟ್‌ಶೀಟ್ ಸಿಗುವುದು ಯಾವಾಗ: ಯುಪಿಎಸ್‌ಸಿ ಎಲ್ಲಾ ಅಭ್ಯರ್ಥಿಗಳ ಅಂಕಪಟ್ಟಿಗಳನ್ನು ಅಂತಿಮ ಫಲಿತಾಂಶ ಘೋಷಣೆಯಾದ 15 ದಿನಗಳ ಒಳಗೆ ಆಯೋಗದ ವೆಬ್‌ಸೈಟ್‌ಗೆ ಅಪ್‌ಲೋಡ್ ಮಾಡಲಾಗುವುದು ಎಂದು ಹೇಳಿದೆ. ಈ ವೇಳೆ ಅಭ್ಯರ್ಥಿಗಳು ಮಾರ್ಕ್ ಶೀಟ್‌ಗಳನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದು. ಇದು 30 ದಿನಗಳವರೆಗೆ ಆನ್‌ಲೈನ್‌ನಲ್ಲಿ ಲಭ್ಯವಿರುತ್ತದೆ ಎಂದು ಯುಪಿಎಸ್‌ಸಿ ತಿಳಿಸಿದೆ.

# ಕರ್ನಾಟಕದ ಬೆಂಗಳೂರಿನಲ್ಲಿ ಬಂಗಾರ ದರ ಇಳಿಕೆ

ಬಂಗಾರ ದರ ಇಂದು (ಮಾರ್ಚ್ 6) ಕರ್ನಾಟಕ ರಾಜಧಾನಿ ಬೆಂಗಳೂರು ಸೇರಿದಂತೆ ದೇಶದ ಪ್ರಮುಖ ನಗರಗಳಲ್ಲಿ ಇಳಿಕೆಯಾಗಿದೆ.

ಹಾಗಾದ್ರೆ, ಯಾವ್ಯಾವ ನಗರಗಳಲ್ಲಿ ಎಷ್ಟಿದೆ ಎನ್ನುವ ಅಂಕಿಅಂಶಗಳನ್ನು ಇಲ್ಲಿ ನೀಡಲಾಗಿದೆ ತಿಳಿಯಿರಿ.

ನಿನ್ನೆ (ಮಾರ್ಚ್ 5) ಬೆಂಗಳೂರು ಸೇರಿದಂತೆ ದೇಶದ ಬಹುತೇಕ ಕಡೆಗಳಲ್ಲಿ 10 ಗ್ರಾಂ (22 ಕ್ಯಾರೆಟ್) ಬಂಗಾರ ದರ 1,49,300 ರೂಪಾಯಿ ಇದ್ದರೆ, ಇಂದು (ಮಾರ್ಚ್ 6) 1,48,600 ರೂಪಾಯಿಗೆ ಇದೆ. ಇನ್ನೂ 10 ಗ್ರಾ (24 ಕ್ಯಾರೆಟ್) ನಿನ್ನೆ ದರ 1,62,880 ರೂಪಾಯಿ ಇತ್ತು.

ಇನ್ನು ಇಂದು ಕೂಡ 1,62,110 ರೂಪಾಯಿಗೆ ಇದ್ದು, ನಿನ್ನೆಯ ದರವೇ ಮುಂದುವರೆದಿದೆ. ಹಾಗಾದ್ರೆ, ಕರ್ನಾಟಕ ರಾಜಧಾನಿ ಬೆಂಗಳೂರು ಸೇರಿದಂತೆ ಉಳಿದ ದೇಶದ ಪ್ರಮುಖ ನಗರಗಳಲ್ಲಿ ಎಷ್ಟಿದೆ ಎನ್ನುವ ಪ್ರಶ್ನೆಗೆ ಉತ್ತರ ಇಲ್ಲಿದೆ ನೋಡಿ.



**8 ಗ್ರಾಂ ಬಂಗಾರ ದರ**

* 22 ಕ್ಯಾರೆಟ್ ಚಿನ್ನದ ಬೆಲೆ – 1,18,880 ರೂಪಾಯಿ
* 24 ಕ್ಯಾರೆಟ್ ಚಿನ್ನದ ಬೆಲೆ (ಅಪರಂಜಿ) – 1,29,688 ರೂಪಾಯಿ

**10 ಗ್ರಾಂ ಬಂಗಾರ ದರ**

* 22 ಕ್ಯಾರೆಟ್ ಚಿನ್ನದ ದರ – 1,48,600 ರೂಪಾಯಿ
* 24 ಕ್ಯಾರೆಟ್ ಬಂಗಾರ ದರ (ಅಪರಂಜಿ) – 1,62,110 ರೂಪಾಯಿ

**ವಿವಿಧ ನಗರಗಳಲ್ಲಿ ಬಂಗಾರ ದರ 22 ಕ್ಯಾರೇಟ್ (10 ಗ್ರಾಂ)**

* ಬೆಂಗಳೂರು – 1,48,600 ರೂಪಾಯಿ
* ಚೆನ್ನೈ – 1,49,600 ರೂಪಾಯಿ
* ಮುಂಬೈ – 1,48,600 ರೂಪಾಯಿ
* ಕೋಲ್ಕತ್ತಾ – 1,48,600 ರೂಪಾಯಿ
* ನವದೆಹಲಿ – 1,48,750 ರೂಪಾಯಿ
* ಹೈದರಾಬಾದ್ – 1,48,600 ರೂಪಾಯಿ

# ಬೆಂಗಳೂರಿನಲ್ಲಿರೋದು ಕೇವಲ 400 ಮಾರ್ಷಲ್‌ಗಳು: ನಿಭಾಯಿಸಬೇಕಿದೆ ಹಲವಾರು ಕೆಲಸಗಳು!

ಬೆಂಗಳೂರು: ಬೆಂಗಳೂರಿನಲ್ಲಿ ವಿವಿಧ ಕರ್ತವ್ಯಗಳಿಗೆ ನಿಯೋಜಿಸಲಾದ 400ಕ್ಕೂ ಹೆಚ್ಚು ಮಾರ್ಷಲ್‌ಗಳು ಈಗ ಘನತ್ಯಾಜ್ಯ ನಿರ್ವಹಣೆಯ ಕೆಲಸವನ್ನು ವಹಿಸಿಕೊಳ್ಳಲಿದ್ದಾರೆ. ನಾಗರಿಕ ಆಡಳಿತವು ಇಂದಿರಾ ಕ್ಯಾಂಟೀನ್‌ಗಳು ಮತ್ತು ಕೆರೆಗಳ ಸಮೀಪ ನಿಯೋಜಿಸಲಾದ ಮಾರ್ಷಲ್‌ಗಳನ್ನು ಇತರ ಕರ್ತವ್ಯಗಳಿಗೆ ಸ್ಥಳಾಂತರಿಸುತ್ತಿದೆ. ಕಸ ಸುಡುವುದು, ಕಸ ಸುರಿಯುವ ಸ್ಥಳಗಳ ಪರಿಶೀಲನೆ, ಆಟೋ ಟಿಪ್ಪರ್‌ಗಳ ಹಾಜರಾತಿ, ರಾತ್ರಿ ಗಸ್ತು ಮತ್ತು ಸ್ವಚ್ಛ ಸರ್ವೇಕ್ಷಣ ಕಾರ್ಯಗಳು ಸೇರಿದಂತೆ ನಾಗರಿಕರ ದೂರುಗಳನ್ನು ಅವರು ನಿರ್ವಹಿಸಲಿದ್ದಾರೆ.

ಅಲ್ಲದೆ, ರಾಷ್ಟ್ರೀಯ ಹಸಿರು ನ್ಯಾಯ ಮಂಡಳಿ (ಎನ್‌ಜಿಟಿ) ನಿರ್ದೇಶನದಂತೆ, ಬೆಳ್ಳಂದೂರು ಮತ್ತು ವರ್ತೂರು ಕೆರೆಗಳಲ್ಲಿ ಎಂಟು ಮಾರ್ಷಲ್‌ಗಳನ್ನು ನಿಯೋಜಿಸಲಾಗಿದೆ. ಕಸ ಸುರಿಯುವ ಸ್ಥಳಗಳಲ್ಲಿ ಸದ್ಯ 54 ಮಾರ್ಷಲ್‌ಗಳು ಕೆಲಸ ಮಾಡುತ್ತಿದ್ದರೆ, ಇನ್ನೂ 50 ಮಾರ್ಷಲ್‌ಗಳು ಘನತ್ಯಾಜ್ಯ ನಿರ್ವಹಣಾ ಘಟಕಗಳಲ್ಲಿದ್ದಾರೆ. ಕೆಆರ್ ಮಾರುಕಟ್ಟೆಯಲ್ಲಿ ಆರು ಮತ್ತು ಮಡಿವಾಳ ಮಾರುಕಟ್ಟೆಯಲ್ಲಿ ನಾಲ್ವರು ಕರ್ತವ್ಯದಲ್ಲಿದ್ದಾರೆ. ಬೆಂಗಳೂರಿನಲ್ಲಿ ಮಾರ್ಷಲ್‌ಗಳು ಅನೇಕ ಜವಾಬ್ದಾರಿಗಳನ್ನು ಹೊಂದಿದ್ದರೂ, ಹೆಚ್ಚಿನ ಮಾರ್ಷಲ್‌ಗಳನ್ನು ನೇಮಿಸಿಕೊಳ್ಳುವುದಿಲ್ಲ.

ಹೆಸರು ಬಹಿರಂಗಪಡಿಸಲು ಬಯಸದ ಮಾರ್ಷಲ್ ಒಬ್ಬರು, 'ಮಾಡಲು ತುಂಬಾ ಕೆಲಸವಿದೆ.

ಆದರೆ, ಜನರು ಮತ್ತು ಅಧಿಕಾರಿಗಳನ್ನು ನಿರ್ವಹಿಸುವುದು ದೊಡ್ಡ ಸವಾಲಾಗಿದೆ. ನಾಗರಿಕರು ಕೇಳಲು ಮತ್ತು ಸಹಕರಿಸಲು



ಗ್ರೇಟರ್ ಬೆಂಗಳೂರು ಪ್ರಾಧಿಕಾರ (GBA) ಮತ್ತು ಬೆಂಗಳೂರು ಘನತ್ಯಾಜ್ಯ ನಿರ್ವಹಣಾ ಲಿಮಿಟೆಡ್ (BSWML) ನಂತಹ ಸಂಸ್ಥೆಗಳು, ಸಿಬ್ಬಂದಿಯನ್ನು ಹೆಚ್ಚಿಸಲು ಯೋಜಿಸಿಲ್ಲ. 'ವಾರ್ಡ್‌ಗಳ ಸಂಖ್ಯೆಯ ವಿಸ್ತರಣೆಯ ಬಗ್ಗೆ ಸ್ಪಷ್ಟತೆ ಇಲ್ಲ.

ಇನ್ನೂ ಯಾವುದನ್ನೂ ಅಂತಿಮಗೊಳಿಸಲಾಗಿಲ್ಲ. ಹೆಚ್ಚಿನ ಸಿಬ್ಬಂದಿ ಸೇರಿಸಲು ಹಣದ ಕೊರತೆಯೂ ಇದೆ. ಆದ್ದರಿಂದ ಅಸ್ತಿತ್ವದಲ್ಲಿರುವ ಸಿಬ್ಬಂದಿಯೊಂದಿಗೆ ಕೆಲಸ ಮಾಡಲು ನಿರ್ಧರಿಸಲಾಗಿದೆ' ಎಂದು ಜಿಬಿಎ ಮೂಲಗಳು ತಿಳಿಸಿವೆ.

ಬೆಂಗಳೂರಿನ ಮಾರ್ಷಲ್‌ಗಳ ಹಿರಿಯ ಸಂಯೋಜಕ ಕರ್ನಲ್ ರಾಜ್‌ಬೀರ್ ಮಾತನಾಡಿ, ಹೆಚ್ಚಿನ ಮಾರ್ಷಲ್‌ಗಳನ್ನು ನೇಮಿಸಿಕೊಳ್ಳುವ ಬಗ್ಗೆ ಯಾವುದೇ ನಿರ್ಧಾರ ತೆಗೆದುಕೊಂಡಿಲ್ಲ. ಸದ್ಯ ಇರುವ ಮಾರ್ಷಲ್‌ಗಳು ಈಗಾಗಲೇ ಹೆಚ್ಚಿನ ಕೆಲಸ ಮಾಡುತ್ತಿದ್ದಾರೆ. ಕೆಲಸದ ಹೊರೆ ನಿರ್ವಹಿಸಲು ಅವರನ್ನು ಹಗಲು ಮತ್ತು ರಾತ್ರಿ ಪಾಳಿಗಳ ನಡುವೆ ಸ್ಥಳಾಂತರಿಸಲಾಗುತ್ತಿದೆ ಎಂದರು.

ಬಯಸುವುದಿಲ್ಲ. ಒಂದು ದಿನ, ಇಂದಿರಾ ಕ್ಯಾಂಟೀನ್‌ನಲ್ಲಿ ಕೆಲಸ ಮಾಡಲು ನಮ್ಮನ್ನು ಕೇಳಲಾಗುತ್ತದೆ ಮತ್ತು ಮರುದಿನ ನಾವು ಬ್ಲಾಕ್ ಸ್ಪಾಟ್‌ಗಳನ್ನು ನಿರ್ವಹಿಸಬೇಕು ಮತ್ತು ಜನರು ರಸ್ತೆಗಳಲ್ಲಿ ತ್ಯಾಜ್ಯ ಸುರಿಯದಂತೆ ನೋಡಿಕೊಳ್ಳಲು ರಾತ್ರಿ ಗಸ್ತು ಕರ್ತವ್ಯಕ್ಕೆ ಹೋಗಬೇಕಾಗುತ್ತದೆ. ಜನರಿಗೆ ದಂಡ ವಿಧಿಸಲು ನಮ್ಮನ್ನು ಆರೋಗ್ಯ ನಿರೀಕ್ಷಕರೊಂದಿಗೆ ನೇಮಿಸಲಾಗುತ್ತದೆ.

ಕೆಲವೇ ದಿನಗಳಲ್ಲಿ ಇದನ್ನು ನಿಭಾಯಿಸಲು ನಮ್ಮ ಸೀಮಿತ ಕಾರ್ಯಪಡೆಗೆ ತುಂಬಾ ಕಷ್ಟ' ಎಂದರು. ಬಿಎಸ್‌ಡಬ್ಲ್ಯುಎಂಎಲ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕರೀ ಗೌಡ ಮಾತನಾಡಿ, 400ಕ್ಕೂ ಹೆಚ್ಚು ಮಾರ್ಷಲ್‌ಗಳಿದ್ದು, ಸದ್ಯಕ್ಕೆ ಅವರ ಸಂಖ್ಯೆ ಸಾಕಾಗುತ್ತದೆ. ಹೆಚ್ಚಿನವರನ್ನು ನಿಯೋಜಿಸುವ ಬದಲು, ನಾಗರಿಕರು ಘನತ್ಯಾಜ್ಯ ನಿರ್ವಹಣಾ ನಿಯಮಗಳನ್ನು ಪಾಲಿಸುವುದು ಮುಖ್ಯ. ಜನರಲ್ಲಿ ಜಾಗೃತಿ ಮೂಡಿಸುವ ಅವಶ್ಯಕತೆಯಿದೆ ಮತ್ತು ಅದು ಈಗಿನ ಗಮನವಾಗಿದೆ ಎಂದು ಅವರು ಹೇಳಿದರು.

# ವಿದ್ಯಾರ್ಥಿಗಳ ಮೇಲೆ ಜಾತಿ ಆಧಾರಿತ ದೌರ್ಜನ್ಯ ತಡೆಗೆ Rohith Vemula Act ಜಾರಿ, ಹುಬ್ಬಳ್ಳಿ–ಕಲಬುರಗಿಯಲ್ಲಿ ಹಜ್ ಭವನ ಸ್ಥಾಪನೆ

ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶುಕ್ರವಾರ 2026–27ನೇ ಸಾಲಿನ ರಾಜ್ಯ ಬಜೆಟ್‌ನ್ನು ಮಂಡಿಸಿದರು. ರಾಜ್ಯದ ಸಮಗ್ರ ಅಭಿವೃದ್ಧಿಗೆ ಹಲವು ಹೊಸ ಯೋಜನೆಗಳು ಮತ್ತು ಅಭಿವೃದ್ಧಿ ಕಾರ್ಯಕ್ರಮಗಳನ್ನು ಈ ಬಜೆಟ್‌ನಲ್ಲಿ ಘೋಷಿಸಲಾಗಿದೆ. ಬಜೆಟ್ ಭಾಷಣದಲ್ಲಿ, ರಾಜ್ಯದ ಎಲ್ಲಾ ಸರ್ಕಾರಿ, ಖಾಸಗಿ ಹಾಗೂ ಡೀಮ್ಡ್ ವಿಶ್ವ ವಿದ್ಯಾಲಯಗಳಲ್ಲಿ ವಿದ್ಯಾರ್ಥಿಗಳ ಮೇಲಿನ ಜಾತಿ ಆಧಾರಿತ ದೌರ್ಜನ್ಯವನ್ನು ತಡೆಯಲು Rohith Vemula Act ಜಾರಿಗೆ ತರಲಾಗುತ್ತದೆ ಎಂದು ಘೋಷಿಸಿದರು. ಈ ಕಾಯ್ದೆಗೆ ರೋಹಿತ್ ವೇಮುಲ ಅವರ ಹೆಸರನ್ನು ನೀಡಲಾಗಿದೆ ಎಂದು ಘೋಷಿಸಿದರು. ಆರೋಗ್ಯ ಕ್ಷೇತ್ರದಲ್ಲಿ, ಕಾರವಾರದಲ್ಲಿ 198 ಕೋಟಿ ವೆಚ್ಚದಲ್ಲಿ 450 ಹಾಸಿಗೆಗಳ ಮಲ್ಟಿ–ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಿಸಲಾಗುತ್ತದೆ. ಜೊತೆಗೆ ರಾಯಚೂರಿನಲ್ಲಿ 10 ಕೋಟಿ ವೆಚ್ಚದಲ್ಲಿ ಟ್ರಾಮಾ ಕೇರ್ ಸೆಂಟರ್ ಸ್ಥಾಪಿಸಲಾಗುತ್ತದೆ. ಇದೇ ವೇಳೆ 92 ಕೋಟಿ ವೆಚ್ಚದಲ್ಲಿ ಮೈಸೂರು ಮತ್ತು ತುಮಕೂರುಗಳಲ್ಲಿ ಪೆರಿಫೆರಲ್ ಕ್ಯಾನ್ಸರ್ ಕೇಂದ್ರಗಳನ್ನು ಆರಂಭಿಸಲಾಗುತ್ತದೆ. ಹಜ್ ಯಾತ್ರಿಕರ ಸೌಲಭ್ಯಕ್ಕಾಗಿ ಹುಬ್ಬಳ್ಳಿ ಮತ್ತು ಕಲಬುರಗಿಗಳಲ್ಲಿ ಹಜ್ ಭವನಗಳನ್ನು ನಿರ್ಮಿಸಲಾಗುತ್ತದೆ. ಹೆಚ್ಚಿನ ವಾಣಿಜ್ಯ ಬೇಡಿಕೆಯಿರುವ ಪ್ರದೇಶಗಳಲ್ಲಿ ಇರುವ ವಕ್ಫ್ ಆಸ್ತಿಗಳನ್ನು ಪಬ್ಲಿಕ್–ಪ್ರೈವೇಟ್ ಪಾರ್ಟ್ನರ್‌ಶಿಪ್ (PPP) ಮಾದರಿಯಲ್ಲಿ ಅಭಿವೃದ್ಧಿ ಪಡಿಸಲಾಗುತ್ತದೆ ಎಂದು ಅವರು ಹೇಳಿದರು.

ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಿಗೆ "ಮಹಾತ್ಮ ಗಾಂಧಿ ಗ್ರಾಮ ಪಂಚಾಯಿತಿಗಳು" ಎಂದು ಮರುನಾಮಕರಣ ಮಾಡುವುದಾಗಿ ಮುಖ್ಯಮಂತ್ರಿ ಘೋಷಿಸಿದರು. ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಹೆಚ್ಚುತ್ತಿರುವ ಸಂಚಾರವನ್ನು ಕಡಿಮೆ ಮಾಡಲು ಬೆಂಗಳೂರಿನಲ್ಲಿ ಎರಡನೇ ವಿಮಾನ ನಿಲ್ದಾಣ ಅಭಿವೃದ್ಧಿ ಪಡಿಸಲು ಯೋಜಿಸಲಾಗಿದೆ. ಇದಕ್ಕಾಗಿ ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರ ತಾಂತ್ರಿಕ ಸಲಹೆ ಪಡೆದು ಸಾಧ್ಯತಾ ವರದಿ ಸಿದ್ಧಪಡಿಸಲಾಗುತ್ತದೆ.

ರಾಜ್ಯದ ಏಳು ದೇಶೀಯ ವಿಮಾನ ನಿಲ್ದಾಣಗಳ ಅಭಿವೃದ್ಧಿಗೆ ಈಗಾಗಲೇ 1,593 ಕೋಟಿ ಬಿಡುಗಡೆ ಮಾಡಲಾಗಿದೆ. ಈ ವರ್ಷಕ್ಕೆ 200 ಕೋಟಿ ಮೀಸಲಿಡ ಲಾಗಿದೆ. ವಿಜಯಪುರ ವಿಮಾನ ನಿಲ್ದಾಣದಲ್ಲಿ ಫ್ಲೈಟ್ ತರಬೇತಿ ಶಾಲೆ ಆರಂಭಿಸಲಾಗುತ್ತದೆ. ಶಿವಮೊಗ್ಗ ವಿಮಾನ ನಿಲ್ದಾಣದಲ್ಲಿ ಪಿಪಿಪಿ ಮಾದರಿಯಲ್ಲಿ ವಿಮಾನ ತಯಾರಿಕೆ ಮತ್ತು ಅಸೆಂಬ್ಲಿ ಚಟುವಟಿಕೆಗಳನ್ನು ಕೈಗೊಳ್ಳಲಾಗುತ್ತದೆ. ತದಡಿಯಲ್ಲಿ ಪರಿಸರ ಸ್ನೇಹಿ ವಸತಿ ವ್ಯವಸ್ಥೆಗಳು, ವಾಕಿಂಗ್ ಕಾರಿಡಾರ್‌ಗಳು, ಪ್ರವಾಸಿ ಮಾಹಿತಿ ಕೇಂದ್ರಗಳು ಸೇರಿದಂತೆ ಮೂಲಸೌಕರ್ಯವನ್ನು ಪಿಪಿಪಿ ಮಾದರಿಯಲ್ಲಿ ಅಭಿವೃದ್ಧಿ ಪಡಿಸ ಲಾಗುತ್ತದೆ. ರೈಲ್ವೆ ಸಚಿವಾಲ ಯದೊಂದಿಗೆ 50:50 ವೆಚ್ಚ ಹಂಚಿಕೆ ಆಧಾರದಲ್ಲಿ ಒಂಬತ್ತು ರೈಲು ಮಾರ್ಗ ಯೋಜನೆಗಳನ್ನು ಜಾರಿಗೆ ತರಲಾಗುತ್ತಿದೆ. ಇದುವರೆಗೆ ಭೂಸ್ವಾಧೀನಕ್ಕೆ 2,950 ಕೋಟಿ ರೂಪಾಯಿ ಹಾಗೂ ನಿರ್ಮಾಣಕ್ಕೆ 2,682



ಕೋಟಿ ರೂ ವೆಚ್ಚವಾಗಿದೆ. 2026–27ನೇ ಬಜೆಟ್‌ನಲ್ಲಿ ಈ ಯೋಜನೆಗಳಿಗೆ 600 ಕೋಟಿ ರೂಪಾಯಿ ಮೀಸಲಿಡಲಾಗಿದೆ.

**ಬೆಂಗಳೂರು ಮೂಲಭೂತ ಸೌಕರ್ಯ**

ಬೆಂಗಳೂರು ಮೂಲ ಸೌಕರ್ಯ ಅಭಿವೃದ್ಧಿಗೆ ಒತ್ತು ನೀಡಿರುವ ಮುಖ್ಯಮಂತ್ರಿ, Outer Ring Road ಬೆಂಗಳೂರಿನ ಸಿಲ್ಕ್ ಬೋರ್ಡ್ ಜಂಕ್ಷನ್ ನಿಂದ ಕೃಷ್ಣರಾಜಪುರ ಮೆಟ್ರೊ ನಿಲ್ದಾಣದವರೆಗೆ ಇರುವ ಭಾಗವನ್ನು 450 ಕೋಟಿ ರೂಪಾಯಿ ವೆಚ್ಚದಲ್ಲಿ ಜಾಗತಿಕ ಮಟ್ಟದ ಕಾರಿಡಾರ್ ಆಗಿ ಅಭಿವೃದ್ಧಿ ಪಡಿಸಲಾಗುತ್ತದೆ ಎಂದು ಘೋಷಿಸಿದರು. ಇದರ ಜೊತೆಗೆ ಬೆಂಗಳೂರಿನ ಐದು ನಗರ ಪಾಲಿಕೆಗಳಲ್ಲಿ 1,255 ಕೋಟಿ ರೂಪಾಯಿ ವೆಚ್ಚದಲ್ಲಿ ಮೂಲ ಸೌಕರ್ಯ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿವೆ. ನಗರದ ರಸ್ತೆಗಳ ದೀರ್ಘಾಯುಷ್ಯ ಮತ್ತು ಸಂಚಾರ ಸುಗಮತೆಗೆ 158 ಕಿಮೀ ರಸ್ತೆಗಳಿಗೆ 1,700 ಕೋಟಿ ರೂಪಾಯಿ ವೆಚ್ಚದಲ್ಲಿ ವೈಟ್ ಟಾಪಿಂಗ್ ಕಾಮಗಾರಿ ಕೈಗೊಳ್ಳಲಾಗಿದೆ. ಗ್ರಾಮೀಣ ಉದ್ಯೋಗ ಕ್ಷೇತ್ರದಲ್ಲಿ ನರೇಗಾ ಅಡಿಯಲ್ಲಿ ಸುಮಾರು 182 ಕೋಟಿ ಮಾನವ–ದಿನಗಳ ಉದ್ಯೋಗ ಸೃಷ್ಟಿಯಾಗಿದ್ದು, 61,000 ಕೋಟಿ ರೂಪಾಯಿ ವೇತನ ಪಾವತಿ ಮಾಡಲಾಗಿದೆ. ಇದರಿಂದ ಸುಮಾರು 77 ಲಕ್ಷ ಗ್ರಾಮೀಣ ಕುಟುಂಬಗಳಿಗೆ ಲಾಭವಾಗಿದೆ.

ಇದೇ ವೇಳೆ ರಾಜ್ಯದ ಕಾಲೇಜುಗಳು ಮತ್ತು ವಿಶ್ವವಿದ್ಯಾಲಯಗಳಲ್ಲಿ ವಿದ್ಯಾರ್ಥಿ ಸಂಘಗಳ ಚುನಾವಣೆಗ 'ಳನ್ನು ನಡೆಸ ಲಾಗುತ್ತದೆ ಎಂದು ಮುಖ್ಯಮಂತ್ರಿ ಘೋಷಿಸಿದರು. ನಮ್ಮ ಮೆಟ್ರೊ ಯೋಜನೆ ಕುರಿತು ಮಾತನಾಡಿದ ಅವರು, ಇದುವರೆಗೆ ಒಟ್ಟು 67,460 ಕೋಟಿ ವೆಚ್ಚವಾಗಿದೆ. ಇದರಲ್ಲಿ ರಾಜ್ಯ ಸರ್ಕಾರದ ಪಾಲು 59,376 ಕೋಟಿ (88%) ಆಗಿದ್ದು, ಕೇಂದ್ರ ಸರ್ಕಾರದ ಪಾಲು 8,084 ಕೋಟಿ (12%) ಎಂದು ತಿಳಿಸಿದ್ದಾರೆ.

# ಪದವೀಧರರಿಗೆ ರಾಜ್ಯ ಸರ್ಕಾರದಿಂದ ಬೋಧನಾ ಹುದ್ದೆಗಳಿಗೆ ತರಬೇತಿ ಪ್ರಾರಂಭ

ಬೆಂಗಳೂರು: ಹೊಸ ಪದವೀಧರರಿಗೆ ರಾಜ್ಯ ಶಿಕ್ಷಣ ಮಂಡಳಿ ಮತ್ತು ಕೇಂದ್ರ ಮಾಧ್ಯಮಿಕ ಶಿಕ್ಷಣ ಮಂಡಳಿ (CBSE) ಗೆ ಸಂಯೋಜಿತವಾಗಿರುವ ಖಾಸಗಿ ಶಾಲೆಗಳಲ್ಲಿ ಶಿಕ್ಷಕರಾಗಿ ನೇಮಕಗೊಳ್ಳಲು ತರಬೇತಿ ಕಾರ್ಯಕ್ರಮವನ್ನು ಸರ್ಕಾರ ಪ್ರಾರಂಭಿಸಿದೆ.

ಇದಕ್ಕಾಗಿ, ಕರ್ನಾಟಕ ಕೌಶಲ್ಯ ಅಭಿವೃದ್ಧಿ



ನಿಗಮವು, ಭಾರತ ರತ್ನ ಸರ್ ಎಂ ವಿಶ್ವೇಶ್ವರಯ್ಯ ರಾಷ್ಟ್ರೀಯ ಕೌಶಲ್ಯ ತರಬೇತಿ ಸೌಲಭ್ಯ (BMVNTFSA) ಜೊತೆಗೆ ಕಲೆ, ವಿಜ್ಞಾನ ಮತ್ತು ಕಂಪ್ಯೂಟರ್ ವಿಜ್ಞಾನ ಹಿನ್ನೆಲೆ ಹೊಂದಿರುವ ಹೊಸ ಪದವೀಧರರಿಗೆ ತರಬೇತಿ ಕಾರ್ಯಕ್ರಮವನ್ನು ಆರಂಭಿಸಿದೆ.

"2022, 2023, 2024 ಮತ್ತು 2025ನೇ ಸಾಲಿನಲ್ಲಿ ಬಿ.ಎಸ್ಸಿ, ಎಂ.ಎಸ್ಸಿ, ಬಿಸಿಎ, ಎಂಸಿಎ, ಎಂಎ (ಸಮಾಜಶಾಸ್ತ್ರ ಮತ್ತು ಇಂಗ್ಲಿಷ್), ಬಿಎ, ಬಿಇ ಪದವಿ ಪಡೆದಿರುವ ಪದವೀಧರರು ತರಬೇತಿ ಕಾರ್ಯಕ್ರಮಕ್ಕೆ ಅರ್ಜಿ ಸಲ್ಲಿಸಬಹುದು.

ಹ್ಯಾಂಡ್ಸ್ ಆನ್ ಫೌಂಡೇಶನ್ ಮತ್ತು ಕನೆಕ್ಟಿಂಗ್ ದಿ ಡಾಟ್ಸ್ ಸಂಸ್ಥೆ ಈ ಪದವೀಧರರು ಉತ್ತಮ ಶಿಕ್ಷಕರಾಗಲು ತರಬೇತಿ ನೀಡಲು ಸಂಪನ್ಮೂಲ ವ್ಯಕ್ತಿಗಳನ್ನು ಒದಗಿಸುತ್ತದೆ. ಇದು ಅವರ ಪ್ರಸ್ತುತಿ, ಸಂವಹನ ಕೌಶಲ್ಯ ಮತ್ತು ಖಖಿಇಒ ಜ್ಞಾನವನ್ನು ಉತ್ತಮಗೊಳಿಸಲು ನಾಲ್ಕು ವಾರಗಳ ವಸತಿ ಕಾರ್ಯಕ್ರಮವಾಗಿದೆ.

ಇವರಿಗೆ ತರಬೇತಿ ನೀಡುವ ಅಧ್ಯಾಪಕರು ನಾಲ್ಕು ವಾರಗಳ ತರಬೇತಿಯ ನಂತರವೂ ಅವರಿಗೆ ವರ್ಷವಿಡೀ ಮಾರ್ಗದರ್ಶನ ನೀಡಲು ಸಾಧ್ಯವಾಗುತ್ತದೆ ಎಂದು ಅವರು ಹೇಳಿದರು.

ಯುವ ನಿಧಿ ಫಲಾನುಭವಿಗಳಿಗೆ ಉದ್ಯೋಗ ಸಿಗುವಂತೆ ಹೆಚ್ಚಿನ ಆದ್ಯತೆ ನೀಡಲಾಗುತ್ತದೆ. 28 ದಿನಗಳ ಕಾರ್ಯಕ್ರಮ ಪೂರ್ಣಗೊಂಡ ನಂತರ, ಅಭ್ಯರ್ಥಿಗಳಿಗೆ ಸಂದರ್ಶನ ನಡೆಸಲು ಶಾಲೆಗಳು ಬರುತ್ತವೆ ಮತ್ತು ಶಾರ್ಟ್‌ಲಿಸ್ಟ್ ಮಾಡಿದ ಶಾಲೆಗಳಲ್ಲಿ ಉದ್ಯೋಗ ದೊರೆಯುತ್ತದೆ.

ಚಿತ್ರದುರ್ಗ, ತರೀಕೆರೆ, ತುಮಕೂರು, ದಾವಣಗೆರೆ ಮತ್ತು ಇತರ ಜಿಲ್ಲೆಗಳ ಶಾಲೆಗಳು ನೇಮಕಾತಿಗಾಗಿ ಸಂದರ್ಶನ ನಡೆಸಲಿವೆ.

# ಚುನಾವಣೆ ಬಂದಾಗ ಸಾಮಾಜಿಕ ನ್ಯಾಯ, ರಾಜಕೀಯ ಆಪತ್ತು ಎದುರಾದಾಗ ಅಹಿಂದ ನೆನಪಾಗುತ್ತೆ: ಸಿಎಂ ವಿರುದ್ಧ HDK ವಾಗ್ದಾಳಿ

ಬೆಂಗಳೂರು: ಒಳ ಮೀಸಲಾತಿ ವಿಚಾರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸ್ಪಷ್ಟ ನಿರ್ಧಾರ ಕೈಗೊಳ್ಳದೆ ಪಲಾಯನ ಮಾಡುತ್ತಿದ್ದಾರೆ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಟೀಕಿಸಿದ್ದಾರೆ.

ನಗರದ ಜೆಡಿಎಸ್ ರಾಜ್ಯ ಕಚೇರಿ ಜೆಪಿ ಭವನದಲ್ಲಿ ನಡೆದ ಮಾಲೂರು ವಿಧಾನಸಭೆ ಕ್ಷೇತ್ರದ ಹಿರಿಯ ಮುಖಂಡ ಹೂಡಿ ವಿಜಯ ಕುಮಾರ್ ಅವರ ಪಕ್ಷ ಸೇರ್ಪಡೆ ಹಾಗೂ ಅವರ ನೇತೃತ್ವದ ಸ್ವಾಭಿಮಾನಿ ಜನತಾ ಪಕ್ಷದ ವಿಲೀನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ಅವರು ಎಂಟು ವರ್ಷಗಳ ಕಾಲ ಮುಖ್ಯಮಂತ್ರಿ ಆಗಿದ್ದು, ದೇವರಾಜ ಅರಸು ಅವರ ದಾಖಲೆ ಮುರಿದಿದ್ದಾರೆ.



ಅಹಿಂದಾ ನಾಯಕರು ಎಂದು ಹೇಳಿಕೊಳ್ಳುವ ಅವರು ಜಾತಿ ಹೆಸರಿನಲ್ಲಿ ರಾಜಕೀಯ ಲಾಭ ಪಡೆದಿದ್ದಾರೆ. ಆದರೂ ಒಳ ಮೀಸಲಾತಿ ಬಗ್ಗೆ ಇನ್ನೂ ನಿರ್ಧಾರ ಕೈಗೊಳ್ಳದಿರುವುದು ಆಶ್ಚರ್ಯಕರ ಎಂದು ಹೇಳಿದರು. ಸಾಮಾಜಿಕ ನ್ಯಾಯದ ಮಾತು ಚುನಾವಣೆ ಬಂದಾಗ ಅಥವಾ ರಾಜಕೀಯ ಆಪತ್ತು ಎದುರಾದಾಗ ಮಾತ್ರ ಅವರಿಗೆ ನೆನಪಾಗುತ್ತದೆ. ನಂತರ ಅಹಿಂದಾ ಎಲ್ಲಿಗೆ ಹೋಗುತ್ತದೆ ಎಂಬುದನ್ನು ಜನರು ಗಮನಿಸಬೇಕು ಎಂದು ಅವರು ಹೇಳಿದರು.

ಮಾಜಿ ಪ್ರಧಾನಿ ಎಚ್‌ಡಿ ದೇವೇಗೌಡರು ಸಾಮಾಜಿಕ ನ್ಯಾಯಕ್ಕಾಗಿ ಹೋರಾಡಿದರು ಮತ್ತು ಅನೇಕ ಸಮುದಾಯಗಳು ಮೀಸಲಾತಿಯ ಪ್ರಯೋಜನ ಪಡೆಯುವಂತೆ ನೋಡಿಕೊಂಡರು ಎಂದು ಅವರು ಹೇಳಿದರು. ಇದು ಸರ್ಕಾರಿ ನೇಮಕಾತಿಗಳಲ್ಲಿ ಹಾಗೂ ಶಾಸಕಾಂಗ ಸಭೆಯಲ್ಲಿ ಸ್ಪಷ್ಟವಾಗಿದೆ.

ಕಳೆದ 10 ವರ್ಷಗಳಿಂದ ಮೀಸಲಾತಿಯ ಪ್ರಯೋಜನ ಪಡೆದ ಸಮುದಾಯಗಳ ಪಟ್ಟಿಯನ್ನು ಬಿಡುಗಡೆ ಮಾಡುವಂತೆ ರಾಜ್ಯ ಸರ್ಕಾರವನ್ನು ಕುಮಾರಸ್ವಾಮಿ ಒತ್ತಾಯಿಸುತ್ತಿದ್ದೇನೆ.ಪಟ್ಟಿ ಬಿಡುಗಡೆಯಾದರೆ, ಸಿದ್ದರಾಮಯ್ಯ ಅವರ ನಿಜವಾದ ಬಣ್ಣ ಬಯಲಾಗುತ್ತದೆ ಎಂದು ಅವರು ಹೇಳಿದರು.

ರಾಜ್ಯದ ಎಲ್ಲಾ ಸಮುದಾಯಗಳು ಜನಪರವಾಗಿ ಪ್ರಾಮಾಣಿಕವಾಗಿ ಕೆಲಸ ಮಾಡುವ ಸರ್ಕಾರಕ್ಕೆ ಆಶೀರ್ವಾದ ನೀಡಬೇಕು. ಐದು ವರ್ಷಗಳಲ್ಲಿ ರಾಜ್ಯದಲ್ಲಿ ನಡೆದ ಅನ್ಯಾಯಗಳನ್ನು ಸರಿಪಡಿಸುವ ಕೆಲಸ ಮಾಡುತ್ತೇನೆ ಎಂದು ಅವರು ಹೇಳಿದರು.

# ಕರ್ನಾಟಕ ಬಜೆಟ್ 2026: 'ಗೃಹಲಕ್ಷ್ಮಿ'ಯರಿಗೆ ಸಿಎಂ ಸಿದ್ದರಾಮಯ್ಯ ಸಿಹಿ ಸುದ್ದಿ, 28 ಸಾವಿರ ಕೋಟಿ ಹಂಚಿಕೆ

ಬೆಂಗಳೂರು: 17ನೇ ಬಾರಿಗೆ ದಾಖಲೆಯ ಬಜೆಟ್ ಮಂಡಿಸುತ್ತಿರುವ ಸಿಎಂ ಸಿದ್ದರಾಮಯ್ಯ ರಾಜ್ಯದ ಮಹಿಳೆಯರಿಗೆ ಸಿಹಿಸುದ್ದಿ ನೀಡಿದ್ದು, ರಾಜ್ಯ ಸರ್ಕಾರದ ಪ್ರಮುಖ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ 'ಗೃಹಲಕ್ಷ್ಮಿ' ಯೋಜನೆಗೆ 28 ಸಾವಿರ ಕೋಟಿ ರೂ ಹಂಚಿಕೆ ಮಾಡಿದ್ದಾರೆ.

ಹೌದು.. ಕಾಂಗ್ರೆಸ್ ಸರ್ಕಾರದ ಮಹತ್ವಾಕಾಂಕ್ಷೆಯ ಗೃಹಲಕ್ಷ್ಮಿ ಯೋಜನೆಗೆ ಸಿಎಂ ಸಿದ್ದರಾಮಯ್ಯ ತಮ್ಮ ಬಜೆಟ್ ನಲ್ಲಿ ಹೆಚ್ಚಿನ ಅನುದಾನ ಘೋಷಿಸಿದ್ದು, ಯೋಜನೆ ಅಡಿ ಮನೆ ಯಜಮಾನಿಗೆ ಪ್ರತಿ ತಿಂಗಳು 2 ಸಾವಿರ ರೂ. ನೀಡಲಾಗುತ್ತಿದೆ. ಗ್ಯಾರಂಟಿ ಯೋಜನೆಗಳಿಂದ ಜನಸಾಮಾನ್ಯರಿಗೆ ನೆರವಾಗುವುದರ ಜತೆಗೆ ಅಭಿವೃದ್ಧಿ ಯೋಜನೆಗಳನ್ನೂ ಮುಂದುವರಿಸಲಾಗುವುದು ಎಂದು ಅವರು ತಿಳಿಸಿದ್ದಾರೆ.

ಇದೇ ವೇಳೆ ಸಿದ್ದರಾಮಯ್ಯ ರಾಜ್ಯದ ಅಭಿವೃದ್ಧಿ ಹಾಗೂ ಜನಕಲ್ಯಾಣ ಯೋಜನೆಗಳಿಗೆ ಹೆಚ್ಚಿನ ಒತ್ತು ನೀಡಲಾಗುತ್ತಿದ್ದು, ಈ ಬಜೆಟ್‌ನಲ್ಲಿ ವಿಶೇಷವಾಗಿ ಕಾಂಗ್ರೆಸ್ ಸರ್ಕಾರದ ಪ್ರಮುಖ ಗ್ಯಾರಂಟಿ ಯೋಜನೆಗಳಲ್ಲೊಂದಾದ ಗೃಹಲಕ್ಷ್ಮಿ ಯೋಜನೆಗೆ 28,608 ಕೋಟಿ ರೂಪಾಯಿ ಮೀಸಲಿರಿಸಲಾಗಿದೆ.

ಈ ಯೋಜನೆಯ ಮೂಲಕ ರಾಜ್ಯದ ಲಕ್ಷಾಂತರ ಮಹಿಳೆಯರ ಆರ್ಥಿಕ ಸಬಲೀಕರಣಕ್ಕೆ ಸರ್ಕಾರ ಬದ್ಧವಾಗಿದೆ ಎಂದರು.

ಆರ್ಥಿಕ ಸ್ಥಿತಿಯನ್ನು ಸುಧಾರಿಸುವಲ್ಲಿ ಗ್ಯಾರಂಟಿ ಮಹತ್ವದ ಪಾತ್ರ

ಅಂತೆಯೇ ಗ್ಯಾರಂಟಿ ಯೋಜನೆಗಳು ಜನರ ಆರ್ಥಿಕ ಸ್ಥಿತಿಯನ್ನು ಸುಧಾರಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತಿವೆ ಎಂದು ಸಿದ್ದರಾಮಯ್ಯ ಹೇಳಿದರು. ಜೊತೆಗೆ ಮೂಲಸೌಕರ್ಯ ಅಭಿವೃದ್ಧಿಗೂ ಸರ್ಕಾರ ಹೆಚ್ಚಿನ ಆದ್ಯತೆ ನೀಡಿದೆ ಎಂದರು.

## 'ಬೆಂಗಳೂರಿನಲ್ಲಿ ಸ್ತನ ಹಾಗೂ ಗರ್ಭಕೋಶ ಕ್ಯಾನ್ಸರ್ ಲಸಿಕಾ ಕೇಂದ್ರ'

ಬೆಂಗಳೂರು: 2026ನೇ ಸಾಲಿನ ರಾಜ್ಯ ಬಜೆಟ್ ಮಂಡಿಸುತ್ತಿರುವ ಸಿಎಂ ಸಿದ್ದರಾಮಯ್ಯ ಆರೋಗ್ಯ ಕ್ಷೇತ್ರಕ್ಕೆ ಹಲವು ಘೋಷಣೆಗಳನ್ನು ಮಾಡಿದ್ದು, ಪ್ರಮುಖವಾಗಿ 'ಬೆಂಗಳೂರಿನಲ್ಲಿ ಸ್ತನ ಹಾಗೂ ಗರ್ಭಕೋಶ ಕ್ಯಾನ್ಸರ್ ಲಸಿಕಾ ಕೇಂದ್ರ' ಸ್ಥಾಪಿಸುವ ಭರವಸೆ ನೀಡಿದ್ದಾರೆ.

ಸಿಎಂ ಸಿದ್ದರಾಮಯ್ಯ ಆರೋಗ್ಯ ಕ್ಷೇತ್ರದಲ್ಲೂ ಹಲವು ಘೋಷಣೆಗಳನ್ನು ಮಾಡಿದ್ದು, ಬೆಂಗಳೂರಿನಲ್ಲಿ ಸ್ತನ ಹಾಗೂ ಗರ್ಭಕೋಶ ಕ್ಯಾನ್ಸರ್ ಲಸಿಕಾ ಕೇಂದ್ರವನ್ನು ಸ್ಥಾಪಿಸುವುದಾಗಿ ಘೋಷಿಸಿದ್ದಾರೆ.

ಇದೇ ವೇಳೆ ರಾಯಚೂರು, ಬಾಗಲಕೋಟೆ, ವಿಜಯಪುರ, ಬೀದರ್, ಕೊಪ್ಪಳ, ಚಿತ್ರದುರ್ಗ, ಮಂಡ್ಯ, ಭದ್ರಾವತಿ ಮತ್ತು ಕೆಜಿಎಫ್ ಪ್ರದೇಶಗಳಲ್ಲಿನ ESI ಆಸ್ಪತ್ರೆಗಳನ್ನು ಉನ್ನತೀಕರಿಸಲಾಗುತ್ತದೆ. ಇದಕ್ಕಾಗಿ ಬಜೆಟ್‌ನಲ್ಲಿ ನಿಧಿ ಹಂಚಿಕೆ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

ಅಂತೆಯೇ ವಿಜಯಪುರದಲ್ಲಿ 12,000 ಮೆಟ್ರಿಕ್ ಟನ್ ಸಾಮರ್ಥ್ಯದ ಶೀತಲ ಗೃಹ ನಿರ್ಮಾಣ ಘಟಕ ಸ್ಥಾಪಿಸುವ ಯೋಜನೆಯನ್ನೂ ಘೋಷಿಸಲಾಗಿದೆ ಎಂದು ತಿಳಿಸಿದರು.

ರಾಜ್ಯದ ಆರ್ಥಿಕ ಸ್ಥಿತಿಗತಿಗಳ ಬಗ್ಗೆ ಮಾತನಾಡಿದ ಸಿಎಂ, ಕರ್ನಾಟಕ ಆರ್ಥಿಕ ಅಭಿವೃದ್ಧಿಯಲ್ಲಿ ದೇಶದ ಮಟ್ಟದಲ್ಲಿ ಮುಂಚೂಣಿಯಲ್ಲಿದ್ದು, ಅಂತರಾಷ್ಟ್ರೀಯ ಮಟ್ಟದಲ್ಲಿಯೂ ಪ್ರಮುಖ ಪಾತ್ರ ವಹಿಸುತ್ತಿದೆ ಎಂದು ಹೇಳಿದರು.

# ರಾಜ್ಯ ಬಜೆಟ್ 2026: ಹಣಕಾಸು ಇಲಾಖೆ ಅಧಿಕಾರಿಗಳಿಂದ ಬಜೆಟ್ ಪ್ರತಿ ಸಿಎಂಗೆ ಹಸ್ತಾಂತರ, ವಿಧಾನಸೌಧಕ್ಕೆ ತೆರಳಿದ ಸಿಎಂ

ಬೆಂಗಳೂರು: ರಾಜ್ಯ ಬಜೆಟ್‌ಗೆ ಕ್ಷಣಗಣನೆ ಆರಂಭವಾಗಿದ್ದು, 2026-27ನೇ ಸಾಲಿನ ಬಜೆಟ್ ಪ್ರತಿಯನ್ನು ಹಣಕಾಸು ಇಲಾಖೆ ಅಧಿಕಾರಿಗಳು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಇಂದು ಬೆಳಗ್ಗೆ ಹಸ್ತಾಂತರಿಸಿದರು.

ಇದೀಗ ಕಾವೇರಿ ನಿವಾಸದಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೆಂಪು ಸೂಟ್‌ಕೇಸ್‌ನೊಂದಿಗೆ ವಿಧಾನಸೌಧಕ್ಕೆ ಆಗಮಿಸಿದ್ದು. ಇನ್ನು ಕೆಲವೇ ಕ್ಷಣಗಳಲ್ಲಿ ವಿಧಾನಸೌಧದಲ್ಲಿ ಸಚಿವ ಸಂಪುಟ ಸಭೆ ಆರಂಭವಾಗಲಿದೆ.

ಬೆಳಗ್ಗೆ 10:15 ರಿಂದ ಸಿದ್ದರಾಮಯ್ಯ ಅವರು ಬಜೆಟ್ ಮಂಡನೆ ಮಾಡಲಿದ್ದಾರೆ. ಬಜೆಟ್ ಗಾತ್ರ 3.75 ಲಕ್ಷ ಜೋಟಿ ರೂ.ನಿಂದ 3.80 ಲಕ್ಷ ಕೋಟಿ ರೂ.ಗಳ ವರೆಗೆ ಇರಲಿದೆ ಎಂದು ಹೇಳಲಾಗುತ್ತಿದೆ.

ಈ ಪೈಕಿ ಗ್ಯಾರಂಟಿ ಯೋಜನೆಗಳ ಮುಂದುವರಿಕೆಗಾಗಿ ಶೇಕಡಾ 40ರಷ್ಟು ಹಣ ಮೀಸಲಿಡಲಿದ್ದು, ಗ್ಯಾರಂಟಿಗಳನ್ನು ನಿಲ್ಲಿಸುವುದಿಲ್ಲ ಎಂದು ಸಂದೇಶ ರವಾನೆ ಮಾಡಿ ಲೋಕಸಭಾ ವೋಟ್ ಬ್ಯಾಂಕ್ ಗ್ಯಾರಂಟಿ ಮಾಡಿಕೊಳ್ಳಲು ಮುಂದಾಗಲಿದ್ದಾರೆ ಎಂದು ಹೇಳಲಾಗುತ್ತಿದೆ.

ಈ ಬಾರಿ ಬಜೆಟ್‌ನಲ್ಲೂ ಅಹಿಂದಗೆ ಬಂಪರ್ ದೊರೆಯಲಿದ್ದು, ಸಮಾಜ ಕಲ್ಯಾಣ ಮತ್ತು ಅಲ್ಪಸಂಖ್ಯಾತ ಹಾಗೂ ಹಿಂದುಳಿದ ವರ್ಗಗಳ ಇಲಾಖೆಗಳಲ್ಲಿ ಇರುವ ಎಲ್ಲ ಯೋಜನೆಗಳ ಮುಂದುವರಿಕೆ ಮಾಡಬಹುದು.

ಐದು ಗ್ಯಾರಂಟಿಗಳಿಗೆ ಸುಮಾರು 54 ಸಾವಿರ ಕೋಟಿ ರೂಪಾಯಿ ಮೀಸಲು ಇಡಲಿರುವ ಸಿಎಂ ರೈತರಿಗೆ ಬಡ್ಡಿ ರಹಿತ ಸಾಲ ಹಣ ಏರಿಕೆ, ಮಹಿಳಾ ಸ್ವಸಹಾಯ ಸಂಘಗಳಿಗೆ ಹಣಕಾಸು ಮೀಸಲು, ಶೂನ್ಯ ಬಡ್ಡಿದರದಲ್ಲಿ ಸಾಲ,

ವೃದ್ಧಾಪ್ಯ ವೇತನ ಏರಿಕೆ, ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಗೆ ವಿಶೇಷ



ಅನುದಾನ, ಗೋಕಾಕ್ ಇಲ್ಲವೇ ಅಥಣಿಯನ್ನು ನೂತನ ಜಿಲ್ಲಾ ಕೇಂದ್ರವಾಗಿಸಲು ಹಣ ಮೀಸಲು, ಅಂಬೇಡ್ಕರ್ ನಿಗಮ, ವಾಲ್ಮೀಕಿ ನಿಗಮ, ತಾಂಡ ಅಭಿವೃದ್ಧಿ ನಿಗಮಗಳಿಗೆ ಮೀಸಲಿಟ್ಟ ಹಣ ಏರಿಕೆ ಮಾಡುತ್ತಾರೆ ಎಂದು ನಿರೀಕ್ಷಿಸಲಾಗಿದೆ.

# ಪಂಚ ಪೀಠಗಳಿಂದ ದೇಶಕ್ಕೆ ಶಕ್ತಿ: ಚಿಕ್ಕೋಡಿ ಪ್ರತ್ಯೇಕ ಜಿಲ್ಲೆ ಕೂಗು; ಡಿಸಿಎಂ ಡಿಕೆ ಶಿವಕುಮಾರ್

ಚಿಕ್ಕೋಡಿ: ಚಿಕ್ಕೋಡಿ ಜಿಲ್ಲೆ ಆಗಬೇಕು ಎಂಬ ಆಸೆ ನನಗೂ ಇದೆ. ಆದಷ್ಟು ಬೇಗ ನಾವು ತೀರ್ಮಾನ ಮಾಡುತ್ತೇವೆ. ಪ್ರಕಾಶ್ ಹುಕ್ಕೇರಿ ಹಾಗೂ ಗಣೇಶ್ ಹುಕ್ಕೇರಿ ಅವರು ಈ ಭಾಗದ ನೀರಾವರಿ ಯೋಜನೆಗಳಿಗೆ ಸಂಬಂಧಿಸಿದಂತೆ ಇಟ್ಟಿರುವ ಎಲ್ಲಾ ಬೇಡಿಕೆ ಈಡೇರಿಸಲು ನಾನು ಬದ್ಧನಾಗಿದ್ದೇನೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲ್ಲೂಕಿನಲ್ಲಿ ಗುರುವಾರ ನಡೆದ ವೀರಶೈವ ಲಿಂಗಾಯತ ಧರ್ಮೋತ್ಥಾನ ಸಮ್ಮೇಳನ ಹಾಗೂ ರಾಜಗೋಪುರ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಶಿವಕುಮಾರ್ ಅವರು ಮಾತನಾಡಿದರು.




ಈ ಭಾಗ ಅಭಿವೃದ್ಧಿಯಾಗಬೇಕು ಹಾಗೂ ಇಲ್ಲಿನ ರೈತರನ್ನು ಕಾಪಾಡುವ ಕೆಲಸ ಮಾಡಲಾಗುವುದು. ನಿಮ್ಮ ಆಶೀರ್ವಾದ ನನ್ನ ಮೇಲೆ, ನಮ್ಮ ಸರ್ಕಾರದ ಮೇಲೆ ಇರಲಿ" ಎಂದು ಮನವಿ ಮಾಡಿದರು.

"ರಂಭಾಪುರಿ, ಉಜ್ಜಯಿನಿ, ಕಾಶೀ, ಶ್ರೀಶೈಲ ಸೇರಿದಂತೆ ನಮ್ಮ ಪಂಚ ಪೀಠದ ಶ್ರೀಗಳು ಇಡೀ ದೇಶಕ್ಕೆ ಶಕ್ತಿ ನೀಡುತ್ತಾ ಬಂದಿದ್ದಾರೆ. ಇವುಗಳ ಮಾರ್ಗದರ್ಶನದಲ್ಲಿ ನಾವು ನೆಮ್ಮದಿಯಾಗಿ ಬದುಕುತ್ತಿದ್ದೇವೆ. ನಾವು ಈ ಧರ್ಮ ಪೀಠಗಳನ್ನು ಉಳಿಸಿಕೊಂಡು, ಕಾಪಾಡಿಕೊಂಡು ಹೋಗಬೇಕು. ಈ ಸಮಾಜಕ್ಕೆ ಈ ಪೀಠಗಳ ಮಾರ್ಗದರ್ಶನ ಅಗತ್ಯವಿದ್ದು, ನಾವು ಈ ಮಠಗಳಿಗೆ ಪ್ರೋತ್ಸಾಹ ನೀಡಬೇಕು ಎಂದರು.

"ಶ್ರೀಗಳು ಇಲ್ಲಿಂದ ಬೆಳೆದು, ಈ ಭಾಗದ ಅಭಿವೃದ್ಧಿ ಮಾಡಿ ಶ್ರೀಶೈಲ ಮಠಕ್ಕೆ ಹೋಗಿ ಧರ್ಮ ಉಳಿಸುವ ಪ್ರಯತ್ನ ಮಾಡುತ್ತಿರುವುದು ನಮಗೆ ಶಕ್ತಿ ತುಂಬಿದೆ. ಮನುಷ್ಯನಿಗೆ ಧರ್ಮ, ದೇವರು ಬೇಕು. ಇಲ್ಲದಿದ್ದರೆ ಜೀವನ ಹಾಗೂ ಆತ್ಮಕ್ಕೆ ಶಾಂತಿ ಸಿಗುವುದಿಲ್ಲ.

ಬದುಕಿಗೆ ಅರ್ಥವು ಇರುವುದಿಲ್ಲ. ನಿಂಬೆಗಿಂತ ಶ್ರೇಷ್ಠವಾದ ಹುಳಿ, ದುಂಬಿಗಿಂತ ಶ್ರೇಷ್ಠವಾದ ಕಪ್ಪು ಬಣ್ಣ, ಶಿವನಿಗಿಂತ ಶ್ರೇಷ್ಠವಾದ ದೇವರು, ನಂಬಿಕೆಗಿಂತ ದೊಡ್ಡ ಗುಣ ಬೇರೊಂದಿಲ್ಲ. ಧರ್ಮ ಇಂದು ನಮ್ಮನ್ನೆಲ್ಲ ಇಲ್ಲಿ ಸೇರಿಸಿದೆ.

ಭಕ್ತ ಹಾಗೂ ಭಗವಂತ ನಡುವೆ ವ್ಯವಹಾರ ನಡೆಯುವ ಜಾಗ ದೇವಾಲಯ. ನಾವು ಇಂತಹ ದೇವಾಲಯದಲ್ಲಿ ಕೂತು ಪವಿತ್ರವಾದ ಕಾರ್ಯಕ್ರಮದಲ್ಲಿ ಭಾಗಿಯಾಗಿರುವುದು ನಮ್ಮ ನಿಮ್ಮ ಭಾಗ್ಯ. ಸಚಿವ ಸಂಪುಟ ಸಭೆ ಇದ್ದರೂ ಅದನ್ನು ಸಂಜೆಗೆ ನಿಗದಿ ಮಾಡಿ ಎಂದು ಹೇಳಿ ಈ ಕಾರ್ಯಕ್ರಮಕ್ಕೆ ಬಂದಿರುವೆ" ಎಂದು ಹೇಳಿದರು.

ಪ್ರಭಾಕರ್ ಕೋರೆ ಅವರು ಕೂಡ ರಾಜ್ಯದಲ್ಲಿ ಸಾಮಾಜಿಕವಾಗಿ, ಧಾರ್ಮಿಕವಾಗಿ, ಶೈಕ್ಷಣಿಕವಾಗಿ ಶಕ್ತಿ ನೀಡುತ್ತಿದ್ದಾರೆ. ಶಿಕ್ಷಣ ಕ್ಷೇತ್ರದಲ್ಲಿ ದೊಡ್ಡ ಕ್ರಾಂತಿ ಮಾಡಿದ್ದಾರೆ. ನಾನು ಇಲ್ಲಿಗೆ ಮಂತ್ರಿಯಾಗಿ, ಉಪಮುಖ್ಯಮಂತ್ರಿಯಾಗಿ ಬಂದಿಲ್ಲ.

ಶ್ರೀಗಳು ಈ ಕ್ಷೇತ್ರದಲ್ಲಿ ಮಾಡುತ್ತಿರುವ ಕೆಲಸ ತಿಳಿದು ಬಂದಿದ್ದೇನೆ. ಅವರು ಹೇಳಿದಂತೆ ನಾನು ವೀರ ಗಂಗಾಧರೇಶ್ವರ ಅಜ್ಜಯ್ಯ ಅವರ ಪರಮ ಭಕ್ತ. ಅವರ ಮಾರ್ಗದರ್ಶನದಲ್ಲಿ ನಾನು ಹೆಜ್ಜೆ ಹಾಕುತ್ತಿದ್ದೇನೆ. ಮಾನವ ಧರ್ಮಕ್ಕೆ ಜಯವಾಗಲಿ, ಧರ್ಮದಿಂದಲೇ ವಿಶ್ವಕ್ಕೆ ಶಾಂತಿ ಎಂದು ಅವರು ಸಂದೇಶ ನೀಡಿದ್ದಾರೆ. ನಾವು ಅದೇ ತತ್ವದಲ್ಲಿ ಕೆಲಸ ಮಾಡಿಕೊಂಡು ಹೋಗುತ್ತಿದ್ದೇವೆ" ಎಂದರು.

"ಈ ಮಠ ಒಂದು ಜಾತಿ, ಧರ್ಮಕ್ಕೆ ಸೀಮಿತವಲ್ಲ. ನಾವು ಹುಟ್ಟುವಾಗ ಇಂತಹುದೆ ಜಾತಿಯಲ್ಲಿ ಹುಟ್ಟಬೇಕು ಎಂದು ಅರ್ಜಿ ಹಾಕಿ ಹುಟ್ಟುವುದಿಲ್ಲ. ಧರ್ಮ ಯಾವುದಾದರೂ ತತ್ವವೊಂದೇ, ಪೂಜೆ ಯಾವುದಾದರೂ ಭಕ್ತಿಯೊಂದೆ, ಕರ್ಮ ಹಲವಾದರೂ ನಿಷ್ಠೆಯೊಂದೆ, ದೇವನೊಬ್ಬ ನಾಮ ಹಲವು.ನಾವು ಇದರಲ್ಲಿ ನಂಬಿಕೆ ಇಟ್ಟಿದ್ದೇವೆ. ಎಲ್ಲಾ ಧರ್ಮಗಳು ಒಂದೇ ಆಚಾರ ವಿಚಾರ ಸಾರುತ್ತವೆ. ಮಠಗಳು ಅವುಗಳನ್ನು ಕಾಪಾಡಿಕೊಂಡು ಬರುತ್ತಿವೆ" ಎಂದು ತಿಳಿಸಿದರು.

# ಧರ್ಮಸ್ಥಳ ಪ್ರಕರಣ: ಕಾಣೆಯಾದವರು ಎಲ್ಲಿ ಹೋದರು ಸಾವು ಸಂಭವಿಸಿದ್ದು ಹೇಗೆ ಮಾಹಿತಿ ನೀಡಿ- ಡಾ.ನಾಗಲಕ್ಷ್ಮಿ ಚೌಧರಿ

ಪುತ್ತೂರು: ಧರ್ಮಸ್ಥಳ ಗ್ರಾಮದಿಂದ ಕಾಣೆಯಾಗಿದ್ದಾರೆ ಎಂದು ಹೇಳಲಾಗುವ ಯುವತಿಯರು ಮತ್ತು ಮಹಿಳೆಯರ ಬಗ್ಗೆ ಮಾಹಿತಿ ಸಿಗಲೇಬೇಕು. ಆ ನಿಟ್ಟಿನಲ್ಲಿ ತನಿಖೆ ಆಗಬೇಕು ಎಂದು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಚೌಧರಿ ಹೇಳಿದರು.

ನಗರದಲ್ಲಿ ಗುರುವಾರ ಪತ್ರಕರ್ತರ ಜೊತೆ ಮಾತನಾಡಿದ ಅವರು, ಧರ್ಮಸ್ಥಳ ಪ್ರಕರಣದಲ್ಲಿ ಮಹಿಳಾ ಆಯೋಗ ವರದಿ ಕೇಳಿದೆ. ಎಸ್‌ಐಟಿ ಮುಖ್ಯಸ್ಥರ ಜೊತೆ ನಿರಂತರ ಸಂಪರ್ಕದಲ್ಲಿದ್ದು ಹಲವು ಬಾರಿ ಸಭೆಗಳನ್ನೂ ನಡೆಸಲಾಗಿದೆ ಎಂದರು.

ಕಾಣೆಯಾದವರು ಎಲ್ಲಿಗೆ ಹೋದರು ಸಾವಿಗೀಡಾಗಿದ್ದರೆ ಅದು ಸಂಭವಿಸಿದ್ದು ಹೇಗೆ ಇತ್ಯಾದಿ ವಿವರಗಳು ಬೇಕು.

ಇದು ಕಷ್ಟದ ಕೆಲಸ ನಿಜ. ಆದರೆ ಅಷ್ಟು ಮಾಹಿತಿ ತಿಳಿಯಲೇಬೇಕಾಗಿದೆ ಎಂದು ಹೇಳಿದರು.

ಅತ್ಯಾಚಾರಕ್ಕೆ ಪೋರ್ನೋಗ್ರಫಿ, ನಶೆ ಮತ್ತಿತರ ಕಾರಣಗಳೂ ಇವೆ. ಸ್ಮಾರ್ಟ್



ಫೋನ್‌ಗಳ ಬಳಕೆಯೂ ಕೆಟ್ಟ ಪಾತ್ರ ವಹಿಸುತ್ತದೆ. ರಾಜ್ಯದಲ್ಲಿ ಈಚೆಗೆ ಮಹಿಳೆಯರ ಮೇಲೆ ಆಗಿರುವ ದೌರ್ಜನ್ಯ ಪ್ರಕರಣ ಮತ್ತು ತಡೆಗೆ ಕೈಗೊಂಡ ಕ್ರಮಗಳ ಬಗ್ಗೆ ತಿಳಿದುಕೊಳ್ಳಲು ಪೊಲೀಸರ ಜೊತೆ ಮಾತುಕತೆ ನಡೆಸಲಾಗುತ್ತಿದೆ ಎಂದರು.

ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮಿ ಚೌಧರಿ ಅವರು ಮಾ.5ರಂದು ಪುತ್ತೂರಿಗೆ ಭೇಟಿ ನೀಡಿದ್ದು, ಈ ವೇಳೆ ಮದುವೆಯಾಗುವುದಾಗಿ ನಂಬಿಸಿ ವಂಚಿಸಿದ ಪ್ರಕರಣದ ಸಂತ್ರಸ್ತೆ ಮನೆಗೆ ಭೇಟಿ ನೀಡಿ ಸಾಂತ್ವನ ಹೇಳಿದರು.

ಶಿಕ್ಷಣ ಮುಂದುವರಿಸುವಂತೆ ಸಂತ್ರಸ್ತೆಗೆ ನಾಗಲಕ್ಷ್ಮೀ ಅವರು ಸೂಚಿಸಿದರು. ಗಟ್ಟಿಯಾಗಿ ನಿಂತು ಸಂಕಷ್ಟ ಎದುರಿಸುವಂತೆ ಸಂತ್ರಸ್ತೆ ಮತ್ತು ಆಕೆಯ ತಾಯಿಗೆ ಮನವಿ ಮಾಡಿದರು.

ಶಿಕ್ಷಣ ಮುಂದುವರಿಸಲು ಬೇಕಾದ ಎಲ್ಲಾ ವ್ಯವಸ್ಥೆ ಮಾಡುವ ಭರವಸೆ ನೀಡಿದರು. ಯಾವುದೇ ಕಾರಣಕ್ಕೂ ಜೀವನದಲ್ಲಿ ಕುಗ್ಗಿ ಕೆಟ್ಟ ನಿರ್ಧಾರ ತೆಗೆದುಕೊಳ್ಳದಂತೆ ಸಂತ್ರಸ್ತೆಗೆ ನಾಗಲಕ್ಷ್ಮಿ ಧೈರ್ಯ ತುಂಬಿದ್ದಾರೆ.

ಬಳಿಕ ಮಾಧ್ಯಮಗಳ ಜೊತೆ ಮಾತನಾಡಿದ ಅವರು ಮಹಿಳಾ ಆಯೋಗ ತಾಯಿಯಂತೆ ಸಂತ್ರಸ್ತೆಯ ಪರ ನಿಲ್ಲುತ್ತದೆ, ಎಲ್ಲಾ ಸಂತ್ರಸ್ತ ಮಹಿಳೆಯರಿಗೆ ಆಯೋಗ ತಾಯಿಯಿದ್ದಂತೆ. ತಾಯಿ ಸ್ಥಾನದಲ್ಲಿ ನಿಂತು ಮಹಿಳೆಯ ಸಂಕಷ್ಟಗಳಿಗೆ ಸ್ಪಂದಿಸುತ್ತೇನೆ. ಸಂತ್ರಸ್ತೆ ಯುವತಿಗೆ ಎಲ್ಲಾ ರೀತಿಯ ಸಹಾಯವನ್ನು ಆಯೋಗದ ಮುಖಾಂತರ ಮಾಡಲಾಗುವುದು ಎಂದರು.

ಮುಂದುವರಿದು, ಯುವತಿಯ ಮುಂದಿನ ಶಿಕ್ಷಣಕ್ಕೆ ಬೇಕಾದ ಎಲ್ಲಾ ವ್ಯವಸ್ಥೆಯನ್ನು ಮಾಡಿ ಆಕೆಯನ್ನು ಆರ್ಥಿಕ, ಶೈಕ್ಷಣಿಕವಾಗಿ ಸದೃಢಗೊಳಿಸುವ ಪ್ರಯತ್ನವನ್ನೂ ಮಾಡುತ್ತೇನೆ. ಪ್ರಕರಣ ನ್ಯಾಯಾಲಯದ ಮುಂದೆ ಇರುವಾಗ ಇದಕ್ಕಿಂತ ಹೆಚ್ಚು ಮಾತನಾಡಲು ಸಾಧ್ಯವಿಲ್ಲ ಎಂದು ಅವರು ಹೇಳಿದ್ದಾರೆ.

ನಗರದ ಸ್ಟೇಟ್ ಬ್ಯಾಂಕ್ ನ ಮಾರುಕಟ್ಟೆಯಲ್ಲಿ ಮೀನುಗಾರ ಮಹಿಳೆಯರು ತಮ್ಮ ಸಮಸ್ಯೆಯನ್ನು ಹೇಳಿಕೊಂಡಿದ್ದಾರೆ. ನೂತನವಾಗಿ ನಿರ್ಮಾಣವಾ ಗಿರುವ ಮೀನು ಮಾರುಕಟ್ಟೆಯಲ್ಲಿ ವ್ಯವಸ್ಥೆಗಳು ಅವೈಜ್ಞಾನಿಕವಾಗಿರುವುದಾಗಿ ಹೇಳಿಕೊಂಡಿರುವ ಮಹಿಳೆಯರು, ಅಲ್ಲಿಗೆ ತಮ್ಮ ವ್ಯಾಪಾರವನ್ನು ಸ್ಥಳಾಂತರಿಸಲು ನಿರಾಕರಿಸುತ್ತಿದ್ದಾರೆ.

ಈ ಬಗ್ಗೆ ಜಿಲ್ಲಾಧಿಕಾರಿ ಮಾತ್ರವಲ್ಲದೆ ಸರಕಾರದ ಗಮನಕ್ಕೂ ತರುವುದಾಗಿ ಕರ್ನಾಟಕ ರಾಜ್ಯ ಮಹಿಳಾ ಆಯೋಗ ದ ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಚೌಧರಿ ತಿಳಿಸಿದ್ದಾರೆ.

ಸ್ಟೇಟ್ ಬ್ಯಾಂಕ್ ಹಸಿ ಮೀನು ಮಾರುಕಟ್ಟೆಯಲ್ಲಿ ತಾವು ಹಲವು ದಶಕಗಳಿಂದ ವ್ಯಾಪಾರ ಮಾಡುತ್ತಿದ್ದು, ಇಲ್ಲಿಯೇ ವ್ಯಾಪಾರಕ್ಕೆ ಅವಕಾಶ ಮಾಡುವಂತೆ ಮಹಿಳೆಯರು ತಮ್ಮ ಬೇಡಿಕೆ ಇರಿಸಿದ್ದಾರೆ.

ನೂತನವಾಗಿ ನಿರ್ಮಿಸಲಾಗಿರುವ ಮಾರುಕಟ್ಟೆಯಲ್ಲಿ ಸೂಕ್ತ ಗಾಳಿ, ಬೆಳಕಿನ ವ್ಯವಸ್ಥೆಯ ಕೊರತೆಯ ಜತೆಗೆ ಬಾಡಿಗೆಯೂ ದುಬಾರಿಯಾಗಿದೆ ಎಂದು ಹೇಳಿದ್ದಾರೆ. ದ.ಕ. ಜಿಲ್ಲಾಧಿಕಾರಿ ಹಾಗೂ ಇತರ ಜಿಲ್ಲಾ ಮಟ್ಟದ ಅಧಿಕಾರಿಗಳ ಜತೆ ನಾಳೆ ಸಭೆಯಲ್ಲಿ ಈ ಬಗ್ಗೆ ಪ್ರಸ್ತಾವಿಸಲಿದ್ದೇನೆ.

ಸಮಸ್ಯೆಯನ್ನು ಆಡಳಿತದ ಗಮನಕ್ಕೆ ತರುವ ನಿಟ್ಟಿನಲ್ಲಿ ಮಹಿಳಾ ಮೀನುಗಾರ ಪ್ರತಿನಿಧಿಗಳೂ ಭಾಗವಹಿಸುವಂತೆ ಕೋರಿದ್ದೇನೆ. ಮೀನುಗಾರ ಮಹಿಳೆಯರು ಲಿಖಿತವಾಗಿ ನೀಡುವ ಬೇಡಿಕೆಗಳ ಕುರಿತಂತೆ, ಸೂಕ್ತ ವ್ಯವಸ್ಥೆ ಕಲ್ಪಿಸುವ ನಿಟ್ಟಿನಲ್ಲಿ ಸರಕಾರದ ಗಮನಕ್ಕೆ ತರಲಾಗುವುದು ಎಂದರು.

# ಸಿಎಂ ಸಿದ್ದರಾಮಯ್ಯ 17ನೇ ಕರ್ನಾಟಕ ಬಜೆಟ್ : ಸರ್ಕಾರದ ಆಡಳಿತ ಸುಧಾರಣೆ ಪ್ರಮುಖ ಅಜೆಂಡಾ

ಬೆಂಗಳೂರು: ಇಲಾಖೆಗಳಾದ್ಯಂತ ಭ್ರಷ್ಟಾಚಾರದ ಆರೋಪಗಳು ಸರ್ಕಾರದ ಪ್ರತಿಷ್ಠೆಗೆ ಧಕ್ಕೆಯುಂಟುಮಾಡಿರುವ ಮತ್ತು ರಾಜಕೀಯ ಅನಿಶ್ಚಿತತೆ ಮುಂದುವರಿಯುತ್ತಿರುವ ನಡುವೆಯೇ, ಮುಖ್ಯಮಂತ್ರಿ ಸಿದ್ದರಾಮಯ್ಯ




ಆಡಳಿತದ ಕಾರ್ಯಕ್ಷಮತೆಯ ಮೇಲೆ ಗಮನಹರಿಸಲು ಸಿದ್ಧರಾಗಿದ್ದಾರೆ. ಇಂದು ಬೆಳಗ್ಗೆ 10.15ಕ್ಕೆ ಅವರು ಮಂಡಿಸಲಿರುವ ತಮ್ಮ 17ನೇ ಬಜೆಟ್‌ನಲ್ಲಿ ಆಡಳಿತ ವ್ಯವಸ್ಥೆಯನ್ನು ಸರಳಗೊಳಿಸುವುದು ಹಾಗೂ ಸಾರ್ವಜನಿಕ ವಿಶ್ವಾಸವನ್ನು ಪುನಃಸ್ಥಾಪಿಸುವ ಉದ್ದೇಶದ ಹಲವು ಕ್ರಮಗಳನ್ನು ಘೋಷಿಸುವ ಸಾಧ್ಯತೆ ಇದೆ.

ಸಿದ್ದರಾಮಯ್ಯ ಅವರು ವಿವಿಧ ಇಲಾಖೆಗಳಲ್ಲಿನ ವರ್ಗಾವಣೆಗಳನ್ನು ನಿಯಂತ್ರಿಸಲು ಹೊಸ ವ್ಯವಸ್ಥೆಯನ್ನು ಪರಿಚಯಿಸುವ ಸಾಧ್ಯತೆ ಇದೆ.

ವಿಶೇಷವಾಗಿ ಗಣಿಗಾರಿಕೆ ಮತ್ತು ಭೂವಿಜ್ಞಾನ, ಸಾರಿಗೆ ಹಾಗೂ ಅಬಕಾರಿ ಇಲಾಖೆಗಳಲ್ಲಿ ಹುದ್ದೆಗಳ ವರ್ಗಾವಣೆಯಲ್ಲಿ ಭ್ರಷ್ಟಾಚಾರ ಹೆಚ್ಚು ಇದೆ ಎಂಬ ಆರೋಪಗಳ ಹಿನ್ನೆಲೆಯಲ್ಲಿ ಕ್ರಮ ಕೈಗೊಳ್ಳಲಾಗಬಹುದು.

ಈ ಬಾರಿ ಪ್ರಥಮ ದರ್ಜೆಯ (ಕ್ಲಾಸ್-1) ಅಧಿಕಾರಿಗಳನ್ನೂ ಕೌನ್ಸೆಲಿಂಗ್ ಆಧಾರಿತ ವರ್ಗಾವಣೆ ವ್ಯವಸ್ಥೆಯ ವ್ಯಾಪ್ತಿಗೆ ತರಲು ಯೋಜಿಸಲಾಗಿದೆ. ಕಳೆದ ಎರಡು ವರ್ಷಗಳಲ್ಲಿ ಭ್ರಷ್ಟಾಚಾರ ಹಾಗೂ ವಿವಿಧ ಹಗರಣಗಳ ಹಿನ್ನೆಲೆಯಲ್ಲಿ ಸರ್ಕಾರ ತೀವ್ರ ಟೀಕೆಗೆ ಒಳಗಾಗಿದ್ದು, ವಿರೋಧ ಪಕ್ಷಗಳು ವಿಧಾನಸಭೆಯ ಒಳಗೂ ಹೊರಗೂ ಈ ವಿಷಯಗಳನ್ನು ಎತ್ತಿಹಿಡಿದು ಸರ್ಕಾರ ಮತ್ತು ಕಾಂಗ್ರೆಸ್ ಪಕ್ಷವನ್ನು ಸಂಕಷ್ಟಕ್ಕೆ ತಳ್ಳಿದ್ದವು.

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ನಿವೇಶನ(MUDA) ಹಂಚಿಕೆ ಹಗರಣ, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡ ಅಭಿವೃದ್ಧಿ ನಿಗಮ ನಿಧಿ ದುರ್ನಿಯೋಗ ಪ್ರಕರಣ ಹಾಗೂ ಇತ್ತೀಚೆಗೆ ಅಬಕಾರಿ ಇಲಾಖೆಯ ಅಧಿಕಾರಿಗಳು ಪರವಾನಗಿ ನೀಡಲು ಭಾರೀ ಲಂಚ ಕೇಳಿದ ಪ್ರಕರಣಗಳು ಸರ್ಕಾರವನ್ನು ಸಂಕಷ್ಟಕ್ಕೆ ಸಿಲುಕಿಸಿವೆ.

ಸರ್ಕಾರದ ಮೂಲಗಳ ಪ್ರಕಾರ, ವರ್ಗಾವಣೆಗಳನ್ನು ಕಡ್ಡಾಯವಾಗಿ ಕೌನ್ಸೆಲಿಂಗ್ ಮೂಲಕ ನಡೆಸಬೇಕು. ವರ್ಗಾವಣೆಗಳಲ್ಲಿ ಭಾರೀ ಭ್ರಷ್ಟಾಚಾರ ಇದೆ.

ಜೊತೆಗೆ ಆಯ್ಕೆಯಾದ ಜನಪ್ರತಿನಿಧಿಗಳ ಒತ್ತಡವೂ ಹೆಚ್ಚಿದೆ. ವರ್ಗಾವಣೆಗಳಲ್ಲಿ ಭ್ರಷ್ಟಾಚಾರವನ್ನು ನಿಯಂತ್ರಿಸಿ, ಸೇವೆಗಳನ್ನು ಪರಿಣಾಮಕಾರಿಯಾಗಿ ನೀಡಿದರೆ ಸರ್ಕಾರದ ಕಾರ್ಯಕ್ಷಮತೆ ಸುಧಾರಿಸುತ್ತದೆ ಎಂದು ಮೂಲಗಳು ತಿಳಿಸಿವೆ.

ಹಿರಿಯ ಕಾಂಗ್ರೆಸ್ ಶಾಸಕ ಹಾಗೂ ಕರ್ನಾಟಕ ಆಡಳಿತಾತ್ಮಕ ಸುಧಾರಣಾ ಆಯೋಗ 2ರ ಅಧ್ಯಕ್ಷರಾದ ಆರ್ ವಿ ದೇಶಪಾಂಡೆ ಅವರು, ಮುಖ್ಯಮಂತ್ರಿಗೆ ಹಲವು ಶಿಫಾರಸುಗಳನ್ನು ಸಲ್ಲಿಸಲಾಗಿದೆ ಎಂದು ಹೇಳಿದ್ದಾರೆ.

ಸರ್ಕಾರ ಮತ್ತು ಜನರ ನಡುವಿನ ಅಂತರವನ್ನು ಕಡಿಮೆ ಮಾಡುವಂತಹ ಆಡಳಿತ ಸುಧಾರಣೆಗಳ ಅಗತ್ಯವಿದೆ. ಸರ್ಕಾರ ನಮ್ಮ ಶಿಫಾರಸುಗಳನ್ನು ಜಾರಿಗೆ ತರುತ್ತದೆ ಎಂಬ ನಿರೀಕ್ಷೆ ಇದೆ ಎಂದು ಹೇಳಿದರು.

ಹಿಂದಿನ ಮುಖ್ಯ ಕಾರ್ಯದರ್ಶಿ ಟಿ ಎಸ್ ವಿಜಯ್ ಭಾಸ್ಕರ್, ಅವರು ಕರ್ನಾಟಕ ಆಡಳಿತಾತ್ಮಕ ಸುಧಾರಣಾ ಆಯೋಗ 1ನ್ನು ಮುನ್ನಡೆಸಿದ್ದರು.

ಕೆಲ ಹುದ್ದೆಗಳು ಈಗಿನ ಕಾಲಕ್ಕೆ ಅಷ್ಟಾಗಿ ಅಗತ್ಯವಿಲ್ಲದ ಕಾರಣ ಅವುಗಳನ್ನು ಪುನರ್‌ವ್ಯವಸ್ಥೆಗೊಳಿಸುವ ಅಗತ್ಯವಿದೆ ಎಂದು ಹೇಳಿದ್ದಾರೆ.

ಲಿಪಿಕೀಯ ಹುದ್ದೆಗಳನ್ನು ಕಡಿಮೆ ಮಾಡಿ ತಾಂತ್ರಿಕ ಹುದ್ದೆಗಳನ್ನು ಹೆಚ್ಚಿಸಬಹುದು. ಜೊತೆಗೆ ಡಿಜಿಟಲೀಕರಣದ ಮೂಲಕ ಆನ್‌ಲೈನ್ ಸೇವೆಗಳನ್ನು ಒದಗಿಸುವುದಕ್ಕೂ ಹೆಚ್ಚಿನ ಒತ್ತು ನೀಡಬೇಕು ಎಂದು ಅವರು ಸಲಹೆ ನೀಡಿದ್ದಾರೆ.

# ತಿಂಗಳ ಮಟ್ಟಿಗೆ ರಷ್ಯಾದಿಂದ ತೈಲ ಖರೀದಿಸಲು ಭಾರತಕ್ಕೆ ಅನುಮತಿ ನೀಡಿದ ಅಮೆರಿಕ

ನವದೆಹಲಿ: ಇರಾನ್ ಜೊತೆಗಿನ ಸಂಘರ್ಷ ಹೆಚ್ಚುತ್ತಿರುವ ಹಿನ್ನೆಲೆ, ಭಾರತೀಯ ಸಂಸ್ಕರಣಾ ಗಾರಗಳು ರಷ್ಯಾದ ತೈಲವನ್ನು ಖರೀದಿಸಲು ತಾತ್ಕಾಲಿಕವಾಗಿ 30 ದಿನಗಳ ವಿನಾಯಿತಿ ನೀಡುತ್ತಿರು ವುದಾಗಿ ಯುಎಸ್ ಖಜಾನೆ ಇಲಾಖೆ ಘೋಷಿಸಿದೆ.



"ಅಧ್ಯಕ್ಷ ಟ್ರಂಪ್ ಅವರ ಇಂಧನ ಕಾರ್ಯಸೂಚಿಯಿಂದಾಗಿ ತೈಲ ಮತ್ತು ಅನಿಲ ಉತ್ಪಾದನೆ ಇದುವರೆಗೆ ದಾಖಲಾದ ಅತ್ಯುನ್ನತ ಮಟ್ಟಕ್ಕೆ ತಲುಪಿದೆ. ಜಾಗತಿಕ ಮಾರುಕಟ್ಟೆಯಲ್ಲಿ ತೈಲ ಪೂರೈಕೆ ನಿರಂತರವಾಗಿರುವಂತೆ ಮಾಡಲು, ಯುಎಸ್ ಖಜಾನೆ ಇಲಾಖೆಯು ಭಾರತೀಯ ಸಂಸ್ಕರಣಾಗಾರಗಳು ರಷ್ಯಾದ ತೈಲವನ್ನು ಖರೀದಿಸಲು ತಾತ್ಕಾಲಿಕ 30 ದಿನಗಳ ವಿನಾಯಿತಿಯನ್ನು ನೀಡುತ್ತಿದೆ" ಎಂದು ಖಜಾನೆ ಕಾರ್ಯದರ್ಶಿ ಸ್ಕಾಟ್ ಬೆಸೆಂಟ್ ಗುರುವಾರ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

ಈ "ಉದ್ದೇಶಪೂರ್ವಕ ಅಲ್ಪಾವಧಿಯ ಕ್ರಮ" ರಷ್ಯಾ ಸರ್ಕಾರಕ್ಕೆ ಗಮನಾರ್ಹ ಆರ್ಥಿಕ ಪ್ರಯೋಜನವನ್ನು ನೀಡುವುದಿಲ್ಲ, ಏಕೆಂದರೆ ಈ ಅನುಮತಿ ಈಗಾಗಲೇ ಸಮುದ್ರದಲ್ಲಿ ಸಿಲುಕಿರುವ ತೈಲವನ್ನು ಒಳಗೊಂಡ ವಹಿವಾಟುಗಳನ್ನು ಮಾತ್ರ ಅಧಿಕೃತಗೊಳಿಸಲಿದೆ. "ಭಾರತವು ಅಮೆರಿಕದ ಪ್ರಮುಖ ಹಾಗೂ ಅತ್ಯಗತ್ಯ ಪಾಲುದಾರ. ಮತ್ತು ಭಾರತವು ಅಮೆರಿಕದ ತೈಲ ಖರೀದಿಯನ್ನು ಹೆಚ್ಚಿಸುತ್ತದೆ ಎಂದು ನಾವು ಸಂಪೂರ್ಣವಾಗಿ ನಿರೀಕ್ಷಿಸುತ್ತೇವೆ. ಈ ತಾತ್ಕಾಲಿಕ ಕ್ರಮವು ಜಾಗತಿಕ ಇಂಧನವನ್ನು ಒತ್ತೆಯಾಳಾಗಿ ತೆಗೆದುಕೊಳ್ಳುವ ಇರಾನ್ ಪ್ರಯತ್ನದಿಂದ ಉಂಟಾದ ಒತ್ತಡವನ್ನು ಕಡಿಮೆ ಮಾಡುತ್ತದೆ" ಎಂದು ಬೆಸೆಂಟ್ ಹೇಳಿದರು.

ಈ ಹಿಂದೆ ರಷ್ಯಾದ ತೈಲವನ್ನು ಖರೀದಿಸಿದ್ದಕ್ಕಾಗಿ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಭಾರತದ ಮೇಲೆ ಶೇ.25 ರಷ್ಟು ದಂಡನಾತ್ಮಕ ಸುಂಕ ವಿಧಿಸಿದ್ದರು. ಭಾರತ ಇಂಧನ ಖರೀದಿಯಿಂದ ಉಕ್ರೇನ್ ವಿರುದ್ಧ ರಷ್ಯಾ ಸಹಾಯ ಮಾಡುತ್ತಿವೆ ಎಂದು ಅಮೆರಿಕ ಆಡಳಿತ ಹೇಳಿತ್ತು.

ಕಳೆದ ತಿಂಗಳು ಅಮೆರಿಕ ಮತ್ತು ಭಾರತ, ವ್ಯಾಪಾರದ ಮೇಲಿನ ಮಧ್ಯಂತರ ಒಪ್ಪಂದಕ್ಕೆ ಒಂದು ಚೌಕಟ್ಟನ್ನು ತಲುಪಿರುವುದಾಗಿ ಘೋಷಿಸಿದ್ದವು. ಜೊತೆಗೆ ಮಾಸ್ಕೋದಿಂದ ಇಂಧನ ಆಮದು ಮಾಡಿಕೊಳ್ಳುವುದನ್ನು ನಿಲ್ಲಿಸಲು ಮತ್ತು ಅಮೆರಿಕದ ಇಂಧನ ಉತ್ಪನ್ನಗಳ ಖರೀದಿಯನ್ನು ಹೆಚ್ಚಿಸಲು ಭಾರತದ ಬದ್ಧತೆ ಗಮನಿಸಿ ಟ್ರಂಪ್ ಭಾರತದ ಮೇಲಿನ ಶೇಕಡಾ 25 ರಷ್ಟು ದಂಡನಾತ್ಮಕ ಸುಂಕ ತೆಗೆದುಹಾಕಿ ಆದೇಶ ಹೊರಡಿಸಿದ್ದರು. 'ಮಾರ್ಚ್ 5, 2026 ರಂತೆ ಹಡಗುಗಳಲ್ಲಿ ಲೋಡ್ ಮಾಡಲಾದ ರಷ್ಯಾ ಒಕ್ಕೂಟದ ಕಚ್ಚಾ ತೈಲ ಮತ್ತು ಪೆಟ್ರೋಲಿಯಂ ಉತ್ಪನ್ನಗಳನ್ನು ಭಾರತಕ್ಕೆ ತಲುಪಿಸಲು ಮತ್ತು ಮಾರಾಟ ಮಾಡಲು ಅಧಿಕಾರ ನೀಡುವುದು' ಎಂಬ ಶೀರ್ಷಿಕೆಯ ಹೇಳಿಕೆಯಲ್ಲಿ, ರಷ್ಯಾದ ಕಚ್ಚಾ ತೈಲ ಮತ್ತು ಪೆಟ್ರೋಲಿಯಂ ಉತ್ಪನ್ನ ಗಳನ್ನು ಈಗಾಗಲೇ ಹಡಗುಗಳಲ್ಲಿ ಸಾಗಿಸಲಾಗಿದ್ದು, ಮಾರ್ಚ್ 5 ರಿಂದ ಏಪ್ರಿಲ್ 4 ರವರೆಗೆ ಭಾರತದಲ್ಲಿ ಇಳಿಸಬಹುದು ಎಂದು ಖಜಾನೆ ಇಲಾಖೆ ತಿಳಿಸಿದೆ.

# ಬೇಸಿಗೆ ಬಂತೆಂದರೆ ಊರಿಗೆ ಊರೇ ಖಾಲಿ: ಗೋವಾ–ಕೇರಳಕ್ಕೆ ಗದಗ ಜನರ ವಲಸೆ, ಕಾರಣ...

ಗದಗ: ಕರ್ನಾಟಕದ ಉತ್ತರ ಭಾಗದ ಗದಗ ಜಿಲ್ಲೆಯಲ್ಲಿ ಪ್ರತಿವರ್ಷ ಬೇಸಿಗೆ ಆರಂಭವಾಗುತ್ತಿದ್ದಂತೆ ಊರಿಗೆ ಊರೇ ಖಾಲಿಯಾಗುತ್ತದೆ. ಬೇಸಿಗೆ ವೇಳೆ ಗ್ರಾಮದ ಜನರು ಗೋವಾ ಮತ್ತು ಕೇರಳಗಳತ್ತ ಮುಖ ಮಾಡುತ್ತಾರೆ. ಇದಕ್ಕೆ ಕಾರಣ ಬೇಸಿಗೆಯಲ್ಲಿ ಗ್ರಾಮಗಳಲ್ಲಿ ಕೃಷಿ ಕೆಲಸಗಳು ಕಡಿಮೆಯಾಗುವುದು. ಹೀಗಾಗಿ ನೂರಾರು ಮಂದಿ ಉದ್ಯೋಗಕ್ಕಾಗಿ ಗೋವಾ ಮತ್ತು ಕೇರಳದತ್ತ ವಲಸೆ ಹೋಗುತ್ತಾರೆ.

ಈ ವಲಸೆ ಈಗ ಗ್ರಾಮೀಣ ಬದುಕಿನ ಒಂದು ಭಾಗವಾಗಿಬಿಟ್ಟಿದೆ. ಗದಗ ಜಿಲ್ಲೆಯಲ್ಲಿ ಬಹುತೇಕ ಗ್ರಾಮೀಣ ಪ್ರದೇಶಗಳು ಮಳೆ ಆಧಾರಿತ ಕೃಷಿಯ ಮೇಲೆ ಅವಲಂಬಿತವಾಗಿವೆ. ಮಳೆಯ ಅವಧಿಯಲ್ಲಿ ಮಾತ್ರ ಕೃಷಿ ಕೆಲಸಗಳು ಹೆಚ್ಚಾಗುತ್ತವೆ. ಆದರೆ,ಬೆಳೆ ಕಟಾವು ಮುಗಿದ ನಂತರ ಹಲವಾರು ತಿಂಗಳು ಕೃಷಿ ಕೆಲಸಗಳು ದೊರೆಯುವುದಿಲ್ಲ. ಈ ಕಾರಣದಿಂದ ದಿನಗೂಲಿ ಕಾರ್ಮಿಕರು ಉದ್ಯೋಗಕ್ಕಾಗಿ ಬೇರೆ ಪ್ರದೇಶಗಳಿಗೆ ತೆರಳುವುದು



ಅನಿವಾರ್ಯವಾಗುತ್ತದೆ. ವಿಶೇಷವಾಗಿ ಬೇಸಿಗೆ ತಿಂಗಳುಗಳಲ್ಲಿ ಗ್ರಾಮಗಳಲ್ಲಿ ಉದ್ಯೋಗದ ಅವಕಾಶಗಳು ತುಂಬಾ ಕಡಿಮೆಯಾಗುತ್ತವೆ.

ಗದಗ, ಮುಂಡರಗಿ, ರೋಣ, ಲಕ್ಷ್ಮೇಶ್ವರ ಮತ್ತು ಶಿರಹಟ್ಟಿ ತಾಲ್ಲೂಕುಗಳ ಅನೇಕ ಯುವಕರು ಮತ್ತು ಕಾರ್ಮಿಕರು ಉದ್ಯೋಗಕ್ಕಾಗಿ ಗೋವಾ ಹಾಗೂ ಕೇರಳಕ್ಕೆ ತೆರಳುತ್ತಿದ್ದಾರೆ. ಈ ರಾಜ್ಯಗಳಲ್ಲಿ ಪ್ರವಾಸೋದ್ಯಮ, ಹೋಟೆಲ್, ನಿರ್ಮಾಣ ಮತ್ತು ಸಮುದ್ರ ತೀರ ಪ್ರದೇಶಗಳಲ್ಲಿ ವಿವಿಧ ತಾತ್ಕಾಲಿಕ ಕೆಲಸಗಳು ಲಭ್ಯವಾಗುತ್ತವೆ. ವಿಶೇಷವಾಗಿ ಗೋವಾ ಮತ್ತು ಕೇರಳದ ಬೀಚ್ ಪ್ರದೇಶಗಳಲ್ಲಿ ಈ ಕಾರ್ಮಿಕರಿಗೆ ಕೆಲಸ ಸಿಗುವುದು ಸುಲಭವಾಗುತ್ತದೆ. ಪಾಪನಾಶಿ, ಕಬಲಾಯತ್ಕಟ್ಟಿ, ಅದವಿ ಸೋಮಾಪುರ ಮತ್ತು ಅಟ್ಟಿಕಟ್ಟಿ ಗ್ರಾಮಗಳಲ್ಲಿ ಈ ದಿನಗಳಲ್ಲಿ ಜನರ ಸಂಚಾರ ಕಡಿಮೆಯಾಗಿರುತ್ತದೆ. ಹಲವಾರು ಕುಟುಂಬಗಳ ಸದಸ್ಯರು ಉದ್ಯೋಗಕ್ಕಾಗಿ ಹೊರರಾಜ್ಯಗಳಿಗೆ ತೆರಳಿರುವುದರಿಂದ ಗ್ರಾಮಗಳು ಬಹುತೇಕ ನಿರ್ಜನವಾಗಿ ಕಾಣಿಸುತ್ತವೆ.

ಕೆಲವರು ಹಿರಿಯರು ಮಾತ್ರ ಊರಿನಲ್ಲಿ ಉಳಿಯುತ್ತಾರೆ. ಇನ್ನೂ ಕೆಲವರು ಮಕ್ಕಳ ಪರೀಕ್ಷೆಗಳ ಕಾರಣದಿಂದ ಸಮೀಪದ ಪಟ್ಟಣಗಳಿಗೆ ತೆರಳುತ್ತಾರೆ. ಕಬಲಾಯತ್ಕಟ್ಟಿ ಗ್ರಾಮದ ನಿವಾಸಿ ರವಿರಾಜ್ ದೊಡ್ಡಮನಿ ಮಾತನಾಡಿ, "ಯುವಕರು, ಮಹಿಳೆಯರು ಹಾಗೂ ಮಧ್ಯವಯಸ್ಕರು ಉದ್ಯೋಗಕ್ಕಾಗಿ ನಗರಗಳು ಮತ್ತು ನೆರೆರಾಜ್ಯಗಳಿಗೆ ತೆರಳುತ್ತಿದ್ದಾರೆ. ಎರಡು ಮೂರು ತಿಂಗಳು ಉತ್ತಮ ಆದಾಯ ಗಳಿಸಿ ನಂತರ ಊರಿಗೆ ಮರಳಿ ಕುಟುಂಬದವರ ಜೊತೆ ಸಮಯ ಕಳೆಯುತ್ತಾರೆ ಎಂದು ಹೇಳಿದ್ದಾರೆ. ಗದಗ ಸೇರಿದಂತೆ ಉತ್ತರ ಕರ್ನಾಟಕದ ಅನೇಕ ಜಿಲ್ಲೆಗಳಲ್ಲಿ ಈ ವಲಸೆ ಸಮಸ್ಯೆ ಸಾಮಾನ್ಯವಾಗಿದ್ದು, ಗ್ರಾಮೀಣ ಪ್ರದೇಶಗಳಲ್ಲಿ ಉದ್ಯೋಗಾವಕಾಶಗಳು ಹೆಚ್ಚಾದರೆ ಮಾತ್ರ ಈ ವಲಸೆ ಕಡಿಮೆಯಾಗಬಹುದು ಎಂಬುದು ತಜ್ಞರ ಅಭಿಪ್ರಾಯವಾಗಿದೆ.


# ಬೆಂಗಳೂರು ಕಾಲೇಜುಗಳಲ್ಲಿ ಡ್ರಗ್ಸ್ ತಪಾಸಣೆ: 31 ವಿದ್ಯಾರ್ಥಿಗಳ ರಿಪೋರ್ಟ್ ಪಾಸಿಟಿವ್

ಬೆಂಗಳೂರು: ರಾಜ್ಯ ಪೊಲೀಸರು ಆರಂಭಿಸಿರುವ 'ಸನ್ಮಿತ್ರ' ಅಭಿಯಾನದಡಿ ಪಶ್ಚಿಮ ಬೆಂಗಳೂರು ವಿಭಾಗದ ವಿವಿಧ ಶಿಕ್ಷಣ ಸಂಸ್ಥೆಗಳಲ್ಲಿ ನಡೆಸಿದ ಡ್ರಗ್ ತಪಾಸಣೆಯಲ್ಲಿ 31 ವಿದ್ಯಾರ್ಥಿಗಳು ಮಾದಕವಸ್ತು ಸೇವಿಸಿರುವುದು ದೃಢಪಟ್ಟಿದೆ.

ನಗರದ ಪಶ್ಚಿಮ ವಿಭಾಗದ ವಿಜಯನಗರ ಉಪವಿಭಾಗದ ಆರು ಶಿಕ್ಷಣ ಸಂಸ್ಥೆಗಳು ಮತ್ತು ಎರಡು ಹಾಸ್ಟೆಲ್‌ಗಳಲ್ಲಿ ಪೊಲೀಸರು ನಡೆಸಿದ ಡ್ರಗ್ಸ್ ಪರೀಕ್ಷೆಯಲ್ಲಿ 31 ವಿದ್ಯಾರ್ಥಿಗಳ ರಿಪೋರ್ಟ್ ಪಾಸಿಟಿವ್ ಬಂದಿದೆ ಎಂದು ತಿಳಿದುಬಂದಿದೆ. 'ಸನ್ಮಿತ್ರ' ಯೋಜನೆಯಡಿ ಯುವಕರಲ್ಲಿ ಹೆಚ್ಚುತ್ತಿರುವ ಮಾದಕ ವಸ್ತು ಬಳಕೆಯನ್ನು ತಡೆಯುವ ಉದ್ದೇಶದಿಂದ ಈ ತಪಾಸಣೆ ನಡೆಸಲಾಗಿದೆ.

ಈ ಕಾರ್ಯಾಚರಣೆಯ ಭಾಗವಾಗಿ ವಿಜಯನಗರ ಉಪವಿಭಾಗದ ಆರು ಶಿಕ್ಷಣ ಸಂಸ್ಥೆಗಳು ಹಾಗೂ ಎರಡು ಹಾಸ್ಟೆಲ್‌ಗಳಲ್ಲಿ ಮಾದಕ ವಸ್ತು ಸೇವನೆಗೆ ಸಂಬಂಧಿಸಿದಂತೆ ಪರಿಶೀಲನೆ ನಡೆಸಲಾಗಿದೆ. 1,200ಕ್ಕೂ ಹೆಚ್ಚು ವಿದ್ಯಾರ್ಥಿಗಳಿಂದ ಮೂತ್ರ ಮಾದರಿಗಳನ್ನು ಸಂಗ್ರಹಿಸಲಾಗಿದ್ದು, ಅವುಗಳಲ್ಲಿ ಯಾದೃಚ್ಛಿಕವಾಗಿ 585 ಮಾದರಿಗಳನ್ನು ಪರೀಕ್ಷೆಗೊಳಪಡಿಸಲಾಯಿತು. ಇದರಲ್ಲಿ 31 ಮಾದರಿಗಳು ಪಾಸಿಟಿವ್ ಬಂದಿದೆ ಎಂದು ತಿಳಿದುಬಂದಿದೆ.

ಕಾಲೇಜು ಆಡಳಿತದ ಅನುಮತಿ ಮತ್ತು ಎನ್‌ಒಸಿ




ಪಡೆದು ಈ ತಪಾಸಣೆ ನಡೆಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಪಶ್ಚಿಮ ವಿಭಾಗದ ಡಿಸಿಪಿ ಯತೀಶ್ ಎನ್ ಮಾತನಾಡಿ, ಪಾಸಿಟಿವ್ ಬಂದಿರುವ 31 ವಿದ್ಯಾರ್ಥಿಗಳ ವಿರುದ್ಧ ತಕ್ಷಣ ಯಾವುದೇ ಕಾನೂನು ಕ್ರಮ ಕೈಗೊಂಡಿಲ್ಲ. ಬದಲಾಗಿ ಅವರಿಂದ ಮಾಹಿತಿ ಸಂಗ್ರಹಿಸಿ ಕೌನ್ಸೆಲಿಂಗ್ ನೀಡಲಾಗುತ್ತದೆ ಎಂದು ಹೇಳಿದ್ದಾರೆ. ಯುವಕರು ತಪ್ಪು ದಾರಿಯಲ್ಲಿ ಹೋಗದಂತೆ ತಡೆಯುವುದು ಹಾಗೂ ಮಾರ್ಗದರ್ಶನ ನೀಡುವುದು ಈ ಯೋಜನೆಯ ಉದ್ದೇಶವಾಗಿದೆ. ಮುಂದಿನ ದಿನಗಳಲ್ಲಿ ಪಶ್ಚಿಮ ವಿಭಾಗದ ಇತರ ಉಪ ವಿಭಾಗ ಗಳಲ್ಲಿಯೂ ಇದೇ ರೀತಿಯ ತಪಾಸಣೆ ಮುಂದುವರಿಸಲಾಗುತ್ತದೆ ಎಂದು ತಿಳಿಸಿದ್ದಾರೆ.

# ದಾವಣಗೆರೆ ಬಿಜೆಪಿಯಲ್ಲಿ ನಿಲ್ಲದ ಬಣ ಬಡಿದಾಟ: ನಾಯಕರ ನಡುವೆ ಮೂಡದ ಒಮ್ಮತ: ಸಂಧಾನ ಸಭೆ ವಿಫಲ

ದಾವಣಗೆರೆ: ದಾವಣಗೆರೆ ಜಿಲ್ಲಾ ಘಟಕದೊಳಗಿನ ಭಿನ್ನಾಭಿಪ್ರಾಯಗಳನ್ನು ಬಗೆ ಹರಿಸಲು ಗುರುವಾರ ರಾಜ್ಯ ಬಿಜೆಪಿ ಬಣಗಳನ್ನು ಭೇಟಿಯಾದರು.

ಆದರೆ ಯಾವುದೇ ಒಮ್ಮತ ಮೂಡದ ಕಾರಣ, ಘಟಕದೊಳಗಿನ ಭಿನ್ನಾಭಿಪ್ರಾಯಗಳನ್ನು



ನಾಯಕರು ನಡೆಸಿದ ಸಭೆ ಯಶಸ್ವಿಯಾಗದೇ ಅಪೂರ್ಣವಾಗಿಯೇ ಉಳಿಯಿತು. ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಮತ್ತು ಪಕ್ಷದ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಮತ್ತು ಕರ್ನಾಟಕದ ಉಸ್ತುವಾರಿ ರಾಧಾ ಮೋಹನ್ ಅಗರ್ವಾಲ್ ಅವರು ರೇಣುಕಾಚಾರ್ಯ ಮತ್ತು ಜಿ.ಎಂ. ಸಿದ್ದೇಶ್ವರ ನೇತೃತ್ವದ ಆದಷ್ಟು ಬೇಗ ಪರಿಹರಿಸುವ ಭರವಸೆಯೊಂದಿಗೆ ಸಭೆ ಕೊನೆಗೊಂಡಿತು. ಎರಡೂ ಬಣಗಳ ಕೆಲವು ನಾಯಕರು ಭವಿಷ್ಯದಲ್ಲಿ ಚುನಾವಣೆಯಲ್ಲಿ ಸ್ಪರ್ಧಿಸಲು ಪಕ್ಷದ ಟಿಕೆಟ್‌ಗಳನ್ನು ಕೋರಿದರು. ಅವರಿಗೆ ಯಾವುದೇ ಭರವಸೆಗಳನ್ನು ನೀಡಲಾಗಿಲ್ಲ.

2023ರ ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧಿಸಿದ್ದ ಶಿವಕುಮಾರ್, ಮದಲ್ ಕುಟುಂಬವು ಪಕ್ಷಕ್ಕೆ ಮರಳಿದಾಗ ಚುನಾವಣೆಯ ನಂತರ ತಮ್ಮನ್ನು ಪಕ್ಷದಿಂದ ಹೊರಗಿಡಲಾಗಿದೆಯೇ ಎಂದು ವಿಜಯೇಂದ್ರ ಅವರನ್ನು ಪ್ರಶ್ನಿಸಿದ್ದಾರೆ ಎಂದು ಮೂಲಗಳು ಟಿಎನ್‌ಐಇಗೆ ತಿಳಿಸಿವೆ. ಪರಿಸ್ಥಿತಿ ಹೀಗಿದ್ದರೆ, ಪಕ್ಷವು ಎರಡನೇ ಮತ್ತು ಮೂರನೇ ಹಂತದ ನಾಯಕತ್ವವನ್ನು ಹೇಗೆ ಬೆಳೆಸಿಕೊಳ್ಳಬಹುದು" ಎಂದು ಶಿವಕುಮಾರ್ ಪ್ರಶ್ನಿಸಿದ್ದಾರೆ ಎಂದು ತಿಳಿದು ಬಂದಿದೆ. ಎರಡು ವರ್ಷಗಳ ಕಾಲ ಜಿಲ್ಲಾ ಮಟ್ಟದಲ್ಲಿ ಪಕ್ಷ ಸಂಘಟಿಸಲು ರಾಜ್ಯ ನಾಯಕತ್ವವು ಅವಕಾಶ ನೀಡಬೇಕೆಂದು ಶಿವಕುಮಾರ್ ಒತ್ತಾಯಿಸಿದರು ಎಂದು ಮೂಲಗಳು ತಿಳಿಸಿವೆ. ಇಲ್ಲಿ ಟಿಕೆಟ್ ಅಂತಿಮಗೊಳಿಸುವ ಮೊದಲು ಅವರ ಜನಪ್ರಿಯತೆಯನ್ನು ತಿಳಿಯಲು ಪಕ್ಷವು ಸಮೀಕ್ಷೆ ನಡೆಸಬೇಕು. ಒಂದು ಕುಟುಂಬವು 20 ವರ್ಷಗಳಿಂದ ಚನ್ನಗಿರಿಯಲ್ಲಿ ಬಿಜೆಪಿಯನ್ನು ನಿಯಂತ್ರಿಸುತ್ತಿದೆ ಎಂದು ಅವರು ಆರೋಪಿಸಿದ್ದಾರೆ.

ಬಿಜೆಪಿ ರಾಷ್ಟ್ರೀಯ ಕಾರ್ಯಕಾರಿ ಸಮಿತಿಯ ಸದಸ್ಯರಾಗಿರುವ ಬಿ.ಎಸ್. ಯಡಿಯೂರಪ್ಪ ಅವರಂತಹ ಉನ್ನತ ನಾಯಕರು ಪಕ್ಷದ ಹೈ ಕಮಾಂಡ್ ನಿಂದ ಯಾವುದೇ ಅನುಮತಿ ಪಡೆಯದೆ ಸಾರ್ವಜನಿಕ ಕಾರ್ಯಕ್ರಮಗಳಲ್ಲಿ ಟಿಕೆಟ್ ಘೋಷಿಸುವ ಬಗ್ಗೆ ಅನೇಕ ಟಿಕೆಟ್ ಆಕಾಂಕ್ಷಿಗಳು ಕಳವಳ ವ್ಯಕ್ತಪಡಿಸಿದ್ದಾರೆ ಎಂದು ಸಿದ್ದೇಶ್ವರ ಹೇಳಿದರು. ಇದು ಕೊನೆಗೊಳ್ಳಬೇಕು, ಇಲ್ಲದಿದ್ದರೆ ಪಕ್ಷ ಕಟ್ಟುವ ಕಾರ್ಯದ ಮೇಲೆ ಪರಿಣಾಮ ಬೀರುತ್ತದೆ ಎಂದು ಅವರು ಹೇಳಿದರು. ಪಕ್ಷದ ನಾಯಕ ಬಿ.ಎಸ್ ಯಡಿಯೂರಪ್ಪ ಅವರು ಈಗಾಗಲೇ ಮುಂದಿನ ಚುನಾವಣೆಗೆ ದಾವಣಗೆರೆ ಜಿಲ್ಲೆಯ ಎಲ್ಲಾ ಕ್ಷೇತ್ರಗಳಿಗೂ ಟಿಕೆಟ್ ಘೋಷಣೆ ಮಾಡಿದ್ದು, ಜಿಎಂ ಸಿದ್ದೇಶ್ವರ್ ಬಣದ ಕಣ್ಣು ಕೆಂಪಗಾಗಿಸಿದೆ.

# ಬೆಳಗಾವಿ ವಿಮಾನ ನಿಲ್ದಾಣಕ್ಕೆ ರೆಡ್ ಝೋನ್ ಘೋಷಣೆ: 8 ಕಿ.ಮೀ ಸುತ್ತಮುತ್ತ ಡ್ರೋನ್ ಹಾರಿಸದಂತೆ ಆದೇಶ

ಬೆಳಗಾವಿ: ಇರಾನ್ ವಿರುದ್ಧ ಅಮೆರಿಕ ಮತ್ತು ಇಸ್ರೇಲ್ ಜಂಟಿಯಾಗಿ ಯುದ್ಧ ನಡೆಸುತ್ತಿರುವ ಹಿನ್ನೆಲೆಯಲ್ಲಿ ಮಧ್ಯಪ್ರಾಚ್ಯ ದೇಶಗಳಲ್ಲಿ ಉದ್ವಿಗ್ನತೆ ಉಂಟಾಗಿದೆ.




ಇದರ ಬಿಸಿ ಭಾರತಕ್ಕೂ ತಟ್ಟಿದ್ದು, ದೇಶದ ವಿಮಾನ ನಿಲ್ದಾಣಗಳ ಮೇಲೆ ಹದ್ದಿನ ಕಣ್ಣಿಡಲಾಗಿದೆ.

ಬೆಳಗಾವಿ ಸಾಂಬ್ರಾ ವಿಮಾನ ನಿಲ್ದಾಣವನ್ನು 'ರೆಡ್ ಝೋನ್' ಎಂದು ಘೋಷಿಸಲಾಗಿದೆ. ಇಸ್ರೇಲ್, ಇರಾನ್, ಅಮೆರಿಕ ಯುದ್ಧದಿಂದಾಗಿ ಮಧ್ಯಪ್ರಾಚ್ಯದಲ್ಲಿ ಉಂಟಾಗಿರುವ ಪರಿಸ್ಥಿತಿಯನ್ನು ಗಮನದಲ್ಲಿಟ್ಟು ಕೊಂಡು, ಬೆಳಗಾವಿಯ ಸಾಂಬ್ರಾ ವಿಮಾನ ನಿಲ್ದಾಣದ ಸುತ್ತಮುತ್ತಲಿನ 8 ಕಿಲೋಮೀಟರ್ ವ್ಯಾಪ್ತಿಯನ್ನು 'ರೆಡ್ ರ್ಝೋನ್' ಎಂದು ನಾಗರಿಕ ವಿಮಾನಯಾನ ಮಹಾನಿರ್ದೇಶಕರು (DGCA) ಘೋಷಿಸಿದ್ದಾರೆ.

ಈ ಸಂಬಂಧ ಆದೇಶ ಹೊರಡಿಸಿರುವ ನಗರ ಪೊಲೀಸ್ ಆಯುಕ್ತ ಭೂಷಣ ಬೊರಸೆ ಅವರು, ಸಾಂಬ್ರಾ ವಿಮಾನ ನಿಲ್ದಾಣ ಸುತ್ತಮುತ್ತ 8 ಕಿ.ಮೀ. ವ್ಯಾಪ್ತಿಯಲ್ಲಿ ಯಾವುದೇ ರೀತಿ ಡ್ರೋನ್ Unmanned Aerial Vehicle (UAV/Drone) ಹಾರಾಟವನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ. 'ರೆಡ್ ರ್ಝೋನ್' ಅಥವಾ 'ಎಲ್ಲೋ ರ್ಝೋನ್' ಘೋಷಿಸಿದಾಗ ಯಾವುದೇ ಕಾರಣಕ್ಕೂ ವಿಮಾನ ನಿಲ್ದಾಣ ಸುತ್ತಮುತ್ತ 8 ಕಿ.ಮೀ. ವ್ಯಾಪ್ತಿಯಲ್ಲಿ ಡ್ರೋನ್ ಅಥವಾ ಅನ್‌ಮ್ಯಾನಡ್ ಏರಿಯಲ್ ವಾಹನಗಳ ಹಾರಾಟ ಮಾಡುವಂತಿಲ್ಲ. ಈ ಆದೇಶ ಉಲ್ಲಂಘಿಸಿದವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

ಪತ್ರಿಕಾ ಪ್ರಕಟಣೆ ಮೂಲಕ ಸಾರ್ವಜನಿಕರಿಗೆ ಎಚ್ಚರಿಕೆ ನೀಡಿರುವ ಭೂಷಣ ಬೊರಸೆ ಅವರು, ವಿಮಾನ ನಿಲ್ದಾಣದ ಭದ್ರತೆ ದೃಷ್ಟಿಯಿಂದ ಈ ಕ್ರಮ ಅತ್ಯಾವಶ್ಯಕವಾಗಿದೆ. ಪ್ರಸ್ತುತ ಜಾಗತಿಕ ಪರಿಸ್ಥಿತಿಯನ್ನು ಗಮನದಲ್ಲಿಟ್ಟು ಕೊಂಡು ಭದ್ರತಾ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಲಾಗಿದೆ. ಸಾರ್ವಜನಿಕರು ಸಹಕರಿಸುವಂತೆ ತಿಳಿಸಿದ್ದಾರೆ. ಅಮೆರಿಕ ಮತ್ತು ಇಸ್ರೇಲಿ ದಾಳಿಯಿಂದ ಇರಾನ್‌ನಲ್ಲಿ ಇದುವರೆಗೆ ಸಾವಿನ ಸಂಖ್ಯೆ 1,230 ಕ್ಕೆ ಏರಿಕೆಯಾಗಿದೆ ಎಂದು ಇರಾನ್‌ನ ತಸ್ನಿಮ್ ಸುದ್ದಿ ಸಂಸ್ಥೆ ವರದಿ ಮಾಡಿದೆ.

# ಒಳಮೀಸಲಾತಿ ಜಾರಿಗೆ ಇಂದು ದಾವಣಗೆರೆ ಬಂದ್‌ಗೆ ಕರೆ: ಬಿಗಿ ಪೊಲೀಸ್ ಬಂದೋಬಸ್ತ್

ದಾವಣಗೆರೆ: ಒಳಮೀಸಲಾತಿ ಜಾರಿಗಾಗಿ ಇಂದು ಜಿಲ್ಲಾ ಮಾದಿಗ ಸಮುದಾಯದಿಂದ ಹಾಗೂ ದಲಿತ ಪರ ಸಂಘಟನೆಗಳಿಂದ ದಾವಣಗೆರೆ ಬಂದ್‌ಗೆ ಕರೆ ನೀಡಲಾಗಿದೆ. ಬೆಳಗ್ಗೆ 6 ಗಂಟೆ ಯಿಂದ ಸಂಜೆ 6 ಗಂಟೆಯವರೆಗೂ ಬಂದ್‌ಗೆ ಕರೆ ನೀಡಿರುವ ಮಾದಿಗ ಸಮುದಾಯದ ಮುಖಂಡರು ಒಳ ಮೀಸಲಾತಿ ಜಾರಿಗೆ ಪಟ್ಟು ಹಿಡಿದಿದ್ದಾರೆ. ತಕ್ಷಣ ಒಳ ಮೀಸಲಾತಿ ಜಾರಿಗೊಳಿಸಿ ಸರ್ಕಾರಿ ಹುದ್ದೆ ಭರ್ತಿ ಮಾಡಿ ಎಂದು ಒತ್ತಾಯಿಸಿ ಇಂದು ಅಂಗಡಿ ಮುಗ್ಗಟ್ಟು ಮುಚ್ಚುವಂತೆ ಮನವಿ ಮಾಡಿದರು.

ರಾಜ್ಯಪಾಲರ ಅಂಕಿತವಾದರೂ ಒಳ ಮೀಸಲಾತಿ ಜಾರಿಗೊಳಿಸಲು ರಾಜ್ಯ ಸರ್ಕಾರ ಮೀನಾಮೇಷ ಎಣಿಸುತ್ತಿದ್ದು, ಕೂಡಲೇ ಒಳ ಮೀಸಲಾತಿ ಜಾರಿಗೊಳಿಸಿ ಎಂದು ಆಕ್ರೋಶ ಹೊರ ಹಾಕಿದರು. ಇಡೀ ನಗರದಲ್ಲಿ ಸಂಚರಿಸಿ ಬಂದ್‌ಗೆ ಸಹಕರಿಸುವಂತೆ ಒತ್ತಾಯಿಸಲಾಯಿತು. ಯಾವುದೇ ಅಹಿತಕರ ಘಟನೆ ನಡೆಯದಂತೆ ಮುಂಜಾಗ್ರತ ಕ್ರಮವಾಗಿ ಪೊಲೀಸರು ಸೂಕ್ತ ಭದ್ರತೆ ವಹಿಸಿದ್ದಾರೆ. ಇನ್ನು ದಲಿತ ಮುಖಂಡರಿಂದ ದಾವಣಗೆರೆ ನಗರದಲ್ಲಿ ಬೈಕ್ ರ್‍ಯಾಲಿ ನಡೆಸಿ, ಅಂಗಡಿ ಮುಗಟ್ಟುಗಳು ಮುಚ್ಚಿ ಬೆಂಬಲ ನೀಡುವಂತೆ ಅಂಗಡಿ ಮಾಲೀಕರಿಗೆ ಮನವಿ ಮಾಡಿದರು. ಆಟೋ ಬಸ್‌ಗಳನ್ನು ನಿಲ್ಲಿಸಿ ಬಂದ್ ಬೆಂಬಲಿಸುವಂತೆ ಮನವಿ ಮಾಡಿದರು. ಟಯರ್‌ಗೆ ಬೆಂಕಿ ಹಚ್ಚಿ ರಾಜ್ಯ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿ ಒಳಮೀಸಲಾತಿ ಜಾರಿಗೊಳಿಸುವಂತೆ ಒತ್ತಾಯಿಸಿದರು.

ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಬಳಿ ನೂರಾರು ಮಾದಿಗ ಸಮಾಜದ ಮುಖಂಡರು ರಸ್ತೆಗೆ ಅಡ್ಡ ಮಲಗಿ ಆಕ್ರೋಶ ವ್ಯಕ್ತಪಡಿಸಿದರು. ಒಳಮೀಸಲಾತಿ



ಕೊಡಿ, ಕುರ್ಚಿ ಖಾಲಿ ಮಾಡಿ, ಇಲ್ಲ ವಿಷ ಕೊಡಿ ಎಂದು ರಸ್ತೆಯಲ್ಲಿ ಕೂತು ಹೋರಾಟ ಮಾಡಿದರು. ಎಸ್ಪಿ ಶೇಖರ್ ಹೆಚ್.ಟಿ. ಹಾಗೂ ಎಎಸ್ಪಿ ಪರಮೇಶ್ವರ್ ಹೆಗಡೆ ಅವರು ನಗರದೆಲ್ಲೆಡೆ ಸಂಚರಿಸಿ, ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ ಪರಿಶೀಲನೆ ಮಾಡುತ್ತಿದ್ದಾರೆ.

ಎಸ್ಪಿ ಶೇಖರ್ ಹೆಚ್.ಟಿ. ಮಾತನಾಡಿ, "ನಗರದಲ್ಲಿ ಸೂಕ್ತ ಬಂದೋಬಸ್ತ್ ಮಾಡಿದ್ದೇವೆ. ಕೆಎಸ್‌ಆರ್‌ಪಿ, ಡಿಎಆರ್ ತುಕಡಿಗಳನ್ನು ನಿಯೋಜನೆ ಮಾಡಲಾಗಿದೆ. ಸಾರ್ವಜನಿಕರಿಗೆ, ವಿದ್ಯಾರ್ಥಿಗಳಿಗೆ ತೊಂದರೆ ಮಾಡದಂತೆ ಸೂಚನೆ ನೀಡಲಾಗಿದೆ. ಸಾರ್ವಜನಿಕ ಆಸ್ತಿ–ಪಾಸ್ತಿಗೆ ಹಾನಿಯಾದರೆ ಕ್ರಮ ತೆಗೆದುಕೊಳ್ಳುತ್ತೇವೆ. ಕೆಎಸ್‌ಆರ್‌ಟಿಸಿ ಬಸ್‌ಗಳನ್ನು ತಡೆಯುತ್ತಿದ್ದಾರೆ ಎಂದು ತಿಳಿದುಬಂದ ಹಿನ್ನೆಲೆ ಸ್ಥಳಕ್ಕೆ ಆಗಮಿಸಿ ಪರಿಸ್ಥಿತಿ ತಿಳಿಗೊಳಿಸಿದ್ದೇವೆ" ಎಂದರು. ಮಾದಿಗ ಸಮಾಜದ ಮುಖಂಡ ಕುಂದುವಾಡ ಮಂಜುನಾಥ್ ಅವರು ಮಾತನಾಡಿ, "ಹಲವು ವರ್ಷಗಳಿಂದ ಒಳ ಮೀಸಲಾತಿ ಜಾರಿ ಮಾಡಿ ಎಂದು ಹೋರಾಟ ಮಾಡ್ತಿದ್ದೇವೆ. ಸಿಎಂ ಸಿದ್ದರಾಮಯ್ಯ ಅವರು ಹಿತ್ತಾಳೆ ಕಿವಿ ಮಾಡಿಕೊಂಡಿದ್ದಾರೆ. ನಮಗೆ ಅಷ್ಟೇ ಮೀಸಲಾತಿ ಜಾರಿ ಮಾಡಿ ಎಂದು ಹೇಳ್ತಿಲ್ಲ, ನಮ್ಮ ಸಹೋದರ ಸಮಾಜಕ್ಕೂ ಮೀಸಲಾತಿ ಜಾರಿ ಮಾಡಿ, ಸಿದ್ದರಾಮಯ್ಯ ಅವರು ನಮ್ಮ ಸರ್ಕಾರ ಜಾರಿಗೆ ಬಂದರೆ ಒಳಮೀಸಲಾತಿ ಕೊಡುತ್ತೇವೆ ಎಂದಿದ್ದರು. ಸರ್ಕಾರ ಜಾರಿಯಾಗಿ ಮೂರು ವರ್ಷ ಆಗ್ತಾ ಬಂದಿದೆ. ಇನ್ನು ನಮಗೆ ನೀಡಿದ ಆಶ್ವಾಸನೆ ಈಡೇರಿಲ್ಲ" ಎಂದು ಆಕ್ರೋಶ ವ್ಯಕ್ತಪಡಿಸಿದರು.

# ರಾಜ್ಯ ಬಜೆಟ್‌ನಲ್ಲಿ ಕುಕ್ಕೆ ಸುಬ್ರಹ್ಮಣ್ಯ, ಕೊಲ್ಲೂರು ಮೂಕಾಂಬಿಕಾ ಕ್ಷೇತ್ರಗಳಿಗೆ ಅಭಿವೃದ್ಧಿ ಪ್ರಾಧಿಕಾರ

ಬೆಂಗಳೂರು/ ಸುಬ್ರಹ್ಮಣ್ಯ: ರಾಜ್ಯದ ಪ್ರಸಿದ್ಧ ಧಾರ್ಮಿಕ ಕ್ಷೇತ್ರಗಳಾದ ಕುಕ್ಕೇ ಸುಬ್ರಮಣ್ಯ ದೇವಸ್ಥಾನ ಹಾಗೂ ಕೊಲ್ಲೂರು ಮೂಕಾಂಬಿಕಾ ದೇವಸ್ಥಾನಗಳ ಸಮಗ್ರ ಅಭಿವೃದ್ಧಿಗಾಗಿ ವಿಶೇಷ ಅಭಿವೃದ್ಧಿ ಪ್ರಾಧಿಕಾರಗಳನ್ನು ರಚಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 2026–27ನೇ ಸಾಲಿನ ರಾಜ್ಯ ಬಜೆಟ್‌ನಲ್ಲಿ ಮಹತ್ವದ ಘೋಷಣೆ ಮಾಡಿದ್ದಾರೆ. ಕರಾವಳಿ ಕರ್ನಾಟಕದ ಪ್ರಮುಖ ಆಧ್ಯಾತ್ಮಿಕ ಕೇಂದ್ರಗಳಾದ ಈ ದೇವಾಲಯಗಳಿಗೆ ವರ್ಷಂಪ್ರತಿ ದೇಶದ ವಿವಿಧ ಭಾಗಗಳಿಂದ ಲಕ್ಷಾಂತರ ಭಕ್ತರು ಆಗಮಿಸುತ್ತಾರೆ. ಹೆಚ್ಚುತ್ತಿರುವ ಭಕ್ತರ ಸಂಖ್ಯೆಯನ್ನು ಗಮನದಲ್ಲಿಟ್ಟುಕೊಂಡು ಮೂಲಸೌಕರ್ಯ ಅಭಿವೃದ್ಧಿ ಹಾಗೂ ಭಕ್ತರ ಸೌಲಭ್ಯಗಳನ್ನು ವಿಸ್ತರಿಸುವ ಉದ್ದೇಶದಿಂದ ಈ ವಿಶೇಷ ಪ್ರಾಧಿಕಾರಗಳನ್ನು ಸ್ಥಾಪಿಸುವ ನಿರ್ಧಾರ ಕೈಗೊಳ್ಳಲಾಗಿದೆ.

ಪ್ರಸ್ತಾವಿತ ಅಭಿವೃದ್ಧಿ ಪ್ರಾಧಿಕಾರಗಳ ಮೂಲಕ ದೇವಾಲಯಗಳ ಸುತ್ತಮುತ್ತಲಿನ ಪ್ರದೇಶಗಳಲ್ಲಿ ರಸ್ತೆ ಸುಧಾರಣೆ, ಕುಡಿಯುವ ನೀರು, ಸ್ವಚ್ಛತಾ ವ್ಯವಸ್ಥೆ, ವಾಹನ ನಿಲುಗಡೆ ಸ್ಥಳ, ವಸತಿ ಸೌಲಭ್ಯಗಳು ಸೇರಿದಂತೆ ಹಲವು ಮೂಲಸೌಕರ್ಯಗಳನ್ನು ಅಭಿವೃದ್ಧಿ ಪಡಿಸಲು ಯೋಜಿಸಲಾಗಿದೆ.

ಜೊತೆಗೆ ಭಕ್ತರ ಅನುಕೂಲಕ್ಕಾಗಿ ಆಧುನಿಕ ಸರತಿ ಸಾಲು ವ್ಯವಸ್ಥೆ, ಭಕ್ತನಿಲಯಗಳು, ದಾಸೋಹ ಭವನಗಳು ಹಾಗೂ ಯಾತ್ರಿಕರಿಗೆ ಅಗತ್ಯವಿರುವ ಸೌಲಭ್ಯಗಳನ್ನು ಹಂತ ಹಂತವಾಗಿ ನಿರ್ಮಿಸಲು ಉದ್ದೇಶಿಸಲಾಗಿದೆ. ಪಶ್ಚಿಮ ಘಟ್ಟಗಳ ಸಂವೇದನಾಶೀಲ ಪರಿಸರ ವಲಯದಲ್ಲಿರುವ ಕುಕ್ಕೆ ಸುಬ್ರಹ್ಮಣ್ಯ ಕ್ಷೇತ್ರದ ಅಭಿವೃದ್ಧಿ ಕಾರ್ಯಗಳನ್ನು ಪರಿಸರ ಸಮತೋಲನ ಕಾಪಾಡುವ ರೀತಿಯಲ್ಲಿ ಕೈಗೊಳ್ಳಲು ಸರ್ಕಾರ ವಿಶೇಷ ಗಮನ ಹರಿಸಲಿದೆ. ದೇವಾಲಯಗಳ ಸುತ್ತಮುತ್ತ ಪ್ರವಾಸೋದ್ಯಮದ ಅವಕಾಶಗಳನ್ನು ವಿಸ್ತರಿಸುವುದರ ಜೊತೆಗೆ ಸ್ಥಳೀಯ ಅಭಿವೃದ್ಧಿ ಹಾಗೂ ಉದ್ಯೋಗಾವಕಾಶಗಳನ್ನು ಹೆಚ್ಚಿಸುವ ಗುರಿಯೂ ಈ ಯೋಜನೆ ಹೊಂದಿದೆ.

ರಾಜ್ಯದ ಪ್ರಮುಖ ಆಧ್ಯಾತ್ಮಿಕ ಕೇಂದ್ರಗಳ ಅಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ಈ ಮಹತ್ವದ ನಿರ್ಧಾರವನ್ನು ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ಭಕ್ತರು ಹಾಗೂ ಸಾರ್ವಜನಿಕರು ಸ್ವಾಗತಿಸಿದ್ದು, ಈ ಯೋಜನೆಯಿಂದ ಧಾರ್ಮಿಕ ಪ್ರವಾಸೋದ್ಯಮಕ್ಕೆ ಹೊಸ ಚೈತನ್ಯ ದೊರೆಯಲಿದೆ ಎಂಬ ಅಭಿಪ್ರಾಯ ವ್ಯಕ್ತವಾಗಿದೆ. ರಾಜ್ಯದಿಂದ ಶ್ರೀ ಮಾತಾ ವೈಷ್ಣೋದೇವಿ ದೇವಾಲಯಕ್ಕೆ ಯಾತ್ರೆ ಕೈಗೊಳ್ಳುವ ಯಾತ್ರಾರ್ಥಿಗಳಿಗೆ ಸರ್ಕಾರದಿಂದ 5000 ರೂ.ಗಳ ಸಹಾಯಧನವನ್ನು ಡಿಬಿಟಿ ಮೂಲಕ




ವಿತರಿಸಲು ಉದ್ದೇಶಿಸಿದ್ದು, ಅದಕ್ಕಾಗಿ 5 ಕೋಟಿ ರೂ. ಅನುದಾನ ಮೀಸಲಿಡಲಾಗಿದೆ. ಹಿಂದೂ ಧಾರ್ಮಿಕ ಹಾಗೂ ದತ್ತಿ ಇಲಾಖೆಯ ದೇವಾಲಯಗಳಿಗೆ ಒಳಪಟ್ಟಿರುವ 259 ಕಲ್ಯಾಣಿಗಳನ್ನು ಮೂರು ವರ್ಷಗಳಲ್ಲಿ ಪುನರುಜ್ಜೀವನಗೊಳಿಸಲು ಜಲ ನಿಧಿ ಕಲ; ಯಾಣಿಗಳ ಪುನಶ್ಚೇತನ ಯೋಜನೆ ಕೈಗೆತ್ತಿಕೊಳ್ಳಲಾಗುತ್ತಿದೆ. ಇದಕ್ಕಾಗಿ 5 ಕೋಟಿ ರೂ. ಮೀಸಲು ಇರಿಸಲಾಗಿದೆ.

# ತಿಪಟೂರಿನಲ್ಲಿ ರಾಶಿ ಪೂಜೆ: ಸಾವಯವ ಕೃಷಿಗೆ ಸಾವಿರಕ್ಕೂ ಹೆಚ್ಚು ರೈತರ ಬೆಂಬಲ

ತಿಪಟೂರು: ಸಾವಯವ ಕೃಷಿಗೆ ಉತ್ತೇಜನ ನೀಡುವ ಉದ್ದೇಶದಿಂದ ಗುರುವಾರ ತಿಪಟೂರಿನಲ್ಲಿ ರೈತರ ಸಮಾವೇಶದ ನಡುವೆ ರಾಶಿ ಪೂಜೆ ಕಾರ್ಯ ಕ್ರಮವನ್ನು ನೆರವೇರಿಸಲಾಯಿತು. ಸಾವಿರಕ್ಕೂ ಹೆಚ್ಚು ರೈತರು



ಕಾರ್ಯಕ್ರಮದಲ್ಲಿ ಭಾಗವಹಿಸಿ ತಮ್ಮ ಬೆಳೆಗಳನ್ನು ದೇವರ ಮುಂದೆ ರಾಶಿಯನ್ನು ಸಾಂಪ್ರದಾಯಿಕವಾಗಿ ಅರ್ಪಿಸಿದರು. ಕಳೆದ ಎರಡು ವರ್ಷಗಳಿಂದ ತಿಪಟೂರಿನ ಭಾಗದ ರೈತರು ಮುದ್ದೆನಹಳ್ಳಿಗೆ ತೆರಳಿ ತಮ್ಮ ಬೆಳೆಗಳ ರಾಶಿ ಪೂಜೆಯನ್ನು ನೆರವೇರಿಸುತ್ತಿದ್ದರು. ಈ ಹಿನ್ನಲೆ ಅವರಿಗೆ ನೀಡಿದ್ದ ಮಾತಿನಂತೆ

ಸದ್ಗುರು ಶ್ರೀ ಮಧುಸೂದನ್ ಸಾಯಿ ಅವರು ಈ ಬಾರಿ ತಿಪಟೂರಿಗೆ ಭೇಟಿ ನೀಡಿ ಕರ್ಯ ಕ್ರಮದಲ್ಲಿ ಪಾಲ್ಗೊಂಡರು. ಈ ಸಂದರ್ಭದಲ್ಲಿ ಮಾತನಾಡಿದ ಸದ್ಗುರು ಶ್ರೀ ಮಧುಸೂದನ್ ಸಾಯಿ ಅವರು ಮಣ್ಣಿನ ಆರೋಗ್ಯವನ್ನು ಕಾಪಾಡುವುದು ದೇಶದ ಭವಿಷ್ಯವನ್ನು ಕಾಪಾಡಿ ದಂತೆ ಎಂದು ಹೇಳಿದರು. ರಾಸಾಯನಿಕ ಕೃಷಿಯಿಂದ ಮಣ್ಣು ಹಾಳುಗುತ್ತಿರುವ ಹಿನ್ನೆಲೆಯಲ್ಲಿ ರೈತರು ಸಾವಯವ ಕೃಷಿಯತ್ತ ಮುಖ ಮಾಡುದು ಅತ್ಯಂತ ಅಗತ್ಯವಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

Edited, Printed, Published & Owned by : ARUN KUMAR K . Printed at: ARUN PRINTERS & PUBLISHERS ", No. 20, Sri Kempamma Nilaya, Kashi Vishwanatha Road, kote Temple, K.R.Puram, Bangalore 560 036. Published at : No. 20, Sri Kempamma Nilaya, Kashi Vishwanatha Road, kote Temple, K.R.Puram, Bangalore 560 036. Editor: ARUN KUMAR K.